**ಸಂಪುಟ: 04 ಸಂಚಿಕೆ: 360 ಪುಟಗಳು: 08 ಗುರುವಾರ 13 ಮಾರ್ಚ್ 2025**

www.udayavahini.in  epaper.udayavahini.in  Udaya vahini news  Udaya vahini news  Udayavahini news youtube  udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696  +91 8035841833  ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಧರ್ಮವು ಜೀವನವನ್ನು ಮತ್ತು ಎಲ್ಲಾ ಆದರ್ಶಗಳನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತದೆ. ಈ ಕಾರಣಕ್ಕಾಗಿ ನಾವು ನಮ್ಮ ಧರ್ಮವನ್ನು ಮೊದಲು ಪಾಲಿಸಬೇಕು.


## ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಅಚ್ಚಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ

**9448225696**

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)

udayavahininews@gmail.com


## ಕೆಪಿಎಸ್‌ಸಿ ಪರೀಕ್ಷೆ ಅವಾಂತರ ಭಾಷಾಂತರಕಾರರು ಕಪ್ಪು ಪಟ್ಟಿಗೆ!

• ಉದಯವಾಹಿನಿ, ಬೆಂಗಳೂರು

ಕೆಪಿಎಸ್‌ಸಿ ಪರೀಕ್ಷೆಯಲ್ಲಿ ನಡೆದ ಅವಾಂತರ ಹಿನ್ನಲೆಯಲ್ಲಿ ಪ್ರಶ್ನೆ ಪತ್ರಿಕೆಯನ್ನು ಇಂಗ್ಲಿಷ್‌ನಿಂದ ಕನ್ನಡಕ್ಕೆ ಭಾಷಾಂತರ ಮಾಡಿದ ಭಾಷಾಂತರಕಾರರು ಕಪ್ಪು ಪಟ್ಟಿಗೆ ಸೇರ್ಪಡೆ ಮಾಡುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಮಹತ್ವದ ಘೋಷಣೆ ಮಾಡಿದ್ದಾರೆ. ವಿಧಾನ ಸಭೆಯಲ್ಲಿ ಪ್ರತಿಪಕ್ಷಗಳ ಆರೋಪಗಳಿಗೆ ಸಿಎಂ ಸಿದ್ದರಾಮಯ್ಯ ಉತ್ತರ ನೀಡಿದರು. ನಿಯಮ 69 ಅಡಿಯಲ್ಲಿ ವಿಧಾನಸಭೆಯಲ್ಲಿ ನಡೆದ ಸುದೀರ್ಘ ಚರ್ಚೆಗೆ ಬುಧವಾರ ಸಿಎಂ ಸಿದ್ದರಾಮಯ್ಯ ಉತ್ತರ ನೀಡಿದರು. ಕೆಪಿಎಸ್‌ಸಿ ಭಾಷಾಂತರಕಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಸೂಚಿಸುತ್ತೇವೆ. ಶಿಸ್ತುಕ್ರಮ, ಕ್ರಿಮಿನಲ್ ಕ್ರಮ ತಗೊಳ್ಳಿ ಅಂತ ಸೂಚಿಸ್ತೇವೆ ಎಂದರು. ಕೆಪಿಎಸ್‌ಸಿ ನಿಯಮಾವಳಿಗಳಲ್ಲಿ ಕೆಲ ಬದಲಾವಣೆ ಮಾಡ್ತಿದ್ದೇವೆ. ಕಾಯ್ದೆಯಲ್ಲಿ ತಿದ್ದುಪಡಿ ತರ್ತಿದ್ದೇವೆ. ಸದ್ಯ ಕೆಇಟಿಯಲ್ಲಿ ಇರುವ ಪ್ರಕರಣದ ತೀರ್ಪು ಬರಬೇಕು. ಮೊದಲು ಕನ್ನಡದಲ್ಲೇ ಪ್ರಶ್ನೆಪತ್ರಿಕೆ ತಯಾರು ಮಾಡಲಿ, ನಂತರ ಇಂಗ್ಲಿಷ್‌ಗೆ ತರ್ಜುಮೆ ಮಾಡಿ ಅಂತ ಕೆಪಿಎಸ್‌ಸಿಗೆ ಹೇಳಿದ್ದೇವೆ ಎಂದರು.

## ಆಸ್ತಿ ಮಾಲೀಕರಿಗೆ ಇ ಖಾತಾ ಸೇವೆ ಕೊಡಿ - ಹಣ ಗಳಿಸಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಆಸ್ತಿದಾರರಿಗೆ ಇ ಖಾತಾ ಪಡೆದುಕೊಳ್ಳುವುದು ಕಡ್ಡಾಯಗೊಳಿಸಲಾಗಿದೆ. ಸದ್ಯ ಆಸ್ತಿದಾರರು ಇ ಖಾತಾಗಾಗಿ ಬಿಬಿಎಂಪಿ ಕಚೇರಿಗಳು, ಆನ್‌ಲೈನ್ ಸೇವಾ ಕೇಂದ್ರಗಳಿಗೆ ಅಲೆದಾಡುತ್ತಿದ್ದಾರೆ. ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಬಿಬಿಎಂಪಿ ಹೊಸ ಆಫರ್ ನೀಡಿದೆ. ಅದೇ ಇ-ಖಾತಾ ಸೇವೆ ಒದಗಿಸಿ ಪ್ರತಿ ಖಾತಾಗೆ 45 ರೂ. ಗಳಿಸಿ ಕಾರ್ಯಕ್ರಮ.

ಕರ್ನಾಟಕ ಸರ್ಕಾರವು ಆಸ್ತಿ ಮಾರಾಟ, ಇತರೆ ವ್ಯವಹಾರ ವಹಿವಾಟುಗಳಲ್ಲಿ ವಂಚನೆಯನ್ನು ತಪ್ಪಿಸುವ ಉದ್ದೇಶದಿಂದ 2024 ರಿಂದ ಇ ಖಾತಾ ಕಡ್ಡಾಯ ಮಾಡಿದೆ.

# ಗದ್ದಲ ಜೋರು ರಾಜ್ಯಪಾಲರಿಗೆ ದೂರು

**• ರಾಜ್ಯಪಾಲರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಬಿಜೆಪಿ-ಜೆಡಿಎಸ್ ನಿಯೋಗ • ಗ್ಯಾರಂಟಿ ಸಮಿತಿ ಗದ್ದಲಕ್ಕೆ 2ನೇ ದಿನವೂ ವಿಧಾನಸಭೆ ಕಲಾಪ ಬಲಿ!**



## ಮುಂದಿನ 5 ವರ್ಷವೂ ನಮ್ಮದೇ ಸರ್ಕಾರ

## CM ಯಾರೆಂಬ ಪ್ರಶ್ನೆಗೆ ಕುತೂಹಲಕಾರಿ ಉತ್ತರ!

**ಗ್ಯಾರಂಟಿ ಅನುಷ್ಠಾನ ಸಮಿತಿಗೆ ಸರ್ಕಾರದ ವೇತನ**

**ಸಮಿತಿ ರದ್ದಿಗೆ ಆಗ್ರಹಿಸಿ ಬಿಜೆಪಿ-ಜೆಡಿಎಸ್ ಪ್ರತಿಭಟನೆ**

**ಅನುಷ್ಠಾನ ಸಮಿತಿ ವಿರುದ್ಧ ಬಿಜೆಪಿ ಕೆಂಡ**

• ಉದಯವಾಹಿನಿ, ಬೆಂಗಳೂರು

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯನ್ನು ರದ್ದು ಮಾಡಬೇಕು ಎಂದು ಆಗ್ರಹಿಸಿ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸದನದ ಒಳಗೂ, ಹೊರಗೂ ನಡೆಸಿರುವ ಹೋರಾಟ ಬಿರುಸಾಗಿದೆ. ವಿಧಾನಸಭೆಯಲ್ಲಿ ಪ್ರತಿಪಕ್ಷಗಳು ಧರಣಿ ನಡೆಸಿದ್ದರಿಂದ ಸುಗಮ ಕಲಾಪ ಸಾಧ್ಯವಾಗದೆ ಸದನವನ್ನು ಮಧ್ಯಾಹ್ನದವರೆಗೂ ಮುಂದೂಡಲಾಯಿತು.

ಈ ವಿಚಾರವನ್ನು ರಾಜ್ಯಪಾಲರ ಅಂಗಳಕ್ಕೂ ಪ್ರತಿಪಕ್ಷಗಳು ಕೊಂಡೊಯ್ದಿವೆ. ಗ್ಯಾರಂಟಿ ಜಾರಿ ಸಮಿತಿ ರದ್ದಿಗೆ ಆಗ್ರಹಿಸಿ ವಿಪಕ್ಷಗಳು ವಿಧಾನಸಭೆಯಲ್ಲಿ ಧರಣಿ ನಡೆಸಿ, ಬಳಿಕ ರಾಜ್ಯಪಾಲರಿಗೆ ದೂರು ಕೊಟ್ಟಿದ್ದಾರೆ. ಬುಧವಾರ ಬೆಳಗ್ಗೆಯೇ ಕಲಾಪ ಆರಂಭಕ್ಕೂ ಮುನ್ನ ವಿಧಾನಸೌಧದ ಕೆಂಗಲ್ ಗೇಟ್ ಬಳಿ ಬಿಜೆಪಿ, ಜೆಡಿಎಸ್ ಶಾಸಕರು ಪ್ರತಿಭಟನೆ ನಡೆಸಿದರು. ನಂತರ ಕಲಾಪದಲ್ಲೂ ಬಾವಿಗಿಳಿದು ಒಟ್ಟಾಗಿ ಧರಣಿ ಮುಂದುವರೆಸಿದರು. ಗ್ಯಾರಂಟಿ ಜಾರಿ ಸಮಿತಿಗಳು ಅಸಾಂವಿಧಾನಿಕ, ರದ್ದು ಮಾಡಬೇಕೆಂದು ಘೋಷಣೆ ಕೂಗುತ್ತಾ ಆಗ್ರಹಿಸಿದರು. ಧರಣಿ ಹಿನ್ನೆಲೆಯಲ್ಲಿ ಕಲಾಪ ಸುಗಮವಾಗಿ ನಡೆಸಲು ಸಾಧ್ಯವಾಗಲಿಲ್ಲ. ಹೀಗಾಗಿ, ಸ್ಪೀಕರ್ ಖಾದರ್ ಅವರು ಕಲಾಪವನ್ನು ಮಧ್ಯಾಹ್ನ 1:45 ಕ್ಕೆ ಮುಂದೂಡಬೇಕಾಯಿತು. ನಂತರ ಬಿಜೆಪಿ, ಜೆಡಿಎಸ್ ಶಾಸಕರು, ಪರಿಷತ್ ಸದಸ್ಯರು ವಿಧಾನಸೌಧದಿಂದ ರಾಜಭವನದ ವರೆಗೆ ನಡಿಗೆ ಮೂಲಕ ಹೊರಟರು. ರಾಜ್ಯಪಾಲರ ಭೇಟಿ ಮಾಡಿ ಸರ್ಕಾರದ ವಿರುದ್ಧ ದೂರು ಕೊಟ್ಟರು.

ಗ್ಯಾರಂಟಿ ಜಾರಿ ಸಮಿತಿಗಳ ಅಧ್ಯಕ್ಷರು, ಸದಸ್ಯರಾಗಿ ಕಾಂಗ್ರೆಸ್ ಕಾರ್ಯಕರ್ತರ ನೇಮಿಸಲಾಗಿದೆ. ಇವರಿಗೆ ಸರ್ಕಾರ ಜನರ ತೆರಿಗೆಯಿಂದ ಒಟ್ಟು ವಾರ್ಷಿಕ 30 ಕೋಟಿ ರೂ. ವೇತನ, ಸವಲತ್ತು ಕೊಡುತ್ತಿದೆ. ಗ್ಯಾರಂಟಿ ಸಮಿತಿಗಳು ಅಸಾಂವಿಧಾನಿಕವಾಗಿದ್ದು, ಶಾಸಕರ ಹಕ್ಕುಗಳು ಮೊಟಕುಗೊಂಡಿವೆ. ಸರ್ಕಾರಕ್ಕೆ ರಾಜ್ಯಪಾಲರು ಈ ಸಮಿತಿಗಳ ರದ್ದಿಗೆ ಸೂಕ್ತ ನಿರ್ದೇಶನ ಕೊಡಬೇಕೆಂದು ವಿಪಕ್ಷಗಳ ನಿಯೋಗ ಮನವಿ ಮಾಡಿದೆ.

**ತನಿಖೆಗೆ ಆಗ್ರಹ**

**ನಟಿ ರನ್ಯಾರಾವ್ ಚಿನ್ನ ಕಳ್ಳ ಸಾಗಣೆ ಪ್ರಕರಣವು ದೊಡ್ಡದಿದೆ. ರನ್ಯಾರಾವ್ 30-40 ಬಾರಿ ವಿದೇಶಕ್ಕೆ ಹೋಗಿ ಬಂದಿದ್ದಾರೆ. ಎಷ್ಟೊಂದು ದೊಡ್ಡ ಪ್ರಮಾಣದ ಹವಾಲಾ ನಡೆದಿರಬಹುದು ಎಂಬುದು ಜಗಜ್ಜಾಹೀರಾಗಿದೆ. ಇದರ ಹಿಂದೆ ಯಾರಿದ್ದಾರೆ ಎಲ್ಲಾದರ ಬಗ್ಗೆಯೂ ತನಿಖೆಯಾಗಬೇಕು ಎಂದು ವಿಜಯೇಂದ್ರ ಹೇಳಿದರು. ಈ ಪ್ರಕರಣದಲ್ಲಿ ಕೆಲವು ಸಚಿವರು ಭಾಗಿಯಾಗಿರುವ ಅನುಮಾನಗಳಿವೆ. ಎಲ್ಲಾದರ ಬಗ್ಗೆಯೂ ತನಿಖೆಯಾಗಲಿ ಎಂದು ಒತ್ತಾಯಿಸಿದರು.**



**ಮುಂದಿನ 5 ವರ್ಷವೂ ನಮ್ಮದೇ ಸರ್ಕಾರ**

**ಈ ಐದು ವರ್ಷ ಅಲ್ಲರೀ, ಮುಂದಿನ ಐದು ವರ್ಷವೂ ನಮ್ಮದೇ ಸರ್ಕಾರ ಎಂದು ಸಿಎಂ ಸಿದ್ದರಾಮಯ್ಯ ಸದನದಲ್ಲಿ ವಿರೋಧ ಪಕ್ಷಗಳಿಗೆ ತಿರುಗೇಟು ನೀಡಿದರು. ಇದೇ ಸಂದರ್ಭದಲ್ಲಿ ಸಿಎಂ ಆಗಿ ನೀವೇ ಇರುತ್ತೀರಾ... ಎಂಬ ಪ್ರಶ್ನೆ ಸಿದ್ದರಾಮಯ್ಯ ನೀಡಿದ ಉತ್ತರ ಕುತೂಹಲಕ್ಕೆ ಕಾರಣವಾಗಿದೆ. ವಿಧಾನಸಭೆಯಲ್ಲಿ ಕಾಂಗ್ರೆಸ್ ಗ್ಯಾರಂಟಿ ಸಮಿತಿ ರದ್ದು ಮಾಡಲು ಆಗ್ರಹಿಸಿ ವಿಪಕ್ಷಗಳ ಧರಣಿ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡುವ ಸಂದರ್ಭದಲ್ಲಿ ಈ ಸ್ವಾರಸ್ಯಕರ ಹಾಗೂ ಕುತೂಹಲಕಾರಿ ಚರ್ಚೆ ನಡೆಯಿತು.ಕಳೆದ ಅವಧಿಯಲ್ಲಿ ಸಿದ್ದರಾಮಯ್ಯ ಅವ್ರು, ಏ..ಅಶೋಕ ಬರೆದುಕೊಳ್ಳಪ್ಪ, ನಾನೇ ಪರ್ಮನೆಂಟು ಅಂದ್ರು. ಆದ್ರೆ ಹಾಗಂದವರು ಕಾಣೆಯಾಗಿ ಹೋದರು, ಕಾಣದಂತೆ ಮಾಯವಾದನೋ ನಮ್ಮ ಶಿವಾ ಎಂಬಂತಾದರು. ಈಗ ಮತ್ತೆ ನಾನೇ ಬರ್ತೀನಿ ಅಂತಿದ್ದಾರೆ. ಆದರೆ, ಸಿದ್ದರಾಮಯ್ಯ ಐದೂ ವರ್ಷ ಪೂರೈಸಲಿ ಅಂತ ನಾವು ಬಯಸ್ತೇವೆ ಎಂದು ಅಶೋಕ್ ಟಾಂಗ್ ಕೊಟ್ಟರು.**

**ಗ್ಯಾರಂಟಿ ನಿಲ್ಲಿಸೊಲ್ಲ ಎಂದ ಡಿಕೆಶಿ**

**ನಾವು ಈ ರಾಜ್ಯದ ಬಡಜನತೆಗೆ, ಮಹಿಳೆಯರಿಗೆ ಅನುಕೂಲವಾಗಲಿ ಎಂದು ಗ್ಯಾರಂಟಿ ಮೂಲಕ ಅನುಕೂಲ ಮಾಡಿಕೊಟ್ಟಿದ್ದೇವೆ. ಹೆಣ್ಣು ಕುಟುಂಬದ ಕಣ್ಣು ಎಂದು ಅವರಿಗೆ ಸಹಾಯ ಮಾಡಿದ್ದೇವೆ. ಒಂದು ಸಮಯದಲ್ಲಿ ವಿಪಕ್ಷಗಳು ನಮ್ಮನ್ನು ಹೆದರಿಸಲು ಪ್ರಯತ್ನಪಟ್ಟವು. ಈ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇರುವ ತನಕ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲು ಸಾಧ್ಯವಿಲ್ಲ. ಇದು ನಮ್ಮ ಬದ್ಧತೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. . ನಮ್ಮ ಜನ ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದರು. ಪ್ರತಿಯೊಂದು ಪದಾರ್ಥಗಳ ಬೆಲೆಯೂ ಹೆಚ್ಚಾಗಿತ್ತು. ಆದ ಕಾರಣಕ್ಕೆ ನಮ್ಮ ಸರ್ಕಾರ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿತು. ಈ ಯೋಜನೆಗಳಿಗೆ ನೂರಾರು ಟೀಕೆ- ಟಿಪ್ಪಣಿಗಳು ಬಂದವು. ಒಂದು ಕಾಳು ಕಡಿಮೆ ಕೊಟ್ಟರೂ ಸಹ ಸುಮ್ಮನಿರುವುದಿಲ್ಲ ಎಂದು ಯಡಿಯೂರಪ್ಪ ಅವರು ಹೇಳಿದರು. ಇದು ಕಾಂಗ್ರೆಸ್ ಸರ್ಕಾರದಿಂದ ಸಾಧ್ಯವೇ ಎಂದರು. ನಾವು ಅಧಿಕಾರಕ್ಕೆ ಬಂದ ಮೊದಲನೇ ದಿನವೇ ಐದು ಗ್ಯಾರಂಟಿಗಳಿಗೆ ಒಪ್ಪಿಗೆ ಕೊಟ್ಟು ಆದೇಶ ಹೊರಡಿಸಿದೆವು ಎಂದು ಹೇಳಿದರು.**

**ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಿಂದ ಶಾಸಕರ ಹಕ್ಕು ಮೊಟಕುಗೊಳಿಸುವ ಹುನ್ನಾರ:** ರಾಜ್ಯದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಿಂದ ಶಾಸಕರ ಹಕ್ಕು ಮೊಟಕುಗೊಳಿಸುವ ಕೆಲಸ ಆಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಆಕ್ಷೇಪಿಸಿದ್ದಾರೆ. ರಾಜ್ಯಪಾಲರನ್ನು ಭೇಟಿ ಮಾಡಿ ಮನವಿ ಸಲ್ಲಿಸಿ, ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದರು. ಬಿಜೆಪಿ- ಜೆಡಿಎಸ್ ನಿಯೋಗವು ರಾಜ್ಯಪಾಲರನ್ನು ಭೇಟಿ ಮಾಡಿದೆ. ಗ್ಯಾರಂಟಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಅಧ್ಯಕ್ಷರನ್ನು ನೇಮಿಸಿದ್ದು, ಇದು ಸಂಪೂರ್ಣವಾಗಿ ರಾಜ್ಯದ ಕಾಂಗ್ರೆಸ್ ಸರ್ಕಾರದ ಅಸಾಂವಿಧಾನಿಕ ನಡೆ ಎಂಬುದನ್ನು ರಾಜ್ಯಪಾಲರ ಗಮನಕ್ಕೆ ತಂದಿದ್ದೇವೆ ಎಂದು ವಿಜಯೇಂದ್ರ ತಿಳಿಸಿದರು. ರಾಜ್ಯದ ಜನರ ತೆರಿಗೆ ಹಣದ ದುರುಪಯೋಗ ಆಗಿದೆ ಎಂದು ಮನದಟ್ಟು ಮಾಡಲಾಗಿದೆ. ಈ ಸರ್ಕಾರಕ್ಕೆ ತಿಳಿ ಹೇಳುವ ಕೆಲಸ ಮಾಡುವಂತೆ ಹಾಗೂ ಮಧ್ಯಸ್ಥಿಕೆ ವಹಿಸಲು ರಾಜ್ಯಪಾಲರಿಗೆ ಮನವಿ ಮಾಡಿದ್ದಾಗಿ ಹೇಳಿದರು. ನನ್ನ ವಿಧಾನಸಭಾ ಕ್ಷೇತ್ರದಲ್ಲೇ ಜಿಲ್ಲಾ ಉಸ್ತುವಾರಿ ಸಚಿವರು, ಶಾಲೆ ಮತ್ತು ಕಾಲೇಜುಗಳ ಉಸ್ತುವಾರಿ ಸಮಿತಿಗಳಿಗೆ ಶಿಕಾರಿಪುರ ತಾಲ್ಲೂಕಿನ ಗ್ಯಾರಂಟಿ ಅನುಷ್ಠಾನ ಸಮಿತಿಅಧ್ಯಕ್ಷರು ಕೊಟ್ಟ ಹೆಸರನ್ನು ಪರಿಗಣಿಸಲು ಸೂಚಿಸಿದ್ದಾರೆ.

ಇಂಥ ಕೆಲಸ ಬೇರೆ ಕಡೆಯೂ ನಡೆಯುತ್ತಿದೆ. ಈ ಸಂಬಂಧ ಸದನದಲ್ಲಿ ಹಕ್ಕುಚ್ಯುತಿಯನ್ನು ಮಂಡಿಸಲಿದ್ದೇವೆ. ಸಚಿವರಿಂದ ಶಾಸಕರ ಹಕ್ಕು ಮೊಟಕುಗೊಳಿಸುವ ಕೆಲಸ ಆಗುತ್ತಿದೆ ಎಂದು ಆರೋಪಿಸಿದರು.

**ಸದನದ ಬಾವಿಗಿಳಿದು ಪ್ರತಿಭಟನೆ:** ಸದನದ ಬಾವಿಯಿಂದ ಪ್ರತಿಭಟನೆ ಆರಂಭಿಸಿದ ಶಾಸಕರು, ಸರಕಾರವು ಎಲ್ಲಾ ಸಮಿತಿಗಳನ್ನು ವಿಸರ್ಜಿಸಬೇಕೆಂದು ಒತ್ತಾಯಿಸಿದರು. ಮೇಲ್ವಿಚಾರಣೆ ಅಗತ್ಯವಿದ್ದರೆ, ಸಮಿತಿಗಳ ನೇತೃತ್ವವನ್ನು ಕಾಂಗ್ರೆಸ್ ಕಾರ್ಯಕರ್ತರಲ್ಲ, ಶಾಸಕರಾಗಿರಬೇಕು ಎಂದು ಒತ್ತಾಯಿಸಿದವು, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸಂಪುಟವು ಈ ವಿಷಯವನ್ನು ಪರಿಶೀಲಿಸುತ್ತದೆ ಎಂದು ಭರವಸೆ ನೀಡಿದ್ದರೂ ಸಹ ಪ್ರತಿಭಟನೆ ಮುಂದುವರಿಸಿದವು. ಬುಧವಾರ ಸದನ ಸಭೆ ಸೇರುತ್ತಿದ್ದಂತೆ, ಬಿಜೆಪಿ ಮತ್ತು ಜೆಡಿ ಎಸ್ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ಮುಂದುವರೆಸಿದರು.

**ರಾಜ್ಯಪಾಲರಿಗೆ ಮನವಿ**

**ಗ್ಯಾರಂಟಿ ಅನುಷ್ಠಾನ ಸಮಿತಿಗಳಿಗೆ ಕಾಂಗ್ರೆಸ್ ಕಾರ್ಯಕರ್ತರುಗಳನ್ನು ನೇಮಕ ಮಾಡಿ ಸಂಬಳ ನೀಡುತ್ತಿರುವುದನ್ನು ವಿರೋಧಿಸಿ ಹಾಗೂ ಈ ಗ್ಯಾರಂಟಿ ಸಮಿತಿಗಳನ್ನು ರದ್ದು ಮಾಡಬೇಕು ಎಂದು ಆಗ್ರಹಿಸಿ ಹೋರಾಟ ನಡೆಸುತ್ತಿರುವ ಪ್ರತಿಪಕ್ಷಗಳು ಈ ವಿಚಾರವನ್ನು ಇಟ್ಟುಕೊಂಡು ರಾಜಭವನದ ಕದ ತಟ್ಟಿದ್ದು, ರಾಜ್ಯಪಾಲರನ್ನು ಭೇಟಿ ಮಾಡಿ ಮನವಿ ಸಲ್ಲಿಸಿವೆ.ವಿಧಾನಸಭೆಯ ಕಲಾಪವನ್ನು ಮುಂದೂಡಿದ ನಂತರ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ವಿಧಾನಸೌಧದಿಂದ ರಾಜಭವನದವರೆಗೂ ಪಾದಯಾತ್ರೆಯಲ್ಲಿ ತೆರಳಿ ರಾಜಪಾಲರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು. ಶಾಸಕರ ಕಿಮ್ಮತ್ತನ್ನು ಕಡಿಮೆ ಮಾಡಲು ಅವರ ಮೇಲೆ ಮತ್ತೊಂದು ಸಮಿತಿಯನ್ನು ಸರ್ಕಾರ ರಚಿಸಿರುವುದು ಸಂವಿಧಾನ ಬಾಹಿರ. ಈ ಸಮಿತಿಗಳನ್ನು ರದ್ದು ಮಾಡುವಂತೆ ಸರ್ಕಾರಕ್ಕೆ ಸೂಚನೆ ಕೊಡಿ ಎಂದು ಪ್ರತಿಪಕ್ಷಗಳ ಸದಸ್ಯರು ರಾಜ್ಯಪಾಲರಿಗೆ ಮನವಿ ಮಾಡಿದರು.ಬಿಜೆಪಿ ರಾಜ್ಯಾಧ್ಯಕ್ಷ ಬಿ.ವಿ. ವಿಜಯೇಂದ್ರ, ಪ್ರತಿಪಕ್ಷ ನಾಯಕರಾದ ಆರ್. ಅಶೋಕ್, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶ್‌ಬಾಬು ನೇತೃತ್ವದಲ್ಲಿ ಎರಡೂ ಪಕ್ಷಗಳ ಎಲ್ಲಾ ಶಾಸಕರುಗಳು ರಾಜಭವನಕ್ಕೆ ತೆರಳಿ ರಾಜ್ಯಪಾಲರಿಗೆ ಅಹವಾಲು ಸಲ್ಲಿಸಿದರು.**

## ಎಸ್‌ಟಿ ಸೋಮಶೇಖರ್ ವಿರುದ್ಧ ಹೈಕಮಾಂಡ್‌ಗೆ ದೂರು

• ಉದಯವಾಹಿನಿ, ಬೆಂಗಳೂರು



ಬಿಜೆಪಿ ಶಾಸಕ ಎಸ್‌ಟಿ ಸೋಮಶೇಖರ್ ವಿರುದ್ಧ ಬಿಜೆಪಿ ಹೈಕಮಾಂಡ್‌ಗೆ ದೂರು ನೀಡಲಾಗಿದ್ದು, ವರಿಷ್ಠರ ಸೂಚನೆಗೆ ರಾಜ್ಯ ನಾಯಕರು ಕಾಯುತ್ತಿದ್ದಾರೆ. ಬಿಜೆಪಿಯಲ್ಲೇ ಇದ್ದು, ಪಕ್ಷದ ನಾಯಕರ ವಿರುದ್ಧ ಎಸ್‌ಟಿ ಸೋಮಶೇಖರ್ ಪದೇ ಪದೇ ಹೇಳಿಕೆ ನೀಡುತ್ತಿದ್ದಾರೆ. ಅಲ್ಲದೆ ಬಿಜೆಪಿ ಶಾಸಕಾಂಗ ಪಕ್ಷದ ಸಭೆಗೂ ಗೈರಾಗುತ್ತಿದ್ದಾರೆ. ಅಲ್ಲದೆ, ಕಾಂಗ್ರೆಸ್ ನಾಯಕರ ಜೊತೆಗೆ ಗುರುತಿಸಿಕೊಂಡು, ಸರ್ಕಾರದ ಬಗ್ಗೆ ಮುಚ್ಚುಗೆಯ ಮಾತನ್ನಾಡುತ್ತಿದ್ದಾರೆ. ಈ ನಿಟ್ಟಿನಲ್ಲಿ ರಾಜ್ಯ ನಾಯಕರು ಬಿಜೆಪಿ ಹೈಕಮಾಂಡ್‌ಗೆ ದೂರು ನೀಡಿದ್ದಾರೆ.


ಎಸ್ ಟಿ ಸೋಮಶೇಖರ್ ಬಗ್ಗೆ ಹೈಕಮಾಂಡ್‌ಗೆ ಎಲ್ಲಾ ಹೇಳಿದ್ದೇವೆ. ಅವರ ನಿರ್ಧಾರಕ್ಕೆ ನಾವು ಕಾಯುತ್ತಿದ್ದೇವೆ ಎಂದರು. ಪ್ರಕರಣದಲ್ಲಿ ಬಿಜೆಪಿ ನಾಯಕರೇ ಇರಬಹುದು ಎಂಬ ಎಸ್ ಟಿ ಸೋಮಶೇಖರ್ ಆರೋಪ ವಿಚಾರವಾಗಿ ಮಾತನಾಡಿ, ಅವರು ಯಾಕೆ ಈ ರೀತಿ ಮಾತಾಡ್ತಿದ್ದಾರೆ ಅನ್ನೋದು ಗೊತ್ತಿದೆ. ಎಸ್ ಟಿ ಸೋಮಶೇಖರ್ ಬಗ್ಗೆ ಹೈಕಮಾಂಡ್‌ಗೆ ಎಲ್ಲಾ ಹೇಳಿದ್ದೇವೆ. ಅವರ ನಿರ್ಧಾರಕ್ಕೆ ನಾವು ಕಾಯುತ್ತಿದ್ದೇವೆ ಎಂದು ತಿಳಿಸಿದರು.

## ರನ್ಯಾ ಜೊತೆ ನಂಟಿರುವ ಸಚಿವರು ಯಾರು

• ಉದಯವಾಹಿನಿ, ಬೆಂಗಳೂರು

ಗೋಲ್ಡ್ ಸ್ಮಗ್ಲರ್ ಆಪಾದಿತೆ ಮತ್ತು ನಟಿ ರನ್ಯಾ ರಾವ್ ಅವರ ಪ್ರಕರಣ ದಿನದಿಂದ ದಿನಕ್ಕೆ ಹೊಸಹೊಸ ತಿರುವನ್ನು ಪಡೆಯುತ್ತಿದೆ. ಇಬ್ಬರ ಸಚಿವರ ಹೆಸರು ಈ ಪ್ರಕರಣದಲ್ಲಿ ತುಳುಕು ಹಾಕುತ್ತಿರುವ ಬೆನ್ನಲ್ಲೇ, ಕರ್ನಾಟಕ ಬಿಜೆಪಿ ಘಟಕ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಒಂದನ್ನು ಹಾಕಿದೆ.

ಗೋಲ್ಡ್ ಸ್ಮಗ್ಲರ್ ರನ್ಯಾ ಜೊತೆ ನಂಟಿರುವ ಸಚಿವರು ಯಾರು ಎಂಬುದನ್ನು ಬಹಿರಂಗಪಡಿಸುವಿರಾ ಎಂದು ಪೋಸ್ಟ್ ಹಾಕಿರುವ ಬಿಜೆಪಿ, ಇದಕ್ಕೆ ಕೆಪಿಸಿಸಿ ಹ್ಯಾಂಡಲ್ ಅನ್ನು ಟ್ಯಾಗ್ ಮಾಡಿದೆ. ಜೊತೆಗೆ, ಬಹುಷಃ ರನ್ಯಾ ರಾವ್ ಅವರ ಮದುವೆಯ ಫೋಟೋ ಇದಾಗಿದ್ದು, ಆ ಫೋಟೋದಲ್ಲಿ ಸಿಎಂ ಸಿದ್ದರಾಮಯ್ಯ, ರಾಜ್ಯ ಗೃಹ ಸಚಿವ ಡಾ.ಪರಮೇಶ್ವರ್ ಮತ್ತು ರನ್ಯಾ ಕುಟುಂಬದ ಸದಸ್ಯರು ಜೊತೆಯಾಗಿ ನಿಂತಿರುವ ಫೋಟೋ ಇದಾಗಿದೆ. ಬಿಜೆಪಿ ಹಾಕಿರುವ ಪೋಸ್ಟಿಗೆ ಸಾಕಷ್ಟು ಕಾಮೆಂಟುಗಳು ಬಂದಿವೆ. ರನ್ಯಾರಾವ್ ಪ್ರಕರಣದಲ್ಲಿ ಸಚಿವರ ಕೈವಾಡದ ಬಗ್ಗೆ ಕೇಳಿದಾಗ, ''ಇದೆಲ್ಲಾ ಕೇವಲ ಊಹಾಪೋಹಗಳು. ಇದು ಬಿಜೆಪಿಯ ಗೇಮ್ ಪ್ಲಾನ್. ಯಾವ ಸಚಿವರ ಹೆಸರಿದೆ ಯಾರಾದರೂ ನೋಡಿದ್ದಾರಾ ಕೇಳಿದ್ದಾರಾ ನಾವು ಮದುವೆ ಸೇರಿದಂತೆ ಶುಭ ಕಾರ್ಯಕ್ರಮಗಳಿಗೆ ಹೋಗುತ್ತಿರುತ್ತೇವೆ. ಅಲ್ಲಿ ಅನೇಕರು ನಮ್ಮ ಜತೆ ಫೋಟೋ ತೆಗೆಸಿಕೊಳ್ಳುತ್ತಾರೆ. ಯಾರೋ ನನ್ನ ಪಕ್ಕ ಬಂದು ನಿಂತುಕೊಂಡ ತಕ್ಷಣ ನನಗೂ ಅವರಿಗೂ ಸಂಬಂಧ ಇದೆ ಎಂದು ಭಾವಿಸಲು ಸಾಧ್ಯವೇ ಎಂದು ಸದನದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ಬಿಜೆಪಿ ನಾಯಕರನ್ನು ಪ್ರಶ್ನಿಸಿದ್ದರು.



**ಬಿಜೆಪಿ ಹಾಕಿರುವ ಪೋಸ್ಟ್**

# ಚಿಕ್ಕಮಗಳೂರಿನಿಂದ ಶಿವಮೊಗ್ಗ- ಶೃಂಗೇರಿಗೆ ರೈಲ್ವೆ ಮಾರ್ಗ ಬೇಕೆಂದು ಕೇಂದ್ರಕ್ಕೆ ಮನವಿ

**■ ಸಂಸತ್ ಕಲಾಪದಲ್ಲಿ ಮಾತನಾಡಿದ ಎಚ್‌ಡಿಡಿ ಕರ್ನಾಟಕದ ರೇಲ್ವೆ ಯೋಜನೆಗಳಿಗೆ ವೇಗ ನೀಡಲು ಒತ್ತಾಯ ■ ರಾಜ್ಯಕ್ಕೆ ರೈಲ್ವೆ ಹಂಚಿಕೆ 800ರಿಂದ 7,000 ಕೋಟಿಗೂ ಮೀರಿ ಹೆಚ್ಚು**

• ಉದಯವಾಹಿನಿ, ಬೆಂಗಳೂರು

ಚಿಕ್ಕಮಗಳೂರಿನಿಂದ ಶಿವಮೊಗ್ಗ - ಶೃಂಗೇರಿಗೆ ರೈಲ್ವೆ ಮಾರ್ಗ ಬೇಕೆಂದು ಕೇಂದ್ರ ಸರ್ಕಾರಕ್ಕೆ ಮಾಜಿ ಪ್ರಧಾನಿ, ರಾಜ್ಯಸಭಾ ಸದಸ್ಯ ಎಚ್‌ಡಿ ದೇವೇಗೌಡ ಮನವಿ ಮಾಡಿದ್ದಾರೆ.

ರಾಜ್ಯಸಭೆಯಲ್ಲಿ ರೈಲ್ವೆ ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕರ್ನಾಟಕದಲ್ಲಿ ಚಾಲ್ತಿಯಲ್ಲಿರುವ ಹಾಗೂ ನೆನೆಗುದಿಗೆ ಬಿದ್ದಿರುವ ರೈಲ್ವೆ ಯೋಜನೆಗಳನ್ನು ಆದ್ಯತೆಯ ಮೇರೆಗೆ ಕ್ಷಿಪ್ರಗತಿಯಲ್ಲಿ ಕಾರ್ಯಗತಗೊಳಿಸಬೇಕು ಎಂದು ಮಾಜಿ ಪ್ರಧಾನಿಗಳಾದ ಎಚ್‌ಡಿ ದೇವೇಗೌಡರು ಕೇಂದ್ರ ಸರ್ಕಾರವನ್ನು ಕೋರಿದರು. ಹಿಂದಿನ ಸರ್ಕಾರಗಳು ಕರ್ನಾಟಕದ ಹಲವಾರು ನಿರ್ಣಾಯಕ ರೈಲ್ವೆ ಯೋಜನೆಗಳನ್ನು ನಿರ್ಲಕ್ಷಿಸಿವೆ. ಆದಾಗ್ಯೂ, ಪ್ರಸ್ತುತ ಸರ್ಕಾರದ ಅಡಿಯಲ್ಲಿ ರಾಜ್ಯಕ್ಕೆ ರೈಲ್ವೆ ಅನುದಾನ ಹಂಚಿಕೆಯಲ್ಲಿ ಭಾರೀ ಏರಿಕೆ ಕಂಡಿದೆ. ಈ ಹಂಚಿಕೆಯು 800 ಕೋಟಿಯಿಂದ 7,000 ಕೋಟಿಗೂ ಮೀರಿ ಹೆಚ್ಚಾಗಿದೆ ಎಂದು ಮಾಜಿ ಪ್ರಧಾನಿಗಳು ಹೇಳಿದರು.

**ಬಾಕಿ ಇರುವ ಯೋಜನೆ ಪೂರ್ಣ ಮಾಡಿ**

ನರೇಂದ್ರ ಮೋದಿ ಅವರ ಆಡಳಿತದ ಅಡಿಯಲ್ಲಿ ರಾಜ್ಯದ ಅನೇಕ ರೈಲ್ವೆ ಯೋಜೆಗಳಿಗೆ ಮರು ಚಾಲನೆ ಸಿಕ್ಕಿದೆ. ಆದಾಗ್ಯೂ, ಚಿಕ್ಕಮಗಳೂರಿನಿಂದ ಶಿವಮೊಗ್ಗಕ್ಕೆ ಮತ್ತು ಶೃಂಗೇರಿಗೆ ರೈಲ್ವೆ ಮಾರ್ಗ ಮತ್ತು ಬೆಂಗಳೂರಿನಿಂದ ಭಾರತದ ಇತರೆ ಭಾಗಗಳಿಗೆ ಸಂಪರ್ಕ ಸೇರಿದಂತೆ ಹಲವಾರು ಯೋಜನೆಗಳು ಕಾರ್ಯರೂಪಕ್ಕೆ ಬಾರದೆ ಇನ್ನೂ ಬಾಕಿ ಉಳಿದಿವೆ. ಇವುಗಳ ಕಡೆ ರೈಲ್ವೆ ಸಚಿವರು ತಕ್ಷಣ ಗಮನ ಹರಿಸಬೇಕಾಗಿದೆ ಎಂದು ಅವರು ಒತ್ತಿ ಹೇಳಿದರು.

ಕಳೆದ ಹತ್ತು ವರ್ಷಗಳಲ್ಲಿ ರೈಲ್ವೆ ಕ್ಷೇತ್ರದಲ್ಲಿ ಆಗಿರುವ ಗಮನಾರ್ಹ ಪ್ರಗತಿಯನ್ನು ಮಾಜಿ ಪ್ರಧಾನಿಗಳು ಮುಕ್ತಕಂಠದಿಂದ ಶ್ಲಾಘಿಸಿದರು. ತಮ್ಮ ಅನುಭವದಿಂದ ಹೇಳುತ್ತಿದ್ದೇನೆ, ಕಳೆದ ಎಪ್ಪತ್ತೈದು ವರ್ಷಗಳ ಅಭಿವೃದ್ಧಿಯನ್ನು ಪರಿಶೀಲನೆ ಮಾಡಿ ನೋಡಿದಾಗ ಹತ್ತು ವರ್ಷಗಳ ಅಭಿವೃದ್ಧಿ ಕಣ್ಣಿಗೆ ಕಟ್ಟುವಂತೆ ಕಾಣುತ್ತದೆ ಎಂದು ಅವರು ಹೇಳಿದರು.

ಹಿಂದೆ ಅನುಮೋದನೆ ಪಡೆಯಲು ವರ್ಷಗಳೇ ಹಿಡಿಯುತ್ತಿದ್ದ ರೈಲ್ವೆ ಯೋಜನೆಗಳು ಈಗ ಅಭೂತಪೂರ್ವ ವೇಗದಲ್ಲಿ ಕಾರ್ಯಗತಗೊಳ್ಳುತ್ತಿವೆ ಎಂದ ಅವರು ತಮ್ಮ ಅಧಿಕಾರಾವಧಿಯಲ್ಲಿ ರೈಲ್ವೆ ಅನುದಾನ ಹಂಚಿಕೆ, ಯೋಜನೆಗಳ ಜಾರಿ ಇತ್ಯಾದಿ ಅಂಶಗಳನ್ನು ನೆನಪು ಮಾಡಿಕೊಂಡರು, ಅಲ್ಲದೆ ಆಗ ನಿರ್ಧಾರ ತೆಗೆದುಕೊಳ್ಳುವಲ್ಲಿ ವಿಳಂಬ ಮತ್ತು ನಿಧಾನಗತಿಯ ಯೋಜನಾ ಅನುಷ್ಠಾನ ಪರಿಸ್ಥಿತಿಯನ್ನು ನೆನಪಿಸಿಕೊಂಡರು. ಇದಕ್ಕೆ ವ್ಯತಿರಿಕ್ತವಾಗಿ, ದೇಶಾದ್ಯಂತ ರೈಲ್ವೆ ಅಭಿವೃದ್ಧಿಯನ್ನು ಪರಿವರ್ತಿಸಿರುವ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರ ಸ್ಪಷ್ಟ ದೃಷ್ಟಿಕೋನದೊಂದಿಗೆ ಮುನ್ನಡೆಯುತ್ತಿದೆ ಎಂದು ಹೇಳಿದರು.


ರೈಲ್ವೆ ವಿಸ್ತರಣೆ ಮತ್ತು ಸುರಕ್ಷತೆಯಲ್ಲಿ ಗಮನಾರ್ಹ ಸುಧಾರಣೆಗಳು ಕಂಡುಬಂದಿವೆ ಎಂದು ದೇವೇಗೌಡರು; ಕೆಲ ಅಂಶಗಳನ್ನು ನಿರ್ದಿಷ್ಟವಾಗಿ ಉಲ್ಲೇಖಿಸಿದರು. ಹಿಂದೆ, ಆಧುನಿಕ ಮೂಲಸೌಕರ್ಯಗಳ ಕೊರತೆಯಿಂದಾಗಿ ರೈಲ್ವೆ ಅಪಘಾತಗಳು ಆಗಾಗ್ಗೆ ಸಂಭವಿಸುತ್ತಿದ್ದವು. ಆದರೆ ಇಂದು ಸುರಕ್ಷತಾ ಮಾನದಂಡಗಳು ಗಮನಾರ್ಹವಾಗಿ ಸುಧಾರಿಸಿವೆ ಎಂದು ಅವರು ಹೇಳಿದರು. ಇದಕ್ಕೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರ ಪ್ರಯತ್ನಗಳು ಕಾರಣ ಎಂದ ಅವರು, ಸಚಿವರನ್ನು ಅವರನ್ನು ರಾಷ್ಟ್ರದ ಪ್ರಗತಿಗೆ ಬದ್ಧರಾಗಿರುವ ಪ್ರಾಮಾಣಿಕ ಮತ್ತು ಕಠಿಣ ಪರಿಶ್ರಮಿ ನಾಯಕ ಎಂದು ಬಣ್ಣಿಸಿದರು.

ದೇವೇಗೌಡರು ರೈಲ್ವೆ ಆಧುನೀಕರಣಕ್ಕೆ ಮೋದಿ ಅವರ ಸರ್ಕಾರವು ತೋರಿದ ಬದ್ಧತೆಗೆ ಅಭಿನಂದನೆ ಸಲ್ಲಿಸಿದ ಅವರು ಕರ್ನಾಟಕದಲ್ಲಿ ಬಾಕಿ ಇರುವ ಯೋಜನೆಗಳನ್ನು ತ್ವರಿತಗೊಳಿಸಬೇಕು ಎಂದರು.

**ಭಾರತದ ರೈಲ್ವೆ ಬೆಳವಣಿಗೆಯನ್ನು ಚೀನಾ, ರಷ್ಯಾ, ಕೆನಡಾ ಮತ್ತು ಆಸ್ಟ್ರೇಲಿಯಾದೊಂದಿಗೆ ಹೋಲಿಸಿ ವಿವರಿಸಿದರು. ಭಾರತದ ಪ್ರಗತಿ ಈಗ ಜಾಗತಿಕ ಮಾನದಂಡಗಳಿಗೆ ಸಮನಾಗಿದೆ ಎಂದರಲ್ಲದೆ, ರೈಲ್ವೆ ಮಾರ್ಗಗಳ ವಿಸ್ತರಣೆ, ವಿದ್ಯುದೀಕರಣ ಮತ್ತು ಸರಕು ಸಾಗಣೆ ಕಾರಿಡಾರ್‌ಗಳ ಅಭಿವೃದ್ಧಿ ಗಮನಾರ್ಹವಾಗಿ ಆಗಿದೆ**

**-ಎಚ್.ಡಿ. ದೇವೆಗೌಡ, ಮಾಜಿ ಪ್ರಧಾನಿ**





**ಬಸ್ ದರ ದುಬಾರಿ**

**ದಕ್ಷಿಣ ಭಾರತದಲ್ಲಿ, ವಿಶೇಷವಾಗಿ ಕರ್ನಾಟಕದಲ್ಲಿ ರೈಲ್ವೆ ಯೋಜನೆಗಳನ್ನು ಮತ್ತಷ್ಟು ವೇಗಗೊಳಿಸುವಂತೆ ಸರ್ಕಾರವನ್ನು ಪದೇ ಪದೆ ಮನವಿ ಮಾಡಿದ ಅವರು; ರೈಲ್ವೆ ಸಂಪರ್ಕವು ಸಾಮಾನ್ಯ ನಾಗರಿಕರಿಗೆ ಕೈಗೆಟುಕುವ ಪ್ರಯಾಣಕ್ಕೆ ಕಾರಣವಾದ ಕೆಲ ಮಹತ್ವದ ಅಂಶಗಳನ್ನು ಉದಾಹರಣೆ ಸಮೇತವಾಗಿ ಉಲ್ಲೇಖಿಸಿದರು. ಹಾಸನದಿಂದ ಮೈಸೂರಿಗೆ ರೈಲಿನಲ್ಲಿ ಪ್ರಯಾಣ ಮಾಡಿದರೆ ಟಿಕೆಟ್ ವೆಚ್ಚ 30 ಆಗುತ್ತದೆ. ಆದರೆ ಬಸ್ ದರಗಳು ಬಹುತೇಕ ಎರಡು ಪಟ್ಟು ಮೂರು ಪಟ್ಟು ಹೆಚ್ಚಾಗಿರುತ್ತವೆ. ಇದಕ್ಕಾಗಿಯೇ ರೈಲ್ವೆ ಯೋಜನೆಗಳ ವಿಸ್ತರಣೆ ಪೂರ್ಣ ವೇಗದಲ್ಲಿ ಮುಂದುವರಿಯಬೇಕು ಎಂದು ಅವರು ಪ್ರತಿಪಾದಿಸಿದರು.**

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,798/Gram24ct ₹8,065/Gram22ct | ಬೆಳ್ಳಿ: ₹100.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

# ಮಾತರಂ ವಾ ಸ್ವಸಾರಂ ವಾ

ಮನುಸ್ಮೃತಿಯ ಎರಡನೇ ಅಧ್ಯಾಯದ ಮಾತು. ಉಪನಯನ ಹೊಂದಿ ದಂಡಧಾರಿಯಾದ ವಟುವು ಮೊದಲು ತನ್ನನ್ನು ಅವಮಾನ ಮಾಡದ ತಾಯಿ ಸಹೋದರಿ ತಾಯಿಯ ಸಹೋದರಿಯ ಬಳಿ ಅನ್ನಭಿಕ್ಷೆಯನ್ನು ಕೇಳಬೇಕು. ಭಿಕ್ಷೆ ಬೇಡಿ ತಂದ ಈ ಅನ್ನವನ್ನು ನಿರ್ವಂಚನೆಯಿಂದ ಗುರುವಿಗೆ ಸಮರ್ಪಿಸಬೇಕು. ಬಳಿಕ ಗುರುವು ಎತ್ತಿ ಕೊಟ್ಟದ್ದನ್ನು ಸ್ವಚ್ಛವಾದ ಜಾಗದಲ್ಲಿ ಪೂರ್ವಾಭಿಮುಖವಾಗಿ ಕುಳಿತು ಆಚಮನದ ಮೂಲಕ ದೇವರನ್ನು ನೆನೆದು ಸ್ವೀಕರಿಸಬೇಕು. ವಟುವಾದವನು ಬೆಳಿಗ್ಗೆ ಮತ್ತು ಸಾಯಂಕಾಲ ಎರಡು ಹೊತ್ತು ಮಾತ್ರ ಊಟ ಮಾಡಬೇಕು. ಮಧ್ಯಾಹ್ನ ಊಟ ಮಾಡಬಾರದು. ದ್ವಿಜನಾದವನು ಊಟ ಮಾಡುವ ಮುನ್ನ ಅನ್ನವನ್ನು ಶ್ರೇಷ್ಠ ಭಾವನೆಯಿಂದ ಮುಟ್ಟಿ ನೀರು ಪ್ರೋಕ್ಷಿಸಿ ಊಟ ಮಾಡಬೇಕು. ಊಟ ಮುಗಿದ ಬಳಿಕವೂ ಆಚಮನ ಮಾಡಬೇಕು. ಊಟ ಮಾಡುವ ಮುನ್ನ, ಊಟ ಮಾಡಿದ ಬಳಿಕ ಸ್ವಚ್ಛತೆ ಕಾಪಾಡಿಕೊಳ್ಳುವುದು, ಅನ್ನ ನೀಡಿದ ಭಗವಂತ ದಾನಿ ಗುರುಗಳನ್ನು ಕೃತಜ್ಞತೆಯಿಂದ ಸ್ಮರಿಸುವುದು ಇದರ ಉದ್ದೇಶ. ಭಿಕ್ಷಾನ್ನ ಉಂಡು ಬೆಳೆದವ ಎಂದೆಂದಿಗೂ ಸಮಾಜಕ್ಕೆ ಋಣಿ. ಆತ ಬೆಳೆದು ಸಂಪಾದಿಸುವಾಗ ಲಂಚ ಪಡೆಯಲಾರ. ಬದಲಾಗಿ ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುವನು. ವಟುವಿಗೆ ಅನ್ನ ನೀಡುವ ಜನತೆಗೂ ಧನ್ಯತಾಭಾವ. ಹೀಗೆ ಪರಸ್ಪರ ಸಹಕಾರದ ಈ ಬದುಕು ಆದರ್ಶ ಯಜ್ಞ. ಇಂದು ಇಂಥ ಆದರ್ಶಗಳು ಕಣ್ಮರೆ. ಆದ್ದರಿಂದ ಸಮಾಜದಲ್ಲಿ ವಿಶಾಲ ವಿಶ್ವನನ್ನದೆಂಬ ಭಾವ ವಿರಳ.

# ಗ್ಯಾರಂಟಿ ಸಮಿತಿ ವಿರುದ್ಧ ವಿಪಕ್ಷಗಳು ಅಖಾಡಕ್ಕೆ

## ರದ್ದು ಮಾಡಲು ಆಗ್ರಹಿಸಿ ಬಿಜೆಪಿ- ದಳ ಪ್ರೊಟೆಸ್ಟ್

• ಉದಯವಾಹಿನಿ, ಬೆಂಗಳೂರು

ಕಾಂಗ್ರೇಸ್ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನಕ್ಕೆ ರಚನೆ ಮಾಡಿರುವ ಸಮಿತಿಯನ್ನು ರದ್ದು ಮಾಡಬೇಕು ಎಂದು ಆಗ್ರಹಿಸಿ ಬಿಜೆಪಿ ಮತ್ತು ಜೆಡಿಎಸ್ ಬುಧವಾರ ಪ್ರತಿಭಟನೆ ನಡೆಸಿತು. ವಿಧಾನಸೌಧದ ಕೆಂಗಲ್ ಪ್ರತಿಮೆ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದ ಉಭಯ ಪಕ್ಷಗಳ ನಾಯಕರು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರತಿಭಟನೆಯಲ್ಲಿ ವಿಪಕ್ಷ ನಾಯಕ ಆರ್ ಅಶೋಕ್ ಮಾತನಾಡಿ ಸರ್ಕಾರದ ದುಡ್ಡನ್ನು ಕಾಂಗ್ರೇಸ್ ಕಾರ್ಯಕರ್ತರಿಗೆ ನೀಡಲಾಗ್ತಿದೆ. ಸರ್ಕಾರದ ಹಣವನ್ನು ಖರ್ಚು ಮಾಡುವ ಬದಲಾಗಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮನೆಯ ಮುಂದೆ ಭಿಕ್ಷೆ ಬೇಡಲಿ ಎಂದು ವಾಗ್ದಾಳಿ ನಡೆಸಿದರು. ಕಾಂಗ್ರೇಸ್ ಸರ್ಕಾರದ ಬಂದ ಮೇಲೆ ಎಲ್ಲದರ ಬೆಲೆ ಏರಿಕೆ ಆಗಿದೆ. ಗಾಳಿಗೆ ಮಾತ್ರ ತೆರಿಗೆ ಹಾಕಿಲ್ಲ. ಕಾಂಗ್ರೇಸ್ ಹಗಲು ದರೋಡೆ ಮಾಡುತ್ತಿದೆ. ಅಂಗನ ವಾಡಿ ಕಾರ್ಯಕರ್ತರು, ಬಿಸಿ ಊಟ ತಯಾರಿ ಮಾಡುವವರಿಗೆ ಗೌರವ ಧನ ಸಿಗ್ತಿಲ್ಲ. ಸಮಿತಿಯ ಹೆಸರಿನಲ್ಲಿ ಕಾಂಗ್ರೇಸ್ ಕಾರ್ಯಕರ್ತರಿಗೆ ಕಚೇರಿ, ವೇತನ ನೀಡಲಾಗ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸರ್ಕಾರದ ಯೋಜನೆಗಳನ್ನು ಜಾರಿಗೆ ತರಲು ಅಧಿಕಾರಿಗಳಿಗೆ ಸಂಬಳ ಕೊಡಲಾಗ್ತಿದೆ. ಹೀಗಿರುವಾಗ ಗ್ಯಾರಂಟಿ ಸಮಿತಿಗೆ ಕಾಂಗ್ರೇಸ್ ಕಾರ್ಯಕರ್ತರ ನೇಮಕ ಏಕೆ? ಎಂದು ಆರ್ ಅಶೋಕ್ ಪ್ರಶ್ನಿಸಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ಮಾತನಾಡಿ ಸಮಿತಿ ರದ್ದು ಮಾಡುವಂತೆ ಸರ್ಕಾರವನ್ನು ಒತ್ತಾಯಿಸಿದರೂ ಹಿಂದಕ್ಕೆ ಪಡೆಯುವ ಪ್ರಶ್ನೆ ಇಲ್ಲ ಎಂದು ಹೇಳುತ್ತಿದೆ. ಜನರ ತೆರಿಗೆ ಹಣವನ್ನು ಕಾರ್ಯಕರ್ತರಿಗೆ ಕೊಡುವ ಅಗತ್ಯತೆ ಏನಿದೆ ಸರ್ಕಾರಿ ನೌಕರರಿಗೆ ವೇತನ ಕೊಡಲು ಹಣ ಇಲ್ಲ, ಹೀಗಿರುವಾಗ ಕಾರ್ಯಕರ್ತರಿಗೆ ಹಣ ಕೊಡಲಾಗ್ತಿದೆ. ಕೂಡಲೇ ಸಮಿತಿ ರದ್ದು ಮಾಡಬೇಕು ಎಂದು ಒತ್ತಾಯಿಸಿದರು.

ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಕಾಂಗ್ರೇಸ್ ನವರು 60 ವರ್ಷ ದೇಶವನ್ನು ಲೂಟಿ ಮಾಡಿದರು. ಇವಾಗ ಕಾರ್ಯಕರ್ತರನ್ನು ನಿರ್ವಹಣೆ ಮಾಡಲು ಖಜಾನೆ ಹಣವನ್ನು ಕೊಡಲಾಗ್ತಿದೆ.

ಕಾಂಗ್ರೇಸ್ ಇರುವ ವರೆಗೆ ದೇಶಕ್ಕೆ ನೆಮ್ಮದಿ ಇಲ್ಲ, ದೇಶಕ್ಕೆ ಗಂಡಾಂತರ ತರುವ ಕೆಲಸ ಕಾಂಗ್ರೇಸ್ ಮಾಡುತ್ತಿದೆ ವಾಗ್ದಾಳಿ ನಡೆಸಿದರು.



ಉದಯವಾಹಿನಿ ಚಿತ್ರ

**ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ**

ಇನ್ನು ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಮಾತನಾಡಿ, ಕಾಂಗ್ರೇಸ್ ಬಂದ ಬಳಿಕ ಬೆಲೆ ಏರಿಕೆ ಹೆಚ್ಚಾಗುತ್ತಿದೆ. ಅಂಗನವಾಡಿ ಕಾರ್ಯಕರ್ತರರು, ಶಿಕ್ಷಕರಿಗೆ ಗೌರವ ಧನ ಹೆಚ್ಚಳ ಮಾಡಲಾಗ್ತಿಲ್ಲ. ಆಶಾ ಕಾರ್ಯಕರ್ತರಿಗೂ ಗೌರವ ಧನ ಹೆಚ್ಚಳ ಮಾಡುತ್ತಿಲ್ಲ. ಹೀಗಿರುವಾಗ ಗ್ಯಾರಂಟಿ ಸಮಿತಿ ಮಾಡಿ ಕಾಂಗ್ರೇಸ್ ಕಾರ್ಯಕರ್ತರಿಗೆ ವೇತನ ನೀಡುತ್ತಿದೆ. ಜನರ ತೆರಿಗೆ ಹಣ ಪೋಲು ಮಾಡಿ ಕಾಂಗ್ರೇಸ್ ಪುಡಾರಿಗಳಿಗೆ ಹಣ ನೀಡಲಾಗ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

- ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರದ್ದಿಗೆ ಸದನದಲ್ಲಿ ಬಿಜೆಪಿ - ಜೆಡಿಎಸ್ ಒತ್ತಾಯ
- ವಿಧಾನಸೌಧದ ಪಶ್ಚಿಮ ದ್ವಾರದಲ್ಲಿನ ಕೆಂಗಲ್ ಹನುಮಂತಯ್ಯ ಪ್ರತಿಮೆ ಎದುರು ಧರಣಿ
- ಇವರ ಖರ್ಚು, ವೆಚ್ಚಕ್ಕೆ ಸರಕಾರ ತೆರಿಗೆದಾರರ ಹಣ ಬಳಸುತ್ತಿರುವುದಕ್ಕೆ ಆಕ್ಷೇಪ
- ಗ್ಯಾರಂಟಿ ಸಮಿತಿ ವಿರುದ್ಧ ವಿಪಕ್ಷಗಳು ಅಖಾಡಕ್ಕೆ: ರದ್ದು ಮಾಡಲು ಆಗ್ರಹಿಸಿ ಬಿಜೆಪಿ- ದಳ ಪ್ರೊಟೆಸ್ಟ್

# ಆಟೋರಿಕ್ಷಾ ದರ ಗಗನಕ್ಕೆ!



• ಉದಯವಾಹಿನಿ, ಬೆಂಗಳೂರು

ಮೆಟ್ರೋ ರೈಲು ಮತ್ತು ಸರ್ಕಾರಿ ಬಸ್ ಟಿಕೆಟ್ ದರ ತೀವ್ರ ಏರಿಕೆ ಬಳಿಕ ಇದೀಗ ಬೆಂಗಳೂರಿನಲ್ಲಿ ಆಟೋ ರಿಕ್ಷಾ ದರಗಳು ಸಹ ಏರಿಕೆಯಾಗುವ ಸಾಧ್ಯತೆಯಿದೆ.

ನಗರದಲ್ಲಿನ ಆಟೋರಿಕ್ಷಾ ಚಾಲಕರ ಸಂಘಗಳ ಬೇಡಿಕೆಗಳಿಗೆ ಸ್ಪಂದಿಸಿ, ಬೆಂಗಳೂರು ನಗರ ಜಿಲ್ಲಾ ಪ್ರಾದೇಶಿಕ ಸಾರಿಗೆ ಪ್ರಾಧಿಕಾರವು ಬುಧವಾರ ಸಭೆ ಕರೆದು ಸಂಭಾವ್ಯ ದರ ಪರಿಷ್ಕರಣೆ ಕುರಿತು ಚರ್ಚಿಸಿದೆ. ಸಾರಿಗೆ ಇಲಾಖೆಯ ಮೂಲಗಳ ಪ್ರಕಾರ, ಪ್ರಸ್ತುತ ಕನಿಷ್ಠ ದರ 30 ರೂ. ಮತ್ತು ಎರಡು ಕಿಲೋಮೀಟರ್‌ಗಿಂತ ಹೆಚ್ಚಿನ ದೂರಕ್ಕೆ ಪ್ರತೀ ಕಿಲೋಮೀಟರ್‌ಗೆ 15 ರೂ. ಹೆಚ್ಚುವರಿ ಶುಲ್ಕ ವಿಧಿಸಲಾಗುತ್ತಿದೆ. ಆಟೋರಿಕ್ಷಾ ಚಾಲಕರು ಕನಿಷ್ಠ ದರವನ್ನು 50 ರೂ.ಗೆ ಏರಿಸಲು ಮತ್ತು ಎರಡು ಕಿಲೋಮೀಟರ್‌ಗಿಂತ ಹೆಚ್ಚಿನ ದೂರಕ್ಕೆ ಪ್ರತಿ ಕಿಲೋಮೀಟರ್‌ಗೆ 25 ರೂ. ಗೆ ದರ ಏರಿಕೆ ಮಾಡಲು ಪ್ರಸ್ತಾಪಿಸಿದ್ದಾರೆ. ಆದಾಗ್ಯೂ, ಸಾರಿಗೆ ಇಲಾಖೆಯು ಕನಿಷ್ಠ ಪ್ರಯಾಣ ದರವನ್ನು 40 ರೂ.ಗೆ ಮಿತಿಗೊಳಿಸಲು ಮಾತುಕತೆ ನಡೆಯುತ್ತಿದ್ದು, ಪ್ರತಿ ಕಿ.ಮೀ.ಗೆ 15 ರೂನಿಂದ 20 ರೂ.ಗೆ ದರ ನಿಗದಿಪಡಿಸಲಾಗಿದೆ. ಆಟೋರಿಕ್ಷಾ ದರ ಏರಿಕೆಯಾದ ನಂತರ, ರೈಡ್-ಹೇಲಿಂಗ್ ಕಂಪನಿಗಳು ಕ್ಯಾಬ್ ಸೇವೆಗಳ ದರವನ್ನು ಹೆಚ್ಚಿಸಬೇಕಾಗುತ್ತದೆ ಎಂದು ಸ್ವಾಭಿಮಾನಿ ಚಾಲಕ ಸಂಘಟನೆಗಳ ಒಕ್ಕೂಟ ಅಧ್ಯಕ್ಷ ತನ್ವೀರ್ ಪಾಷಾ ಪಿಟಿಐಗೆ ತಿಳಿಸಿದ್ದಾರೆ.

# ಬಿಜೆಪಿ ಅವಧಿಯಲ್ಲಿ ಒಂದೇ ಒಂದು ಮನೆ ಕೊಟ್ಟಿದ್ರೆ, ನಾನು ರಾಜಕೀಯ ನಿವೃತ್ತಿ ತಗೋತೀನಿ

• ಉದಯವಾಹಿನಿ, ಬೆಂಗಳೂರು

ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಒಂದೇ ಒಂದು ಮನೆ ವಸತಿ ಯೋಜನೆಯಡಿ ಕೊಟ್ಟಿಲ್ಲ. ಒಂದು ವೇಳೆ ಬಿಜೆಪಿ ಅವರು ವಸತಿ ಹಂಚಿಕೆ ಮಾಡಿರುವ ದಾಖಲಾತಿ ಕೊಟ್ಟರೆ ನಾನು ರಾಜಕೀಯ ನಿವೃತ್ತಿ ಪಡೆಯೋದಾಗಿ ವಿಧಾನ ಪರಿಷತ್‌ನಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಬಿಜೆಪಿ ಸದಸ್ಯರಿಗೆ ಸವಾಲ್ ಹಾಕಿದ್ರು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ನವೀನ್, ವಸತಿ ಯೋಜನೆ ಬಗ್ಗೆ ಪ್ರಶ್ನೆ ಮಾಡಿದರು. ಕಾಂಗ್ರೇಸ್ ಸರ್ಕಾರ ವಸತಿ ಯೋಜನೆ ಅಡಿ ಮನೆ ಸರಿಯಾಗಿ ನಿರ್ಮಾಣ ಮಾಡುತ್ತಿಲ್ಲ ಎಂದು ಆರೋಪ ಮಾಡಿದರು. ಸಚಿವರು ಸದನಕ್ಕೆ ತೃಪ್ತಿಪಡಿಸಲು ಮಾತ್ರ ಉತ್ತರ ಕೊಡುತ್ತಿದ್ದಾರೆ ಎಂದು ಆರೋಪ ಮಾಡಿದರು. ಇದರಲ್ಲಿ ರಾಜಕೀಯ ಮಾಡಬೇಡಿ. ಬಿಜೆಪಿ ಅವಧಿಯಲ್ಲಿ ಒಂದೇ ಒಂದು ಮನೆ ಕೊಟ್ಟಿಲ್ಲ. ಮನೆ ಕೊಟ್ಟಿರೋದು ಸಾಬೀತು ಮಾಡಿದರೆ ನಾನು ರಾಜಕೀಯ ನಿವೃತ್ತಿ ತೆಗೆದುಕೊಳ್ಳುತ್ತೇನೆ ಎಂದು ಬಿಜೆಪಿ ಸದಸ್ಯರಿಗೆ ಎರಡು ಬಾರಿ ಸವಾಲ್ ಹಾಕಿದರು.



# ಬೆಂಗಳೂರು ನಗರ ವ್ಯಾಪ್ತಿಯಲ್ಲಿ 6,936 ಮಕ್ಕಳು ಶಾಲೆಯಿಂದ ಹೊರಗೆ: ಬಿಬಿಎಂಪಿ ಸಮೀಕ್ಷೆ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ಸಮೀಕ್ಷೆ ನಡೆದಿದ್ದು, 6,936 ಮಕ್ಕಳು ಶಾಲೆಯಿಂದ ಹೊರಗಿದ್ದಾರೆ ಎಂದು ಗುರುತಿಸಲಾಗಿದೆ. ಬಿಬಿಎಂಪಿ ನಡೆಸಿದ ಸಮೀಕ್ಷೆಯಲ್ಲಿ 1,08,203 ಮಕ್ಕಳಲ್ಲಿ 6,936 ಮಕ್ಕಳು ಶಾಲೆಯಿಂದ ಹೊರಗುಳಿದಿದ್ದಾರೆ ಎಂದು ತಿಳಿದುಬಂದಿದೆ.

ಸಮೀಕ್ಷಾ ಕಾರ್ಯಕ್ಕೆ ಬಿಬಿಎಂಪಿಯ ಎಂಟೂ ವಲಯಗಳ ಜಂಟಿ ಆಯುಕ್ತರನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜಿಸಲಾಗಿದೆ. ಜೊತೆಗೆ, ವಾರ್ಡ್‌ವಾರು ಸಿಬ್ಬಂದಿ ನಿಯೋಜಿಸಿ ಸಮೀಕ್ಷೆ ನಡೆಸಲಾಗುತ್ತಿದೆ ಎಂದರು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ಎಲ್ಲಾ ವಲಯಗಳ ಜಂಟಿ ಆಯುಕ್ತರನ್ನು ಸಮೀಕ್ಷೆಗೆ ನೋಡಲ್ ಅಧಿಕಾರಿಗಳಾಗಿ ನಿಯೋಜಿಸಲಾಗಿದೆ ಎಂದು ಬಿಬಿಎಂಪಿ ವಿಶೇಷ ಶಿಕ್ಷಣ ಆಯುಕ್ತೆ ಪ್ರೀತಿ ಗೆಹ್ಲೋಟ್ ತಿಳಿಸಿದ್ದಾರೆ.



ಸಮೀಕ್ಷೆ ನಡೆಸಲು ಮತ್ತು ಕಾರಣವನ್ನು ಕಂಡುಹಿಡಿಯಲು ಎಲ್ಲಾ ವಾರ್ಡ್‌ಗಳಿಗೆ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತಿದೆ. ಮುಖ್ಯವಾಹಿನಿಯ ಶಿಕ್ಷಣದಿಂದ ಶಾಲೆಯಿಂದ ಹೊರಗುಳಿದ ಮಕ್ಕಳು ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ ದಾಖಲಾತಿ ಇಲ್ಲದಿರುವ ಬಗ್ಗೆ ಹೈಕೋರ್ಟ್ ಪ್ರಕರಣವನ್ನು ವಿಚಾರಣೆ ನಡೆಸುತ್ತಿದೆ. ಈ ನಿಟ್ಟಿನಲ್ಲಿ, ಬಿಬಿಎಂಪಿ ವ್ಯಾಪ್ತಿಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ನಿಖರ ಸಂಖ್ಯೆಯನ್ನು ಗುರುತಿಸಲು ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿದೆ. ಸೆಂಟರ್ ಫಾರ್ ಇ-ಗವರ್ನೆನ್ಸ್ ಮೊಬೈಲ್ ಅಪ್ಲಿಕೇಶನ್ - ಕರ್ನಾಟಕ ಮಕ್ಕಳ ಸಮೀಕ್ಷೆ ಅಪ್ಲಿಕೇಶನ್ ಮೂಲಕ ಸಮೀಕ್ಷೆ ಕಾರ್ಯವನ್ನು ನಡೆಸುತ್ತಿದೆ. ಸಮೀಕ್ಷೆಯು ಫೆಬ್ರವರಿ 24, 2025 ರಂದು ಪ್ರಾರಂಭವಾಯಿತು. ಮಾರ್ಚ್ 10, 2025 ರ ವರದಿಯ ಪ್ರಕಾರ, ಅತಿ ಹೆಚ್ಚು ವಿದ್ಯಾರ್ಥಿಗಳು ಶಾಲೆ ಬಿಟ್ಟಿರುವುದು ಬೊಮ್ಮನಹಳ್ಳಿ ವಲಯದಲ್ಲಿ.

**ಹೈಕೋರ್ಟ್ ಪ್ರಕರಣ ವಿಚಾರಣೆ**

ಅತಿ ಕಡಿಮೆ ವಿದ್ಯಾರ್ಥಿಗಳು ಯಲಹಂಕ ವಲಯದಲ್ಲಿದ್ದಾರೆ, ಅಲ್ಲಿ 4349 ವಿದ್ಯಾರ್ಥಿಗಳಲ್ಲಿ 271 ವಿದ್ಯಾರ್ಥಿಗಳು ಶಾಲೆ ಬಿಟ್ಟಿದ್ದಾರೆ. ಹೈಕೋರ್ಟ್‌ನ ನಿರ್ದೇಶನದಂತೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಫೆಬ್ರುವರಿ 24ರಿಂದ ಶಿಕ್ಷಣ ವಿಭಾಗದ ಹೊಲಿಗೆ ಶಿಕ್ಷಕರು, ಆಶಾ ಕಾರ್ಯಕರ್ತೆಯರು, ಲಿಂಕ್ ವರ್ಕರ್‌ಗಳ ಮೂಲಕ ಮನೆ ಮನೆ ಸಮೀಕ್ಷೆ ನಡೆಸಲಾಗುತ್ತಿದೆ.

ಪ್ರತಿ ವಾರ್ಡ್‌ಗೆ ಸುಮಾರು 10 ಗಣತಿದಾರರನ್ನು ನೇಮಿಸಲಾಗಿದೆ. ಸಮೀಕ್ಷೆಯ ವಿವರಗಳನ್ನು ಆ್ಯಪ್‌ನಲ್ಲಿ ದಾಖಲಿಸಲಾಗುತ್ತಿದೆ ಎಂದು ವಿವರಿಸಿದ್ದಾರೆ.

# ಎರಡು ಕ್ಲಬ್ ಹೌಸ್‌ಗಳ ಸುಗಮ ನಿರ್ವಹಣೆ

• ಉದಯವಾಹಿನಿ, ಬೆಂಗಳೂರು

ಎರಡು ವಸತಿ ಸಂಕೀರ್ಣಗಳಲ್ಲಿರುವ ಕ್ಲಬ್ ಹೌಸ್‌ಗಳು ಸುಗಮವಾಗಿ ಕಾರ್ಯನಿರ್ವಹಿಸಲು ಮತ್ತು ಸಾರ್ವಜನಿಕ ವಲಯದಲ್ಲಿ ಅವುಗಳ ಪ್ರತಿಷ್ಠೆ ಹೆಚ್ಚಿಸಲು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬೌರಿಂಗ್ ಕ್ಲಬ್ ಗೆ ನಿರ್ವಹಣೆಗೆ ಒಪ್ಪಿಸಲು ಮುಂದಾಗಿದೆ.

ಬೌರಿಂಗ್ ಕ್ಲಬ್ ಆಡಳಿತ ಮಂಡಳಿಯೊಂದಿಗೆ ಈಗಾಗಲೇ ಮಾತುಕತೆ ನಡೆಸಲಾಗಿದ್ದು, ಕ್ಲಬ್‌ನ ಉನ್ನತ ಆಡಳಿತ ಮಂಡಳಿಯು ಭೇಟಿ ನೀಡಿ ಅದರ ವಸತಿ ಯೋಜನೆಗಳಿಗೆ ಸಂಬಂಧಪಟ್ಟಂತೆ ಮಾಹಿತಿ ಪಡೆದುಕೊಂಡಿದೆ ಎಂದು ಬಿಡಿಎಯ ಉನ್ನತ ಅಧಿಕಾರಿಗಳು ತಿಳಿಸಿದ್ದಾರೆ. ಹುಣ್ಣಿಗೆರೆ ಮತ್ತು ಕಣ್ಮಿಣಿಕೆ ವಸತಿ ಯೋಜನೆಗಳು ಜಿಮ್, ಈಜುಕೊಳ, ಬ್ಯಾಡ್ಮಿಂಟನ್ ಕೋರ್ಟ್ ಮತ್ತು ಇತರ ಹೊರಾಂಗಣ ಆಟಗಳನ್ನು ಹೊಂದಿರುವ ಕ್ಲಬ್ ಹೌಸ್ ನ್ನು ಹೊಂದಿವೆ. ಒಳಾಂಗಣ ಆಟಗಳಿಗೆ ಪ್ರತ್ಯೇಕ ಸ್ಥಳಗಳನ್ನು ಹೊಂದಿವೆ.



ತುಮಕೂರು ರಸ್ತೆ ಮತ್ತು ಮಾಗಡಿ ರಸ್ತೆಯ ನಡುವಿನ ದಾಸನಪುರ ಹೋಬಳಿಯಲ್ಲಿರುವ ಹುಣ್ಣಿಗೆರೆ ವಸತಿ ಸಂಕೀರ್ಣವು ಬಿಡಿಎಯ ಅತ್ಯಂತ ದುಬಾರಿ ಉದ್ಯಮವಾಗಿದ್ದು, 322 ವಿಲ್ಲಾಗಳನ್ನು ಹೊಂದಿದೆ, ಅವುಗಳಲ್ಲಿ 172 4 ಬಿಎಚ್‌ಕೆಗಳು ಮತ್ತು 150 3 ಬಿಎಚ್‌ಕೆ ವಸತಿ ಗೃಹಗಳಾಗಿವೆ. ಈ ಹಿಂದೆ ಒಂದು ಪ್ರಾಯೋಗಿಕ ಹಂತದಲ್ಲಿ, ಬಿಡಿಎ ತನ್ನ ಮೊದಲ ಒಂದು ಕೋಟಿಗೂ ಹೆಚ್ಚಿನ ಮನೆಗಳಿಗೆ ಸಾರ್ವಜನಿಕ ಪ್ರತಿಕ್ರಿಯೆ ತಿಳಿಯಲು ಮೂರು ತಿಂಗಳ ಹಿಂದೆ ಹುನ್ನಿಗೆರೆಯಲ್ಲಿ 25 ಮನೆಗಳನ್ನು ಹರಾಜು ಹಾಕಿತು.

**ಬೌರಿಂಗ್ ಕ್ಲಬ್ ಹುಣ್ಣಿಗೆರೆಗೆ ಒಪ್ಪಿಗೆ ಸಿಕ್ಕ ನಂತರವೇ ನಾವು ಹುನ್ನಿಗೆರೆಯಲ್ಲಿ ಮನೆಗಳ ಮಾರಾಟವನ್ನು ಮುಂದುವರಿಸಲು ಯೋಜಿಸಿದ್ದೇವೆ. ಮನೆಮಾಲೀಕರಿಗೆ ಈ ಬೌರಿಂಗ್ ಕ್ಲಬ್ ಮತ್ತು ಅದರ ಶಾಖೆಗಳಲ್ಲಿ ಸದಸ್ಯತ್ವ ಪಡೆಯುವ ಅವಕಾಶವಿದೆ ಎಂದು ಬಿಡಿಎ ಅಧಿಕಾರಿಗಳು ತಿಳಿಸಿದ್ದಾರೆ.**

ಕನ್ಮನಿಕೆಯಲ್ಲಿ, 700 ಕ್ಕೂ ಹೆಚ್ಚು ಫ್ಲಾಟ್‌ಗಳನ್ನು ಬಿಡಿಎ ಮಾರಾಟ ಮಾಡುತ್ತಿದೆ. ಇಲ್ಲಿನ ಕ್ಲಬ್ ಹೌಸ್ ನ್ನು ಬೌರಿಂಗ್ ಸ್ವಾಧೀನಪಡಿಸಿಕೊಳ್ಳಲಿದೆ ಎಂದು ನಾವು ಭಾವಿಸುತ್ತೇವೆ. ಅವರಿಗೆ ಕ್ಲಬ್ ನಡೆಸುವ ಅನುಭವ ಇರುವುದರಿಂದ ಎಲ್ಲಾ ನಿವಾಸಿಗಳಿಗೆ ಸಹಾಯವಾಗುತ್ತದೆ ಎಂದು ನಾವು ಭಾವಿಸುತ್ತೇವೆ ಎಂದರು.

# ಹಲ್ಲೆ, ಅಟ್ರಾಸಿಟಿ ಕೇಸ್‌ನಲ್ಲಿ ಕೆ.ಹೆಚ್ ಮುನಿಯಪ್ಪಗೆ ಜಾಮೀನು ಮಂಜೂರು!

• ಉದಯವಾಹಿನಿ, ಬೆಂಗಳೂರು

2013ರ ವಿಧಾನಸಭಾ ಚುನಾವಣೆ ವೇಳೆ ನಡೆದಿದ್ದ ಕೆಜಿಎಫ್ ಗಲಾಟೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎ1 ಆರೋಪಿಯಾಗಿರುವ ಸಚಿವ ಕೆ.ಹೆಚ್ ಮುನಿಯಪ್ಪಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

ಅಂದು ಕೆಜಿಎಫ್‌ನ ಕಾಂಗ್ರೇಸ್ ಅಭ್ಯರ್ಥಿಯಾಗಿದ್ದ ವಿ.ಶಂಕರ್ ಮೇಲೆ ಅಂದು ಸಂಸದರಾಗಿದ್ದ ಮುನಿಯಪ್ಪ ಹಾಗೂ ಬೆಂಬಲಿಗರು ಹಲ್ಲೆ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು.



ಹಲ್ಲೆ ಪ್ರಕರಣದಲ್ಲಿ ನ್ಯಾಯಾಲಯಕ್ಕೆ ಮುನಿಯಪ್ಪ ಗೈರಾಗುತ್ತಿದ್ದರು. ಹೀಗಾಗಿ ವಿಚಾರಣೆಗೆ ಹಾಜರಾಗದಿದ್ದರೆ ಬಂಧನ ವಾರೆಂಟ್ ಹೊರಡಿಸುವುದಾಗಿ ನ್ಯಾಯಮೂರ್ತಿ ಗಜಾನನ ಭಟ್ ಎಚ್ಚರಿಕೆ ನೀಡಿದರು. ಬಳಿಕ ಲಕ್ಷ್ಮೀನಾರಾಯಣ್ ಮತ್ತು ಮುನಿಯಪ್ಪ ಇಬ್ಬರೂ ನ್ಯಾಯಾಧೀಶರ ಮುಂದೆ ಹಾಜರಾದರು. ವಿಚಾರಣೆ ವೇಳೆ ನ್ಯಾಯಾಧೀಶರು 50 ಸಾವಿರ ರೂಪಾಯಿ ಶ್ಯೂರಿಟಿಯೊಂದಿಗೆ ಜಾಮೀನು ಮಂಜೂರು ಮಾಡಿದರು.

# ಅಕ್ರಮ ಅದಿರು ಸಾಗಣೆ ಆರೋಪ: ಸಾಕ್ಷ್ಯಾಧಾರಗಳ ಕೊರತೆ

• ಉದಯವಾಹಿನಿ, ಬೆಂಗಳೂರು

ಬಳ್ಳಾರಿಯ ವ್ಯಾಸನಕೆರೆ ಗಣಿಯಿಂದ ಅಕ್ರಮ ಅದಿರು ಸಾಗಣೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಆನಂದ ಸಿಂಗ್, ಗೋವಾದ ಹಾಲಿ ಸಚಿವ ರೋಹನ್ ಅಶೋಕ್ ಖಾವುಂತೆ ಸೇರಿದಂತೆ ಇತರರ ವಿರುದ್ಧದ ಕ್ರಿಮಿನಲ್ ಪ್ರಕರಣವನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ರದ್ದುಪಡಿಸಿದೆ. ಈ ಸಂಬಂಧ ಕಾಯ್ದಿರಿಸಿದ್ದ ಆದೇಶವನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಶುಕ್ರವಾರ ಪ್ರಕಟಿಸಿತು.

ಕರ್ನಾಟಕ ಲೋಕಾಯುಕ್ತದ ವಿಶೇಷ ತನಿಖಾ ತಂಡ ಪ್ರಕರಣವನ್ನು ಸಾಬೀತುಪಡಿಸಲು ಸಂಪೂರ್ಣವಾಗಿ ವಿಫಲವಾಗಿದೆ ಎಂದು ವಿಶೇಷ ನ್ಯಾಯಾಲಯವು ಮಾಜಿ ಸಚಿವ ಆನಂದ್ ಸಿಂಗ್ ಮತ್ತು ಗೋವಾ ಪ್ರವಾಸೋದ್ಯಮ ಸಚಿವ ರೋಹನ್ ಎಸ್ ಖೌಂಟೆ ಸೇರಿದಂತೆ 12 ಆರೋಪಿಗಳನ್ನು ಮತ್ತು ಮೂರು ಸಂಸ್ಥೆಗಳನ್ನು ಕಬ್ಬಿಣದ ಅದಿರು ಅಕ್ರಮ ರಫ್ತು ಪ್ರಕರಣದಲ್ಲಿ ಖುಲಾಸೆಗೊಳಿಸಿದೆ. ಬಿಜೆಪಿ ಶಾಸಕ ಆನಂದ್ ಸಿಂಗ್, ಬಿ ಎಸ್ ಗೋಪಾಲ ಸಿಂಗ್, ಬಿ ಎಸ್ ಪಾಂಡುರಂಗ ಸಿಂಗ್, ಮೆಸರ್ಸ್ ನೈವೇದ್ಯ ಲಾಜಿಸ್ಟಿಕ್ಸ್, ರಾಜೇಶ್ ಅಶೋಕ್ ಖಾವುಂತೆ, ರೋಹನ್ ಖಾವುಂತೆ, ಶಾಜು ನಾಯರ್, ರಿಯಾ ನಾಯರ್, ಮೊಹಮ್ಮದ್ ಮುನೀರ್, ಕ್ಲಾರಿಯಾ ಮಾರ್ಕೆಟಿಂಗ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್, ಆನಂದ್ ಸಿಂಗ್ ಮಾಲೀಕತ್ವದ ಎಸ್ ಬಿ ಮಿನರಲ್ಸ್ ಅನ್ನು ದೋಷಮುಕ್ತಗೊಳಿಸಲಾಗಿದೆ ಎಂದು ನ್ಯಾಯಾಲಯವು ಆದೇಶದಲ್ಲಿ ಹೇಳಿದೆ.

ಸಾಕ್ಷ್ಯಾಧಾರಗಳ ಕೊರತೆ ಕಾರಣ ನೀಡಿರುವ ನ್ಯಾಯಾಧೀಶರು, ಆನಂದ್ ಸಿಂಗ್ ಸೇರಿದಂತೆ ಎಲ್ಲಾ ಆರೋಪಿಗಳನ್ನೂ ಪ್ರಕರಣದಿಂದ ಖುಲಾಸೆಗೊಳಿಸಿ ಆದೇಶಿಸಿದ್ದಾರೆ. ''ಆರೋಪಿಗಳು, ಎಸ್ ಬಿ ಮಿನರಲ್ಸ್‌ಗೆ ಸೇರಿದ ಗಣಿಯಿಂದ 16,987 ಮೆಟ್ರಿಕ್ ಟನ್ ಅದಿರನ್ನು ಅಕ್ರಮವಾಗಿ ಸಾಗಣೆ ಮಾಡಿ ಸರ್ಕಾರದ ಬೊಕ್ಕಸಕ್ಕೆ 1.53 ಕೋಟಿ ನಷ್ಟ ಉಂಟುಮಾಡಿದ್ದಾರೆ ಎಂದು ಆರೋಪಿಸಲಾಗಿತ್ತು. ಆರೋಪಿಗಳ ವಿರುದ್ಧ ಐಪಿಸಿಯ ವಿವಿಧ ವಿಭಾಗಗಳು, ಗಣಿ ಮತ್ತು ಖನಿಜಗಳು (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಅರಣ್ಯ ನಿಯಮಗಳು, 1969 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಕ್ಕಾಗಿ ಪ್ರಕರಣ ದಾಖಲಿಸಲಾಗಿದೆ. ಸರ್ಕಾರಿ ಅಧಿಕಾರಿಗಳು, ಗಣಿ ಉದ್ಯಮಿಗಳು ಮತ್ತು ಇತರೆ ಖಾಸಗಿ ವ್ಯಕ್ತಿಗಳು ಅಕ್ರಮ ಮತ್ತು ಕಾನೂನುಬಾಹಿರವಾಗಿ ಅಕ್ರಮ ಕೂಟ ರಚಿಸಿಕೊಂಡು ಬೇಲೇಕೇರಿ ಬಂದರಿಗೆ ಅದಿರು ಸಾಗಿಸಿ, ಅಲ್ಲಿಂದ ಪರವಾನಗಿ ಪಡೆಯದೇ ವಿದೇಶಗಳಿಗೆ ಅದಿರು ರಫ್ತು ಮಾಡಿದ್ದರು. ಈ ಮೂಲಕ ಸರ್ಕಾರಕ್ಕೆ ಸೇರಿದ ಅದಿರನ್ನು ಕಳುವು ಮಾಡಿ, ವಂಚಿಸಿ, ಲಾಭ ಮಾಡಿದ್ದಾರೆ ಎಂದು ಆರೋಪಿಸಲಾಗಿತ್ತು. 2009 ಮತ್ತು 2010 ರ ನಡುವೆ ನಡೆದ ಅಪರಾಧಗಳಿಗಾಗಿ 2015 ರಲ್ಲಿ ಎಸ್‌ಐಟಿ ದಾಖಲಿಸಿದ ಪ್ರಕರಣದ ಪ್ರಕಾರ, ಪಿಸೆಸ್ ಎಕ್ಸಿಮ್ ಮುಂಬೈ ಕಾರವಾರ ಬಂದರಿನಿಂದ 14,000 ಮೆಟ್ರಿಕ್ ಟನ್ ಕಬ್ಬಿಣ ಬೇಲೆಕೇರಿ ಬಂದರಿನಿಂದ ಸುಮಾರು 6,000 ಮೆಟ್ರಿಕ್ ಟನ್ ಕಬ್ಬಿಣದ ಅದಿರನ್ನು ರಫ್ತು ಮಾಡಲು ಪಿಇಸಿ ಇಂಡಿಯಾ ಜೊತೆ ಒಪ್ಪಂದ ಮಾಡಿಕೊಂಡಿತ್ತು. ಅಗತ್ಯ ಪರವಾನಗಿಗಳನ್ನು ಪಡೆಯದೆ ಅಥವಾ ಸರ್ಕಾರಕ್ಕೆ ಅಗತ್ಯವಾದ ರಾಯಲ್ಟಿ ಮತ್ತು ತೆರಿಗೆಗಳನ್ನು ಪಾವತಿಸದೆ ಪಿಸೆಸ್ ಎಕ್ಸಿಮ್ ಮುಂಬೈ ವಿವಿಧ ಡೀಲರ್‌ಗಳಿಂದ 11,397.44 ಮೆಟ್ರಿಕ್ ಟನ್ ಪಡೆದಿದೆ ಎಂದು ಆರೋಪಿಸಲಾಗಿದೆ.



**ಕೊನೆಯ ತನಿಖಾ ಅಧಿಕಾರಿ ಎನ್‌ಎಚ್ ರಾಮಚಂದ್ರಯ್ಯ ಹಲವಾರು ಪರವಾನಗಿಗಳ ಸತ್ಯಾಸತ್ಯತೆಯನ್ನು ಪರಿಶೀಲಿಸದೆ ನ್ಯಾಯಾಲಯದ ಮುಂದೆ ದಾಖಲೆ ನೀಡಿದ್ದಾರೆ. ಕಾನೂನಿನ ಪ್ರಕಾರ ತನಿಖೆ ನಡೆಯುತ್ತದೆ ಎಂಬ ಭರವಸೆಯೊಂದಿಗೆ ತನಿಖೆಯನ್ನು ಕರ್ನಾಟಕ ಲೋಕಾಯುಕ್ತದ ಎಸ್‌ಐಟಿಗೆ ವಹಿಸಲಾಗಿತ್ತು ಎಂಬುದು ದುರದೃಷ್ಟಕರ. ಕಬ್ಬಿಣದ ಅದಿರನ್ನು ಸಾಗಿಸಿದ ಇತರ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದ್ದರೂ, ಕೊನೆಯ ತನಿಖಾ ಅಧಿಕಾರಿ, ತನಗೆ ಚೆನ್ನಾಗಿ ತಿಳಿದಿರುವ ಕಾರಣಗಳಿಗಾಗಿ, ಅವರನ್ನು ಸಾಕ್ಷಿಗಳಾಗಿ ವಿಚಾರಣೆಗೆ ಒಳಪಡಿಸಿ ಆರೋಪಪಟ್ಟಿ ಸಲ್ಲಿಸಿದ್ದರು'' ಎಂದು ನ್ಯಾಯಾಲಯ ಹೇಳಿದೆ.**

# ಡಿಕೆಶಿಗೆ ಬೆಳ್ಳಿ ಕಿರೀಟ ಹಾಕಿದ ಪಾಲನಹಳ್ಳಿ ಮಠದ ಸ್ವಾಮೀಜಿ

• ಉದಯವಾಹಿನಿ, ಬೆಂಗಳೂರು

ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಪಾಲನಹಳ್ಳಿ ಮಠದ ಸ್ವಾಮೀಜಿ ಬೆಳ್ಳಿ ಕಿರೀಟ ಹಾಕಿದ್ದಾರೆ. ಮಾಗಡಿ ತಾಲ್ಲೂಕು ಸೋಲೂರಿನ ಶ್ರೀ ಶನೈಶ್ವರ ಕ್ಷೇತ್ರ ಪಾಲನಹಳ್ಳಿ ಮಠದ ಸಿದ್ದರಾಜು ಸ್ವಾಮೀಜಿಗಳು ಡಿಕೆಶಿಗೆ ಕಿರೀಟ ಹಾಕಿದ್ದಾರೆ. ಸದಾಶಿವನಗರ ನಿವಾಸದಲ್ಲಿ ಡಿಕೆಶಿ ಭೇಟಿ ಮಾಡಿ ಸ್ವಾಮೀಜಿ ಅಭಿನಂದನೆ ಸಲ್ಲಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿ ಐದು ವರ್ಷ ಪೂರೈಸುತ್ತಿರುವ ಡಿಸಿಎಂ ಡಿಕೆಶಿಗೆ ಶಾಲು ಹೊದಿಸಿ ಹೂವಿನ ಹಾರ ಮತ್ತು ಕಿರೀಟ ತೊಡಿಸಿ ಅಭಿನಂದಿಸಿದ್ದಾರೆ.

# ಶಕ್ತಿ ಯೋಜನೆಗೆ ಸರ್ಕಾರ 2,000 ಕೋಟಿ ಹಣ ಬಾಕಿ ಕೊಡಬೇಕು

• ಉದಯವಾಹಿನಿ, ಬೆಂಗಳೂರು

ಸಾರಿಗೆ ಇಲಾಖೆಯ 4 ನಿಗಮಗಳು ನಷ್ಟದಲ್ಲಿವೆ. ಶಕ್ತಿ ಯೋಜನೆಗೆ ಸರ್ಕಾರ 2 ಸಾವಿರ ಕೋಟಿ ಹಣ ಬಾಕಿ ನೀಡಬೇಕು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದರು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಸಾರಿಗೆ ಇಲಾಖೆ ನಿಗಮಗಳ ನಷ್ಟದ ಬಗ್ಗೆ ಪ್ರಶ್ನೆ ಕೇಳಿದರು. ಇದಕ್ಕೆ ಸಚಿವ ರಾಮಲಿಂಗಾರೆಡ್ಡಿ ಉತ್ತರ ನೀಡಿದರು. ಕಳೆದ 5 ವರ್ಷಗಳಿಂದಲೂ 4 ಸಾರಿಗೆ ನಿಗಮಗಳು ನಷ್ಟದಲ್ಲಿವೆ. 2019-20ರಿಂದ 2023-24ವರೆಗೆ ಕೆಎಸ್‌ಆರ್‌ಟಿಸಿ- 1500.34 ಕೋಟಿ ನಷ್ಟ. ಬಿಎಂಟಿಸಿ- 1544.62 ಕೋಟಿ. ಕಲ್ಯಾಣ ಕರ್ನಾಟಕ ಸಾರಿಗೆ- 777.64 ಕೋಟಿ.ವಾಯುವ ವಾಯುವ್ಯ ಕರ್ನಾಟಕ ನಿಗಮ- 1386.58 ಕೋಟಿ ನಷ್ಟದಲ್ಲಿವೆ ಎಂದು ಸಚಿವರು ಅಂಕಿಅಂಶಗಳನ್ನ ಕೊಟ್ಟರು.

ಸಾರಿಗೆ ನಿಗಮಗಳು ನಷ್ಟದಲ್ಲಿವೆ. ಸರ್ಕಾರ ಸಹಕಾರ ಕೊಡದೇ ಹೋದರೆ ಸಾರಿಗೆ ನಿಗಮಗಳಿಗೆ ಕಷ್ಟ ಆಗುತ್ತದೆ. ಇಡೀ ದೇಶದಲ್ಲಿ ಸಾರಿಗೆ ನಿಗಮಗಳು ನಷ್ಟದಲ್ಲಿವೆ. ನಷ್ಟವನ್ನು ತಡೆಯಲು ಬಸ್ ಟಿಕೆಟ್ ದರ ಜಾಸ್ತಿ ಮಾಡಲಾಗಿದೆ. ಸಿಎಂ ಅವರು 2 ಸಾವಿರ ಕೋಟಿ ಲೋನ್ ಕೊಡಿಸಿದ್ದಾರೆ. ಅದನ್ನ ಸರ್ಕಾರ ತೀರಿಸುತ್ತದೆ. ಮೋಟಾರ್ ಟ್ಯಾಕ್ಸ್ ವಿನಾಯ್ತಿ ಸಾರಿಗೆ ಇಲಾಖೆಗೆ ಸರ್ಕಾರ ಕೊಟ್ಟಿದೆ ಎಂದು ತಿಳಿಸಿದರು. 2 ಸಾವಿರ ಕೋಟಿ ಶಕ್ತಿ ಯೋಜನೆ ಹಣವನ್ನ ಸರ್ಕಾರ ಬಾಕಿ ಉಳಿಸಿಕೊಂಡಿದೆ. 9,978 ಕೋಟಿ ಶಕ್ತಿ ಹಣ ಸರ್ಕಾರ ಕೊಡಬೇಕು. ಇದರಲ್ಲಿ 2 ಸಾವಿರ ಕೋಟಿ ಹಣ ಸರ್ಕಾರ ಬಾಕಿ ಉಳಿಸಿಕೊಂಡಿದೆ ಎಂದು ತಿಳಿಸಿದರು

# ಮಾಯಾಣ್ಣರವರಿಗೆ ಮಾನನಷ್ಟ ಮೊಕದ್ದಮೆ, 10ಲಕ್ಷ ರೂ. ದಂಡ

## ಸಿಟಿ ಸಿವಿಲ್ ಸೆಷನ್ಸ್ ನ್ಯಾಯಾಧೀಶರಾದ ರೇಣುಕಾ ಡಿ ರಾಯ್ಕರ್ ಆದೇಶ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಬೃಹತ್ ನಗರ ಪಾಲಿಕೆ ನೌಕರರು ಮತ್ತು ಅಧಿಕಾರಿಗಳ ಕಲ್ಯಾಣ ಸಂಘದ ವಿರುದ್ಧ ಬಿಬಿಎಂಪಿ ಪ್ರಥಮ ದರ್ಜೆ ಸಹಾಯಕ (ಎಫ್‌ಡಿಎ) ಮಾಯಣ್ಣ ಮತ್ತು ಅವರ ಬೆಂಬಲಿಗರು ಅಪಪ್ರಚಾರ ಮಾಡುವುದನ್ನು ಪ್ರತಿಬಂಧಿಸಿ ನಗರ ಸಿಟಿ ಸಿವಿಲ್ ಸೆಷನ್ಸ್ ನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಕೋರ್ಟ್. 24ನೇ ಹೆಚ್ಚುವರಿ ಸಿಟಿ ಸಿವಿಲ್ ಅಂಡ್ ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ ಈ ಆದೇಶ ನೀಡಿದೆ. ಅಲ್ಲದೇ ಆದೇಶದ ದಿನಾಂಕದಿಂದ 3 ತಿಂಗಳೊಳಗೆ ದೂರುದಾರ ಸಂಘಕ್ಕೆ ಹತ್ತು ಲಕ್ಷ ರೂಪಾಯಿಗಳ ನಷ್ಟವನ್ನು ಪಾವತಿಸುವಂತೆ ಪ್ರತಿವಾದಿ ಮಾಯಣ್ಣ ಅವರಿಗೆ ನ್ಯಾಯಾಧೀಶರಾದ ರೇಣುಕಾ ಡಿ ರಾಯ್ಕರ್ ಆದೇಶ ನೀಡಿದ್ದಾರೆ.

ಪ್ರತಿವಾದಿಯು ದಾಖಲಿಸಿರುವ ಪ್ರಶ್ನಿಸದ ವಾದಗಳು, ಮೌಖಿಕ ಮತ್ತು ದಾಖಲೆಪತ್ರ ಸಾಕ್ಷ್ಯಗಳಿಂದ. ದೂರುದಾರ ಸಾಬೀತು ಮಾಡಿರುವುದೇನೆಂದರೆ ಪ್ರತಿವಾದಿಯು ಮಾಡಿರುವ ವಿವಿಧ ಸುಳ್ಳು ದೂರುಗಳು, ಪ್ರಚಾರಗಳು ಇತ್ಯಾದಿಗಳಿಂದಾಗಿ ಸೊಸೈಟಿ ಅದರ ಅಧ್ಯಕ್ಷರು ಅನಾನುಕೂಲತೆ ಮತ್ತು ಕಿರುಕುಳವನ್ನು ಅನುಭವಿಸಿದ್ದಾರೆ. ಆದ್ದರಿಂದ. ದೂರುದಾರರು ಪ್ರಾರ್ಥಿಸಿದಂತೆ ಶಾಶ್ವತ ತಡೆಯಾಜ್ಞೆ ಪರಿಹಾರಕ್ಕೂ ಅರ್ಹರಾಗಿದ್ದಾರೆ ಎಂದು ಕೋರ್ಟ್ ಆದೇಶ ನೀಡಿದೆ.



**ಕಲ್ಯಾಣ ಸಂಘದ ವಿರುದ್ಧ ಬಿಬಿಎಂಪಿ**

ಪ್ರತಿವಾದಿಯು ಅಥವಾ ಅವರ ಕಡೆಯವರು ಫಿರ್ಯಾದಿ ಸಂಘ ಮತ್ತು ಅದರ ಪದಾಧಿಕಾರಿಗಳು, ಅದರ ಅಧ್ಯಕ್ಷ ಅಮೃತ್‌ರಾಜ್ ಅಥವಾ ಅವರ ಕುಟುಂಬ ಸದಸ್ಯರು ಮತ್ತು ಅವರಿಗೆ ಸಂಬಂಧಪಟ್ಟವರನ್ನು ಯಾವುದೇ ರೀತಿಯ ಚಾರಿತ್ರ್ಯ ವಧೆ ಅಥವಾ ಮಾನನಷ್ಟಕ್ಕೆ ಒಳಪಡಿಸುವುದನ್ನು ಕೋರ್ಟ್ ಪ್ರತಿಬಂಧಿಸಿ ತಡೆಯಜ್ಞೆ ಕೊಟ್ಟಿದೆ. ಆದೇಶದ ದಿನಾಂಕದಿಂದ 3 ತಿಂಗಳೊಳಗೆ ದೂರುದಾರ ಸಂಘಕ್ಕೆ ಹತ್ತು ಲಕ್ಷ ರೂಪಾಯಿಗಳ ನಷ್ಟವನ್ನು ಪಾವತಿಸುವಂತೆ ಪ್ರತಿವಾದಿ ಮಾಯಣ್ಣ ಅವರಿಗೆ 24ನೇ ಹೆಚ್ಚುವರಿ ಸಿಟಿ ಸಿವಿಲ್ ಅಂಡ್ ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ ಆದೇಶಿಸಿದೆ.

ಪ್ರತಿವಾದಿ ಮಾಯಾಣ್ಣ ಅವರು ಅಪಪ್ರಚಾರ ಮಾಡಿ ಸಂಘಕ್ಕೆ ಮತ್ತು ಅಧ್ಯಕ್ಷರು-ಪದಾಧಿಕಾರಗಳಿಗೆ ಮಾನಸಿಕ ಹಿಂಸೆ ಮತ್ತು ಕಿರುಕುಳ ನೀಡುತ್ತಿದ್ದಾರೆ. ಇಂಥ ಅಪಪ್ರಚಾರ ಮಾಡುವುದು, ಸುಳ್ಳು ಆರೋಪಗಳನ್ನು ಪ್ರಕಟಿಸುವುದು, ಸಂಘ ಮತ್ತು ಅಧ್ಯಕ್ಷರು-ಪದಾಧಿಕಾರಿಗಳ ವಿರುದ್ಧ ಇಲ್ಲಸಲ್ಲದ ಅಪಾದನೆಗಳನ್ನು ಮಾಡುತ್ತಾ ಚಾರಿತ್ರ್ಯವಧೆ ಅಥವಾ ಮಾನನಷ್ಟ ಮಾಡುವುದನ್ನು ನಿರ್ಬಂಧಿಸಿ ಶಾಶ್ವತ ತಡೆಯಾಜ್ಞೆ ನೀಡಬೇಕೆಂದು ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ನೌಕರರು ಮತ್ತು ಅಧಿಕಾರಿಗಳ ಕಲ್ಯಾಣ ಸಂಘ ಕೋರ್ಟ್ ಮೊರೆ ಹೋಗಿತ್ತು.

**ಸಂಘದ ಬಗ್ಗೆ ಅಥವಾ ಅಧ್ಯಕ್ಷರು, ಪದಾಧಿಕಾರಗಳ ಅವರ ಬಗ್ಗೆ ಅಪಪ್ರಚಾರ ಬರೆಯುವುದು. ಪ್ರಕಟಿಸುವುದು. ಪ್ರಚಾರ ಮಾಡುವುದು, ಪ್ರಸಾರ ಮಾಡುವುದು ಅಥವಾ ಪ್ರಕಟಿಸುವುದು ಅಥವಾ ಪ್ರಸಾರಕ್ಕೆ ಅವಕಾಶ ನೀಡುವುದು ಸೇರಿದಂತೆ ಯಾವುದೇ ರೀತಿಯಲ್ಲಿ ನೇರವಾಗಿ ಅಥವಾ ಪರೋಕ್ಷವಾಗಿ ತೊಡಗಿಸಿಕೊಳ್ಳುವುದು ಅಥವಾ ವರ್ತಿಸುವುದು ಅಥವಾ ನಕಾರಾತ್ಮಕವಾಗಿ ತೊಡಗುವುದಕ್ಕೆ ಶಾಶ್ವತ ತಡೆಯಾಜ್ಞೆಯ ಆದೇಶದ ಮೂಲಕ ನಿರ್ಬಂಧಿಸಲಾಗಿದೆ ಎಂದು ನ್ಯಾಯಾಧೀಶರು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.**

# ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣ ಸೂಕ್ತ ತನಿಖೆಯಾಗಲಿ: ಲಕ್ಷ್ಮಿ ಹೆಬ್ಬಾಳ್ಕರ್

• ಉದಯವಾಹಿನಿ, ಬೆಂಗಳೂರು

ಚಿತ್ರನಟಿ ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣ ಸೂಕ್ತ ತನಿಖೆಯಾಗಲಿ. ಆ ಬಳಿಕವಷ್ಟೇ ಪ್ರಕರಣದ ಸತ್ಯಾಸತ್ಯತೆ ತಿಳಿಯಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು. ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಪ್ರಭಾವಿ ಸಚಿವರೊಬ್ಬರ ಕೈವಾಡವಿದೆ ಎಂಬ ಆರೋಪದ ಕುರಿತು ಮಾಧ್ಯಮಗಳ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಪ್ರಕರಣ ಸೂಕ್ತ ತನಿಖೆಯಾಗಲಿ, ಆಗ ಗೊತ್ತಾಗಲಿದೆ ಎಂದರು. ಗ್ಯಾರಂಟಿ ಸಮಿತಿಗಳ ವಿರುದ್ಧದ ಬಿಜೆಪಿ ಪ್ರತಿಭಟನೆ ಕುರಿತು ಮಾತನಾಡಿದ ಅವರು, 2023ರಲ್ಲಿ ಸರ್ಕಾರ ರಚನೆಯಾದ ಬಳಿಕ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಬಳಿಕ ಸೂಕ್ತ ರೀತಿಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತರುವ ದೃಷ್ಟಿಯಿಂದ ಗ್ಯಾರಂಟಿ ಸಮಿತಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ರಚಿಸಲಾಯಿತು. ಈಗ ಸಮಿತಿಗಳನ್ನು ರದ್ದುಗೊಳಿಸುವಂತೆ ಪ್ರತಿಪಕ್ಷಗಳು ನಡೆಸುತ್ತಿರುವ ಹೋರಾಟಕ್ಕೆ ಅರ್ಥವಿಲ್ಲ ಎಂದು ಹೇಳಿದರು. ನಮ್ಮ ಯೋಜನೆಗಳನ್ನೇ ಬಿಜೆಪಿ ಇತರ ರಾಜ್ಯಗಳಲ್ಲಿ ಜಾರಿಗೆ ತಂದಿದೆ. ಮಹಾರಾಷ್ಟ್ರ ಸರ್ಕಾರ ನಮ್ಮದೇ ಗೃಹಲಕ್ಷ್ಮಿ ಯೋಜನೆಯನ್ನು ಲಾಡ್ಲಿ ಬೆಹೆನಾ ಹೆಸರಿನಲ್ಲಿ ಚುನಾವಣೆಗೂ ಮುನ್ನ ಎರಡು ತಿಂಗಳು ಹಣ ನೀಡಿತ್ತು. ಆದರೆ ಚುನಾವಣೆಯಲ್ಲಿ ಗೆದ್ದ ಬಳಿಕ ಈ ಯೋಜನೆಯನ್ನೇ ಬಂದ್ ಮಾಡಲಾಗಿದೆ. ಇದು ಬಿಜೆಪಿ ಸರ್ಕಾರಗಳ ಸ್ಥಿತಿ ಎಂದು ವ್ಯಂಗ್ಯವಾಡಿದರು. ಮಹಾರಾಷ್ಟ್ರ ಸರ್ಕಾರದ ಸಚಿವರಿಗೆ ಆರ್‌ಎಸ್‌ಎಸ್ ಕಾರ್ಯಕರ್ತರು ಸಹಾಯಕರಾಗಿದ್ದಾರೆ. ಅವರಿಗೆ ಅಲ್ಲಿನ ಸರ್ಕಾರ ಸಂಬಳ ನೀಡುತ್ತಿದೆ. ಅವರಲ್ಲೇ ತಪ್ಪು ಇಟ್ಟುಕೊಂಡು ನಮ್ಮ ಕಡೆ ಬೆಟ್ಟು ಮಾಡಿ ತೋರಿಸುತ್ತಿದ್ದಾರೆ ಎಂದು ದೂರಿದರು.



# ಹರಿದಾಸ ನಮನ

• ಉದಯವಾಹಿನಿ, ಬೆಂಗಳೂರು

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ಮಾರ್ಚ್ 13, ಗುರುವಾರ ಸಂಜೆ 7-00 ಗಂಟೆಗೆ ಶ್ರೀಮತಿ ಪದ್ಮಶ್ರೀ ಪ್ರಸಾದ್ ಅವರಿಂದ ಹರಿದಾಸ ನಮನ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ಶ್ರೀ ಅಮಿತ್ ಶರ್ಮಾ ಮತ್ತು ತಬಲಾ ವಾದನದಲ್ಲಿ ಶ್ರೀ ಸರ್ವೋತ್ತಮ ಸಹಕರಿಸಲಿದ್ದಾರೆ ಎಂದು ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಪವಮಾನಪುರ, ಬನಶಂಕರಿ 6ನೇ ಹಂತ ಬೆಂಗಳೂರು.



# ಲೋಕಾಯುಕ್ತದ 3 ಹಿರಿಯ ಅಧಿಕಾರಿಗಳ ವಿರುದ್ಧ ಕೇಂದ್ರ ಜಾಗೃತ ಆಯೋಗಕ್ಕೆ ದೂರು

## ಮೂರು ಪುಟದ ದೂರನ್ನು ಇಮೇಲ್, ರಿಜಿಸ್ಟರ್ ಅಂಚೆ ಮೂಲಕ ಕಳುಹಿಸಿದ್ದೇನೆ ಎಂದು ಸ್ನೇಹಮಯಿ ಕೃಷ್ಣ ಹೇಳಿಕೆ

• ಉದಯವಾಹಿನಿ, ಮೈಸೂರು

ಮುಡಾ ಹಗರಣದಲ್ಲಿ ಸಾಕಷ್ಟು ಸಾಕ್ಷಿ, ಆಧಾರಗಳು ಇದ್ದರೂ ಆರೋಪಿಗಳನ್ನು ರಕ್ಷಣೆ ಮಾಡಲು ಸುಳ್ಳು ವರದಿ ಸಲ್ಲಿಸಿದ ಲೋಕಾಯುಕ್ತದ ಮೂವರು ಹಿರಿಯ ಐಪಿಎಸ್ ಅಧಿಕಾರಿಗಳ ವಿರುದ್ಧ ಕೇಂದ್ರ ಜಾಗೃತಿ ಆಯೋಗಕ್ಕೆ ಮುಡಾ ಹಗರಣದ ದೂರುದಾರ ಸ್ನೇಹಮಯಿ ಕೃಷ್ಣ ದೂರು ಸಲ್ಲಿಸಿದ್ದಾರೆ. ಈ ಬಗ್ಗೆ ಮಾಧ್ಯಮಗಳ ಜೊತೆ ಮಾತನಾಡಿದ ಸ್ನೇಹಮಯಿ ಕೃಷ್ಣ, ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ಕುಟುಂಬ ಭಾಗಿಯಾಗಿರುವ ಕುರಿತು ಸಾಕಷ್ಟು ಸಾಕ್ಷಿ, ಆಧಾರಗಳು ಇದ್ದರೂ, ಆರೋಪಿಗಳನ್ನು ರಕ್ಷಣೆ ಮಾಡಲು ಲೋಕಾಯುಕ್ತ ಪೊಲೀಸರು ಸುಳ್ಳು ವರದಿಗಳನ್ನು ಸಲ್ಲಿಸಿದ್ದರು. ಈ ಬಗ್ಗೆ ಈ ಮೂವರು ಲೋಕಾಯುಕ್ತ ಮನೀಷ್ ಖರ್ಬೀಕರ್, ಸುಬ್ರಮಣ್ಯೇಶ್ವರ್ ರಾವ್, ಹಾಗೂ ಮೈಸೂರು ಲೋಕಾಯುಕ್ತ ಎಸ್‌ಪಿ ಟಿ.ಜೆ.ಉದ್ದೇಶ್ ವಿರುದ್ಧ ಕೇಂದ್ರದ ಜಾಗೃತ ಆಯೋಗಕ್ಕೆ ಮೂರು ಪುಟದ ದೂರನ್ನು ಇಮೇಲ್ ಹಾಗೂ ರಿಜಿಸ್ಟರ್ ಅಂಚೆ


ಉದಯವಾಹಿನಿ ಚಿತ್ರ

ಮೂಲಕ ಕಳುಹಿಸಿದ್ದೇನೆ ಎಂದು ಸ್ನೇಹಮಯಿ ಕೃಷ್ಣ ತಿಳಿಸಿದರು. ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ ವರದಿಯನ್ನು ಸಂಪೂರ್ಣವಾಗಿ ಪರಿಶೀಲನೆ ಮಾಡಿದ್ದೇನೆ. ಈ ವರದಿಯಲ್ಲಿ ಲೋಕಾಯುಕ್ತ ಪೊಲೀಸರು ಯಾವುದೇ ದಾಖಲಾತಿಗಳನ್ನು ಪರಿಶೀಲಿಸದೆ, ಯಾರನ್ನೋ ರಕ್ಷಣೆ ಮಾಡಲು ಸುಳ್ಳು ವರದಿ ತಯಾರಿಸಿ ನೀಡಿದ್ದಾರೆ.

ಅದರಲ್ಲಿ ಒಂದು ಉದಾಹರಣೆ ಎಂದರೆ, ಸಿದ್ದರಾಮಯ್ಯ ಅವರ ಭಾಮೈದ ಮಲ್ಲಿಕಾರ್ಜುನ ಸ್ವಾಮಿ 1998ರಲ್ಲಿ ಪ್ರಕರಣದ ಎ4 ಆರೋಪಿ ದೇವರಾಜ್ ಹೆಸರಿನಲ್ಲಿ ಸುಳ್ಳು ಪತ್ರ ಸೃಷ್ಟಿಸಿದ್ದ. ಆ ಪತ್ರಕ್ಕೆ ದೇವರಾಜು ಸಹಿಯನ್ನು ಮಲ್ಲಿಕಾರ್ಜುನ ಸ್ವಾಮಿ ಮಾಡಿ, ಅಪರಾಧ ಕೃತ್ಯವೆಸಗಿದ್ದಾರೆ.

ಈ ದಾಖಲೆಗಳು ವರದಿಯಲ್ಲಿ ಇವೆ. ಆದರೂ ಇದೆಲ್ಲ ಸಾಕ್ಷಿಗಳು ಇದ್ದರೂ, ಲೋಕಾಯುಕ್ತದ ಐಪಿಎಸ್ ಅಧಿಕಾರಿಗಳು ಸಾಕ್ಷಿಯಿಲ್ಲ ಎಂದು ಸುಳ್ಳು ವರದಿ ನೀಡಿದ್ದಾರೆ. ಯಾರನ್ನೋ ರಕ್ಷಣೆ ಮಾಡಲು ಈ ಅಧಿಕಾರಿಗಳು ಮುಂದಾಗಿದ್ದಾರೆ ಎಂದು ಕೇಂದ್ರ ಜಾಗೃತಿ ಆಯೋಗಕ್ಕೆ ದೂರು ಸಲ್ಲಿಸಿದ್ದೇನೆ ಎಂದು ಸ್ನೇಹಮಯಿ ಕೃಷ್ಣ ಮಾಹಿತಿ ನೀಡಿದರು.

> ಇನ್ನೂ ಲೋಕಾಯುಕ್ತ ವರದಿಯ ವಿರುದ್ಧ ಮೇಲ್ಮನವಿ ಸಲ್ಲಿಸಿದ್ದು, ಇದರ ಬಗ್ಗೆ ಇನ್ನೂ ದಿನಾಂಕ ನಿಗಧಿಯಾಗಿಲ್ಲ. ನ್ಯಾಯಾಲಯದ ಮುಂದೆ ಬಂದ ನಂತರ ದಾಖಲೆ ಸಮೇತ ಈ ವಿಚಾರವನ್ನು ಕೋರ್ಟ್‌ಗೆ ಮನವರಿಕೆ ಮಾಡಿಕೊಡುತ್ತೇನೆ. ಮುಡಾ ಹಗರಣದ ಸಮಗ್ರ ತನಿಖೆ ನಡೆಸುವಂತೆ ಈ ಪ್ರಕರಣವನ್ನು ಸಿಬಿಐಗೆ ನೀಡುವಂತೆ ಹೈಕೋರ್ಟ್‌ನಲ್ಲಿ ಮನವಿ ಮಾಡಿರುವ ವಿಚಾರದಲ್ಲಿ ವಕೀಲರು ವಾದ ಮಂಡಿಸುತ್ತಾರೆ. ಹಾಗೂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಾನು ವಾದ ಮಂಡಿಸುತ್ತೇನೆ ಎಂದು ಹೇಳಿದರು.

# ಕಾರ್ಮಿಕರನ್ನು ನೇರ ಪಾವತಿ ವ್ಯಾಪ್ತಿಗೆ ತರಲು ಒತ್ತಾಯ

• ಉದಯವಾಹಿನಿ, ಮೈಸೂರು

ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ವಾಹನ ಚಾಲಕರು, ಲೋಡರ್ಸ್‌ಗಳು, ಒಳಚರಂಡಿ ವಿಭಾಗದ ಸ್ವಚ್ಛತಾ ಕಾರ್ಮಿಕರನ್ನು ನೇರ ಪಾವತಿ ವ್ಯಾಪ್ತಿಗೆ ತರಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಮನೆ ಮನೆ ಕಸ ಸಂಗ್ರಹ


ಉದಯವಾಹಿನಿ ಚಿತ್ರ

ಜಿಲ್ಲೆಯ ಸುಮಾರು 13 ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಮನೆ ಮನೆ ಕಸ ಸಂಗ್ರಹಿಸುವ ಸ್ವಚ್ಛತಾ ವಾಹನ ಚಾಲಕರು, ಲೋಡರ್ಸ್‌ಗಳು, ಒಳಚರಂಡಿ ವಿಭಾಗದ ಸ್ವಚ್ಛತಾ ಕಾರ್ಮಿಕರನ್ನು ಸರ್ಕಾರ ನೇರ ಪಾವತಿಗೆ ತರುವುದಾಗಿ ವಚನ ನೀಡಿತ್ತು. ಆದರೆ, ಬಜೆಟ್‌ನಲ್ಲಿ ಸೇರಿಸದೇ ಉದಾಸೀನ ಮಾಡಿದೆ. ತಮ್ಮ ಆರೋಗ್ಯ ಕೆಡಿಸಿಕೊಂಡು ಉದ್ಯೋಗ ಭದ್ರತೆ ಇಲ್ಲದೆ, ಉಚಿತ ಚಿಕಿತ್ಸೆ ಪಾಲಿಸಿ ಅಥವಾ ಸರ್ಕಾರ ಕಾರ್ಮಿಕ ಇಲಾಖೆ ನಿಗದಿಪಡಿಸಿರುವ ಕನಿಷ್ಠ ವೇತನ ವಂಚನೆಗೊಳಗಾಗುವುದಲ್ಲದೆ, ಹತ್ತಾರು ವರ್ಷಗಳ ಸೇವೆ ಮಾಡಿ, ಕರ್ತವ್ಯದಲ್ಲಿ ಇದ್ದಾಗ ಮೃತರಾದರೆ ಕುಟುಂಬ ವರ್ಗದವರಿಗೆ ಅನುಕಂಪದ ಆಧಾರದ ಮೇಲೆ ಕೆಲಸ ನೀಡದೆ ಇರುವುದರಿಂದ ಕೂಡಲೇ ಈ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು. ಸುಮಾರು 158 ಕಾಯಂ ಪೌರಕಾರ್ಮಿಕರಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮಲಳವಾಡಿ ಗ್ರಾಮಕ್ಕೆ ಸೇರಿದ 1 ಎಕರೆ 20 ಗುಂಟೆ ಜಾಗದಲ್ಲಿ ಜಿ3 ಮಾದರಿಯ ಮನೆಗಳನ್ನು ನಿರ್ಮಿಸಲು 2017-18ನೇ ಸಾಲಿನಲ್ಲಿ ಕ್ರಿಯಾ ಯೋಜನೆ ಮಾಡಲಾಗಿತ್ತು. ಪರಿಶಿಷ್ಟ ಜಾತಿಗೆ ಸೇರಿದ ಪೌರಕಾರ್ಮಿಕರು ಎಂಬ ಕಾರಣಕ್ಕೆ ನಗರ ಮಧ್ಯದಲ್ಲಿ ವಾಸಿಸಲು ಅವಕಾಶ ನೀಡದೆ ಕೆಸರೆ ಗ್ರಾಮದ 499, 500, 501ಕ್ಕೆ ಸೇರಿದ ಸರ್ವೇ ನಂಬರ್‌ಗಳಲ್ಲಿ ಈ ಮನೆಗಳನ್ನು ನಿರ್ಮಿಸಲು ನಗರ ಪಾಲಿಕೆ ಅನುಮತಿ ನೀಡಿದೆ. ಈಗ ಕಟ್ಟಡ ನಿರ್ಮಿಸಲು 18 ತಿಂಗಳ ಕಾಲಾವಕಾಶ ಮುಗಿದಿದ್ದರೂ ಇನ್ನೂ ನಿರ್ಮಿಸಿಲ್ಲ ಎಂದು ಆರೋಪಿಸಿದರು. ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಡಿ.ಆರ್.ರಾಜು, ಪದಾಧಿಕಾರಿಗಳಾದ ಮಂಚಯ್ಯ, ದಿನೇಶ್ ಕುಮಾರ್, ಶಂಕರ್, ಕೆ.ಲಕ್ಷ್ಮಣ್, ಕೆ.ನಂಜಪ್ಪ ಬಸವನಗುಡಿ, ಕುಮಾರಸ್ವಾಮಿ, ಕೃಷ್ಣ, ಶ್ರೀನಿವಾಸ್, ಸೋಮಯ್ಯ, ಪವಿತ್ರಾ, ವಸಂತಕುಮಾರಿ, ಮಹದೇವ, ಅಂಜಲಿ, ಮಂಜುನಾಥ ಸೇರಿದಂತೆ ಹಲವರು ಭಾಗವಹಿಸಿದ್ದರು.

> ಆಯ್ಕೆಯಾದ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿ ಮನೆಗಳನ್ನು ನೀಡಿದ ಮೈಸೂರು ಮಹಾನಗರ ಪಾಲಿಕೆ, ಫಲಾನುಭವಿಗಳಿಂದ ಹೆಚ್ಚುವರಿ ಖರ್ಚನ್ನು ಪೌರಕಾರ್ಮಿಕರ ಮೇಲೆ ಹೊರಿಸಿ, ಪ್ರತಿಯೊಬ್ಬರೂ 3 ಲಕ್ಷ ವಂತಿಕೆ ಹಣ ಕಟ್ಟಲು ಸೂಚಿಸಿರುವುದು ಯಾವ ನ್ಯಾಯ ಎಂದು ಕಿಡಿಕಾರಿದರು. ಈ ಹಣವನ್ನು ಪೌರಕಾರ್ಮಿಕರು ಕಟ್ಟಲು ಕಷ್ಟ ಸಾಧ್ಯ. ಹೀಗಾಗಿ, 158 ಪೌರಕಾರ್ಮಿಕರ ಫಲಾನುಭವಿಗಳ ಪರವಾಗಿ ಪಾಲಿಕೆ ಭರಿಸಬೇಕು. ಪಾಲಿಕೆಯಲ್ಲಿ ಕೆಲಸ ಮಾಡುತ್ತಿರುವ ನೇರ ಪಾವತಿ ಹೆಚ್ಚುವರಿ, ಮನೆ ಮನೆ ಕಸ ಸಂಗ್ರಹಣೆ ಮಾಡುವ ವಾಹನ ಚಾಲಕರು, ಲೋಡರ್ಸ್, ಸ್ವಚ್ಛತಾ ಕಾರ್ಮಿಕರ ಆರೋಗ್ಯ ದೃಷ್ಟಿಯಿಂದ 5 ಲಕ್ಷ ರೂ. ವಿಮೆ ಮಾಡಿಸಬೇಕು ಎಂದು ಒತ್ತಾಯಿಸಿದರು.

# ಗಮನ ಸೆಳೆಯುತ್ತಿರುವ ಭೇದಕಗಳು ಚಿತ್ರಪ್ರದರ್ಶನ

• ಉದಯವಾಹಿನಿ, ಮೈಸೂರು

ನಗರದ ಇಂಡಿಯನ್ ಹೆರಿಟೇಜ್ ಸಿಟೀಸ್ ನೆಟ್ ವರ್ಕ್ ಫೌಂಡೇಶನ್, ಹಸ್ತಾ ಗ್ಯಾಲರಿ ಮತ್ತು ಗ್ಯಾಲರಿ ಕ್ರೆಸೆಂಟ್ ಸಹಯೋಗದೊಂದಿಗೆ ಹೆರಿಟೇಜ್ ಹೌಸ್‌ನಲ್ಲಿ ಆಯೋಜಿಸಿರುವ ಭೇದಕಗಳು ಎಂಬ 10 ಕಲಾವಿದರ ಚಿತ್ರಗಳ ಪ್ರದರ್ಶನವು ನೋಡುಗರ ಗಮನ ಸೆಳೆಯುತ್ತಿದೆ. ತಮ್ಮ ಕೃತಿಗಳಲ್ಲಿ ಸ್ಥಳೀಯ ಮತ್ತು ಜಾಗತಿಕ ವಿಷಯಗಳನ್ನು ಮಿಶ್ರಣ ಮಾಡುವಲ್ಲಿ ಹೆಸರುವಾಸಿಯಾದ ಭಾರತೀಯ ಸಮಕಾಲೀನ ಕಲಾವಿದ ಎನ್.ಎಸ್. ಹರ್ಷ ಭಾಗವಹಿಸಿದ್ದ ಪ್ರದರ್ಶನವು, ಸಹ ಕಲಾವಿದರೊಂದಿಗೆ ತಮ್ಮ ಒಳನೋಟಗಳನ್ನು ಹಂಚಿಕೊಂಡಿದ್ದು ಭಾಗವಹಿಸುವವರಿಗೆ ಅವರ ಸೃಜನಶೀಲ ಪ್ರಕ್ರಿಯೆ ಮತ್ತು ಸಾಂಸ್ಕೃತಿಕ ದೃಷ್ಟಿಕೋನಗಳ ಬಗ್ಗೆ ತಿಳಿದುಕೊಳ್ಳಲು ಒಂದು ಅನನ್ಯ ಅವಕಾಶವನ್ನು ನೀಡಿತು. ಈ ಕಾರ್ಯಕ್ರಮವು ವಿವಿಧ ಕಲಾಕೃತಿಗಳನ್ನು ಪ್ರದರ್ಶಿಸಿತು. ಪ್ರದರ್ಶನವು ಚರ್ಚೆ


ಉದಯವಾಹಿನಿ ಚಿತ್ರ

ಮತ್ತು ತೊಡಗಿಸಿಕೊಳ್ಳುವಿಕೆಗೆ ಒಂದು ರೋಮಾಂಚಕ ಸ್ಥಳವನ್ನು ನೀಡಿತು. ಚಿತ್ರ ಕಲಾವಿದರಾದ ಅಪರ್ಣಾ ರಾಜಪಾಂಡಿಯನ್, ಬೆನ್ನಿ ಡಿಸಾ, ಲೋಕೇಶ್ವರ ರಾವ್ ಮಾದಿರಾಜು, ಮಲ್ಲಿಕಾ ಬುಲುಸು, ಪ್ರವೀಣ್ ಸಿಡಿಯಾಳ್, ರೇಖಾ ಶ್ರೀವತ್ಸನ್, ರಿಯಾ ಅಬೂಬಕರ್, ಶೋಭಾರಾಣಿ ಪಸುಮೃತಿ, ಸುಬ್ರಹ್ಮಣ್ಯ ಬೆಳ್ಳಣ್ ಮತ್ತು ಉಷಾ ಬಾಲಾಯ್ಯ ದೇವರ ಅವರು ತಮ್ಮ ಕಲಾಕೃತಿಗಳನ್ನು ಪ್ರದರ್ಶಿಸಿದ್ದು, ಮಾ.16 ರವರೆಗೆ ಬೆಳಗ್ಗೆ 11 ರಿಂದ ಸಂಜೆ 7 ರವರೆಗೆ ಪ್ರದರ್ಶನವಿರುತ್ತದೆ.

# ರಾಜಕಾರಣ ಕಲುಷಿತ ಗೊಳಿಸಬೇಡಿ: ಬಿ.ನಾಗೇಂದ್ರಕುಮಾರ್

• ಉದಯವಾಹಿನಿ, ಕೆ.ಆರ್.ಪೇಟೆ

ಸರ್ಕಾರಿ ಅಧಿಕಾರಿಯಾಗಿದ್ದು ತಮ್ಮ ಹೆಸರಿನಲ್ಲಿ ಅಭಿಮಾನಿ ಬಳಗವನ್ನು ಕಟ್ಟಿಕೊಂಡು ಆರ್.ಟಿ.ಓ ಅಧಿಕಾರಿ ಮಲ್ಲಿಕಾರ್ಜುನ್ ಕ್ಷೇತ್ರದಲ್ಲಿ ರಾಜಕಾರಣ ಮಾಡುತ್ತಿರುವುದು ಅಕ್ಷಮ್ಯ ಅಪರಾಧ. ಸಜ್ಜನ ರಾಜಕಾರಣಕ್ಕೆ ಹೆಸರಾಗಿರುವ ಕೃಷ್ಣರಾಜಪೇಟೆ ವಿಧಾನ ಸಭಾ ಕ್ಷೇತ್ರವನ್ನು ನಿಮ್ಮ ಹಣ ಬಲದ ರಾಜಕಾರಣದ ಮೂಲಕ ಕಲುಷಿತಗೊಳಿಸಬೇಡಿ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ನಾಗೇಂದ್ರಕುಮಾರ್ ಆರ್.ಟಿ.ಓ ಅಧಿಕಾರಿ ಮಲ್ಲಿಕಾರ್ಜುನ್ ವಿರುದ್ಧ ಕಿಡಿಕಾರಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲ್ಲೂಕಿನ ಆಲಂಬಾಡಿ ಕಾವಲು ಗ್ರಾಮ ಪಂಚಾಯತಿ ವ್ಯಾಪ್ತಿಯ ಮುಖಂಡರು, ಆಲಂಬಾಡಿ ಕಾವಲು ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ವಿಜೇತರಾದ


ಉದಯವಾಹಿನಿ ಚಿತ್ರ

ನೂತನ ನಿರ್ದೇಶಕರುಗಳೊಂದಿಗೆ ಅವರು ಸುದ್ದಿಗೋಷ್ಠಿ ನಡೆಸಿ ಮಲ್ಲಿಕಾರ್ಜುನ್ ವಿರುದ್ಧ ವಾಗ್ದಾಳಿ ನಡೆಸಿದರು.

ಆಲಂಬಾಡಿ ಕಾವಲು ಗ್ರಾಮ ಆರ್.ಟಿ.ಓ ಮಲ್ಲಿಕಾರ್ಜುನ್ ಅವರ ಸ್ವಗ್ರಾಮ. ಇಲ್ಲಿನ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಚುನಾವಣೆ ನಡೆಸದೆ ಎಲ್ಲಾ 12 ಜನ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲು ಸಹಕಾರ ಸಂಘದ ವ್ಯಾಪ್ತಿಯ ಎಲ್ಲಾ ಮುಖಂಡರು ಪಕ್ಷಾತೀತವಾಗಿ ತೀರ್ಮಾನಿಸಿದ್ದರು.

ಆದರೆ ಆರ್.ಟಿ.ಓ ಮಲ್ಲಿಕಾರ್ಜುನ್ ಇದಕ್ಕೆ ಆಸ್ಪದ ನೀಡಲಿಲ್ಲ. ಬದಲಾಗಿ ಆರ್.ಟಿ.ಓ ಮಲ್ಲಿಕಾರ್ಜುನ್ ಅಭಿಮಾನಿ ಬಳಗದ ಹೆಸರಿನಲ್ಲಿ ಕರಪತ್ರಗಳನ್ನು ಮುದ್ರಿಸಿ ತಮ್ಮದೇ ಪಡೆಯನ್ನು ಕಟ್ಟಿಕೊಂಡು ಚುನಾವಣೆ ನಡೆಯಲು ಕಾರಣಕರ್ತರಾದರು. ಸರ್ಕಾರಿ ಅಧಿಕಾರಿಯಾಗಿದ್ದರೂ ತಾವೇ ಸ್ವತಃ ಪ್ರಚಾರ ನಡೆಸಿ ಹಣ ಬಲದ ಮೂಲಕ ಚುನಾವಣೆಯಲ್ಲಿ ತಮ್ಮ ಬೆಂಬಲಿಗರನ್ನು ಗೆಲ್ಲಿಸಿಕೊಳ್ಳಲು ಪ್ರಯತ್ನಿಸಿದರು. ಆದರೆ ಗ್ರಾಮದ ಜನ ಹಣ ಬಲಕ್ಕೆ ಒತ್ತುಕೊಡಲಿಲ್ಲ. ನನ್ನ ನೇತೃತ್ವದಲ್ಲಿ ಸ್ವಾಭಿಮಾನಿ ಬಳಗವನ್ನು ಕಟ್ಟಿ ಚುನಾವಣೆಯ ಅಕಾಡಕ್ಕೆ ಇಳಿಸಿದ್ದ 08 ಜನ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಡುವ ಮೂಲಕ ಮಲ್ಲಿಕಾರ್ಜುನ್ ಅವರ ಹಣ ಬಲದ ರಾಜಕಾರಣವನ್ನು ತಿರಸ್ಕರಿಸಿದ್ದಾರೆ.

ಆರ್.ಟಿ.ಓ ಮಲ್ಲಿಕಾರ್ಜುನ್ ಕಾಂಗ್ರೆಸ್ ಪರವಿದ್ದಾರೆ ಎಂದು ಒಂದಷ್ಟು ಕಾಂಗ್ರೆಸ್ ಕಾರ್ಯಕರ್ತರು ಅವರೊಂದಿಗೆ ಒಡನಾಟ ಇಟ್ಟುಕೊಂಡಿದ್ದರು. ಪಕ್ಷದ ಸಿದ್ದಾಂತಕ್ಕಿಂತ ಹಣ ಬಲವೇ ಮುಖ್ಯ ಎನ್ನುವ ಮಲ್ಲಿಕಾರ್ಜುನ್ ಅವರ ಚಿಂತನೆಗಳಿಗೆ ಅವರ ಸ್ವಗ್ರಾಮ ಆಲಂಬಾಡಿ ಕಾವಲು ಜನ ಉತ್ತರಿಸಿದ್ದಾರೆ. ಮಲ್ಲಿಕಾರ್ಜುನ್ ಅವರ ಸಮಾಜ ಸೇವೆಗೆ ನಮ್ಮ ವಿರೋಧವಿಲ್ಲ. ಆದರೆ ಯಾವುದೇ ಸಿದ್ಧಾಂತ ಹಾಗೂ ಪಕ್ಷ ನಿಷ್ಠೆಯಿಲ್ಲದ ಕಾಂಗ್ರೆಸ್, ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳ ಬೆನ್ನಿಗೆ ಚೂರಿ ಹಾಕಿದ ಬೆರಳೆಣಿಕೆಯ ಜನರಿಂದ ಅವರು ದಾರಿ ತಪ್ಪುತ್ತಿದ್ದಾರೆ. ಹಣ ಮತ್ತು ಅಧಿಕಾರವಿದ್ದವರು ಸಮಾಜದಲ್ಲಿ ತಗ್ಗಿ ಬಗ್ಗಿ ನಡೆಯಬೇಕು. ಇಲ್ಲದಿದ್ದರೆ ಜನ ಚುನಾವಣೆಗಳಲ್ಲಿ ತಕ್ಕ ಪಾಠ ಕಲಿಸುತ್ತಾರೆ ಎಂದು ಬಿ.ನಾಗೇಂದ್ರ ಕುಮಾರ್ ಹೇಳಿದರು.

# ಕ್ರೀಡೆಯಲ್ಲಿ ಸಾಧನೆಗೈಯ್ಯಲು ಯುವಜನರಿಗೆ ಹೆಚ್ಚಿನ ಅವಕಾಶಗಳ ಅಗತ್ಯವಿದೆ

• ಉದಯವಾಹಿನಿ, ಚಾಮರಾಜನಗರ,

ಕ್ರೀಡಾಕ್ಷೇತ್ರದಲ್ಲಿ ಸಾಧನೆಗೈಯ್ಯಲು ಯುವಕ, ಯುವತಿಯರಿಗೆ ವೇದಿಕೆ ಒದಗಿಸುವ ಮೂಲಕ ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ನಗರದ ಜಿಲ್ಲಾ ಪೊಲೀಸ್ ಕ್ರೀಡಾ ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ ಮಹಿಳಾ ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿ ಬಳಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಮಹಿಳೆಯರಿಗೆ ಅಂತರಾಷ್ಟ್ರೀಯ ಮಹಿಳಾ ದಿನದ ಶುಭಾಷಯಗಳನ್ನು ತಿಳಿಸಿದ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ನಮ್ಮ ಜಿಲ್ಲೆಯಲ್ಲಿಯೂ ಸಾಕಷ್ಟು ಕ್ರೀಡಾ ಪ್ರತಿಭೆಗಳಿದ್ದಾರೆ. ಕ್ರೀಡೆಗಳು ಯುವಜನರಿಗೆ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಮುಂಚೂಣಿಗೆ ಬರಲು ನೆರವಾಗಲಿವೆ. ಮುಖ್ಯವಾಗಿ ಕ್ರೀಡಾಪಟುಗಳಿಗೆ ದೈಹಿಕ ಹಾಗೂ ಮಾನಸಿಕ ಸದೃಢತೆ ಅವಶ್ಯವಾಗಿದೆ. ಕ್ರೀಡೆಯಲ್ಲಿ ಹೆಣ್ಣುಮಕ್ಕಳಿಗೂ ಸಮಾನಾವಕಾಶ ಕಲ್ಪಿಸುವ ಗುರಿಯನ್ನು ಜಿಲ್ಲಾಡಳಿತ ಹೊಂದಿದೆ ಎಂದರು.

ಜಿಲ್ಲೆಯಲ್ಲಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲು ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕಾಗಿ


ಉದಯವಾಹಿನಿ ಚಿತ್ರ

ದೆ. ನುರಿತ ತರಬೇತುದಾರರ ಅಗತ್ಯವಿದೆ. ಒಟ್ಟಿನಲ್ಲಿ ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯವಾಗಿದೆ. ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಕ್ರೀಡಾ ಮನೋಭಾವ ಎಲ್ಲರಲ್ಲೂ ಬರಬೇಕು ಎಂದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಂತರಾಷ್ಟ್ರೀಯ ಖೋ-ಖೋ ಕ್ರೀಡಾಪಟು ಚೈತ್ರ ಅವರ ಸಾಧನೆಯನ್ನು ಪ್ರಶಂಸಿದರು. ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಅವರು ಮಾತನಾಡಿ ಮನುಷ್ಯನಿಗೆ ಶಿಕ್ಷಣದಷ್ಟೇ ಕ್ರೀಡೆಯು ಮುಖ್ಯವಾಗಿದೆ. ಮಹಿಳೆಯರು ಕ್ರೀಡೆಯೂ ಸೇರಿದಂತೆ ಎಲ್ಲಾ ರಂಗಗಳಲ್ಲಿಯೂ ತಮ್ಮ ಛಾಪು ಮೂಡಿಸುತ್ತಿದ್ದಾರೆ. ಪುರುಷರಿಗೆ ಸರಿಸಮಾನವಾಗಿ ಎಲ್ಲಾ ಕ್ಷೇತ್ರಗಳಲ್ಲಿ ಮುನ್ನುಗ್ಗುತ್ತಿದ್ದಾರೆ. ಇದು ಆರೋಗ್ಯಕರ ಬೆಳವಣಿಗೆಯಾಗಿದೆ. ಹೆಣ್ಣುಮಕ್ಕಳ ಸಾಧನೆಗೆ ಚೈತ್ರ ಅವರು ಸ್ಪೂರ್ತಿಯಾಗಿದ್ದಾರೆ ಎಂದು ತಿಳಿಸಿದರು. ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಅಂತರಾಷ್ಟ್ರೀಯ ಖೋ-ಖೋ ಕ್ರೀಡಾಪಟು ಟಿ. ನರಸೀಪುರ ತಾಲ್ಲೂಕಿನ ಕುರಬೂರಿನ ಚೈತ್ರ ಅವರು ತಾವು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ನೆರವಾದ ತರಬೇತುದಾರ ಮಂಜುನಾಥ್ ಅವರನ್ನು ಸ್ಮರಿಸಿ, ಬಳಿಕ ಮಾತನಾಡಿ ಮಹಿಳೆಯರು ಕ್ರೀಡೆಯಲ್ಲಿ ಹೆಚ್ಚಾಗಿ ಭಾಗವಹಿಸಬೇಕು. ಸೋಲು ಗೆಲುವು ಪ್ರಮುಖವಾಗಬಾರದು. ಸೋತಾಗ ಕುಗ್ಗದೇ, ಗೆದ್ದಾಗ ಹಿಗ್ಗದೇ ಮುನ್ನಡೆಯಬೇಕು. ಆಗಮಾತ್ರ ಸಾಧನೆ ನಮ್ಮನ್ನು ಹಿಂಬಾಲಿಸಲಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಹಾಜರಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಕ್ರೀಡಾಜ್ಯೋತಿಯನ್ನು ಕ್ರೀಡಾಪಟುಗಳಿಗೆ ಹಸ್ತಾಂತರಿಸಿದರು. ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ನಗರಸಭೆ ಉಪಾಧ್ಯಕ್ಷರಾದ ಮಮತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಕೆ. ಸುರೇಶ್, ಯುವ ಸ್ಪಂದನ ಅಧಿಕಾರಿ ಶಾಂತರಾಜು, ಇತರರು ಕಾರ್ಯಕ್ರಮದಲ್ಲಿ ಇದ್ದರು.

> ಅಧ್ಯಕ್ಷತೆ ವಹಿಸಿ ಮಾತನಾಡಿದ ನಗರಸಭೆ ಅಧ್ಯಕ್ಷ ಎಸ್. ಸುರೇಶ್ ಅವರು ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪಾಲ್ಗೊಂಡು ಜಿಲ್ಲೆಗೆ ಕೀರ್ತಿ ತರಬೇಕು. ಉತ್ತಮ ಸಾಧನೆಗೈಯ್ಯಲು ಇದು ಇತರರಿಗೂ ಪ್ರೇರಣೆಯಾಗಲಿದೆ ಎಂದರು.

# ಸ್ಥಳದಲ್ಲೇ 81 ಪ್ರಕರಣಗಳ ಇತ್ಯರ್ಥ

• ಉದಯವಾಹಿನಿ, ರಾಮನಗರ

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರ ನೇತೃತ್ವದಲ್ಲಿ ಕುಂದುಕೊರತೆ, ದೂರುಗಳ ವಿಚಾರಣೆ ಹಾಗೂ ಪ್ರಕರಣ ವಿಲೇವಾರಿ ವಿಚಾರವಾಗಿ ಜಿಲ್ಲಾಮಟ್ಟದ ಅಧಿಕಾರಿಗಳು, ದೂರುದಾರರು ಹಾಗೂ ಎದುರುದಾರರು ಜೊತೆ ಸೋಮವಾರ ಮತ್ತು ಮಂಗಳವಾರ ನಡೆದ 2 ದಿನಗಳ ಸಭೆಯಲ್ಲಿ 81 ಪ್ರಕರಣಗಳು ಸ್ಥಳದಲ್ಲೇ ಇತ್ಯರ್ಥವಾದವು. 'ಎರಡು ದಿನ ಸುಮಾರು 170 ಪ್ರಕರಣಗಳನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಲು ಆಯ್ಕೆ ಮಾಡಿಕೊಳ್ಳಲಾಗಿತ್ತು. ಆ ಪೈಕಿ ಶೇ 70ರಷ್ಟು ಪ್ರಕರಣಗಳು ವಿಲೇವಾರಿಯಾಗಿವೆ. 81 ಪ್ರಕರಣಗಳನ್ನು ಸ್ಥಳದಲ್ಲಿಯೇ ಇತ್ಯರ್ಥಪಡಿಸಲಾಗಿದೆ. ಜಿಲ್ಲಾಡಳಿತದ ಸಹಕಾರದಿಂದಾಗಿ ಸಭೆ ಯಶಸ್ವಿಯಾಯಿತು' ಎಂದು ನ್ಯಾ. ಕೆ.ಎನ್. ಫಣೀಂದ್ರ ಹೇಳಿದರು.

'ಲೋಕಾಯುಕ್ತದಲ್ಲಿ ದಾಖಲಾಗುವ ದೂರುಗಳನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲಾಗುತ್ತದೆ. ಕೆಲಸ ಮಾಡದಿರುವುದು, ವಿಳಂಬ ಮಾಡುವುದು, ಕರ್ತವ್ಯಲೋಪದ ಕುರಿತು ಕ್ರಮ ಕೈಗೊಳ್ಳಲಾಗುವುದು.

ಸರ್ಕಾರಿ ಕಚೇರಿಗೆ ಯಾವುದೇ ಅರ್ಜಿ ಸಲ್ಲಿಕೆಯಾದಾಗ ನಿಯಮ ಪ್ರಕಾರವಿದ್ದರೆ ಅಧಿಕಾರಿಗಳು ಪರಿಗಣಿಸಬೇಕು. ನಿಯಮಬಾರಹಿರವಾಗಿದ್ದರೆ ವಜಾ ಮಾಡಬೇಕು. ಹಾಗೆಯೇ ಇರಿಸಿಕೊಂಡು ಕಾಲ ಕಳೆಯಬಾರದು' ಎಂದು ಸಲಹೆ ನೀಡಿದರು. 'ಅಧಿಕಾರಿಗಳು ಲೋಕಾಯುಕ್ತ ಕಾಯ್ದೆ ಓದಿಕೊಳ್ಳಬೇಕು.


ಉದಯವಾಹಿನಿ ಚಿತ್ರ

ಆಗ ಕರ್ತವ್ಯ ಲೋಪ, ದುರಾಡಳಿತವನ್ನು ಕಾಯ್ದೆಯಲ್ಲಿ ಹೇಗೆ ವ್ಯಾಖ್ಯಾನಿಸಲಾಗಿದೆ ಎಂಬುದು ಗೊತ್ತಾಗುತ್ತದೆ ಶೇ 1ರಷ್ಟಿರುವ ಸರ್ಕಾರಿ ನೌಕರರೇ ರಾಜ್ಯದ ಜನರ ಜೀವನವನ್ನು ಉತ್ತಮಗೊಳಿಸಲು ಶ್ರಮಿಸಬೇಕು. ಎರಡು ದಿನಗಳ ವಿಚಾರಣಾ ಸಭೆಯಲ್ಲಿ ಎಲ್ಲರಿಗೂ ಸಮಾಧಾನ ತರುವ ತೀರ್ಪು ನೀಡಲಾಗಿದೆ. ಹಲವು ಪ್ರಕರಣಗಳಿಗೆ ಸಂಬಂಧಿಸಿದಂತೆ ನಾವು ನೋಟೀಸ್ ನೀಡಿದಾಗ, ಅಧಿಕಾರಿಗಳು ಎಚ್ಚೆತ್ತುಕೊಂಡು ಸಮಸ್ಯೆಗಳನ್ನು ಪರಿಹಾರ ಮಾಡಿರುವುದು ಕಂಡು ಬಂದಿದೆ' ಎಂದು ಹೇಳಿದರು.

**ದೂರವಾಣಿಯಲ್ಲೂ ವಿಚಾರಣೆ:** ವಿಚಾರಣಾ ಸಭೆಯಲ್ಲಿ ಕೆಲ ಪ್ರಕರಣಗಳ ಅಹವಾಲುದಾರರು ಹಾಗೂ ಎದುರುದಾರರು ಸಭೆಗೆ ಗೈರು ಹಾಜರಾಗಿದ್ದರು. ಆಗ ಉಪ ಲೋಕಾಯುಕ್ತ ನ್ಯಾ. ಕೆ.ಎನ್. ಫಣೀಂದ್ರ ಅವರು, ಅಂತಹವರ ಮೊಬೈಲ್ ಸಂಖ್ಯೆಗೆ ಕರೆ ಮಾಡಿ ವಿಚಾರಣೆ ನಡೆಸಿ ತೀರ್ಪು ನೀಡಿದ್ದು ವಿಶೇಷವಾಗಿತ್ತು.

# ಗಂಡಿನದು ಯಾಜಮಾನಿಕೆ, ಹೆಣ್ಣಿನದು ದಾಸ್ಯದ ಕೆಲಸ

## ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟನೆ

• ಉದಯವಾಹಿನಿ, ಮೈಸೂರು

ಗಂಡಸ್ಸಿನ ಕೆಲಸ ಯಾಜಮಾನಿಕೆ. ಹೆಣ್ಣಿನದು ದಾಸ್ಯದ ಕೆಲಸ. ಮುತ್ತೈದತನ ಪಾವಿತ್ರ್ಯತೆ ಎಲ್ಲವನ್ನೂ ಹೆಣ್ಣಿಗೆ ಹೇರಲಾಗಿದೆ ಎಂದು ಸಂಸ್ಕೃತ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಪದ್ಮಾಶೇಖರ್ ಅಭಿಪ್ರಾಯಪಟ್ಟರು.

ನಗರದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಮಂಗಳವಾರ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ಚರಿತ್ರೆಯನ್ನು ಅವಲೋಕಿಸಿದರೆ ಹೆಣ್ಣನ್ನು ಒಪ್ಪುವುದು ಪುರುಷರಿಗೆ ಅವಮಾನದ ಸಂಗತಿಯಾಗಿದೆ. ಭಾರತ ಮಾತ್ರವಲ್ಲ ಜಗತ್ತಿನಲ್ಲಿಯೇ ಗಂಡು ತಾನೇ ಶ್ರೇಷ್ಠವೆಂದು ಸ್ಥಾಪಿತ ಮೌಲ್ಯಗಳು ಪ್ರತಿಪಾದಿಸಿವೆ ಎಂದರು.

ಗಂಡಸ್ಸಿನ ಕೆಲಸ ಯಾಜಮಾನಿಕೆ. ಹೆಣ್ಣಿನದು ದಾಸ್ಯದ ಕೆಲಸ. ಮುತ್ತೈದತನ ಪ್ರಾವಿತ್ರ್ಯತೆ ಎಲ್ಲವನ್ನೂ ಹೆಣ್ಣಿಗೆ ಹೇರಲಾಯಿತು. ಇಡೀ ವ್ಯವಸ್ಥೆ ಗಂಡಿಗೆ ಅಧಿಕಾರ ಪ್ರಾಪ್ತ ಮಾಡಿದರೆ ಹೆಣ್ಣಿಗೆ ಯಾವುದೇ ಅಧಿಕಾರ ನೀಡಲಿಲ್ಲ. ಮನೆಯ ಕೆಲಸಕ್ಕೆ ಸೀಮಿತ



ಮಾಡಲಾಯಿತು ಎಂದು ವಿವರಿಸಿದರು.

ಮಹಿಳಾ ದಿನ ಪ್ರತ್ಯೇಕವಾಗಿ ಆಚರಿಸಬೇಕೆ ಎಲ್ಲ ದಿನವೂ ನಮ್ಮದೇ. ನಮ್ಮನ್ನು ನಾವು ನೋಡಿಕೊಳ್ಳಲು, ನಡೆದು ಬಂದ ದಾರಿ, ಮುಂದಿನ ನಡೆ, ಭವಿಷ್ಯದಲ್ಲಿ ಎದುರಿಸಬೇಕಾದ ಸವಾಲುಗಳು, ಹೆಣ್ಣಿನ ಸಂಕಟಗಳಿಗೆ ಉತ್ತರದಾಯಿತ್ವ ಪಡೆದುಕೊಳ್ಳಲು, ಸಮಾಜದ ಲಿಂಗ ತಾರತಮ್ಯ ವಿರುದ್ಧವಾಗಿ ನಿಲ್ಲಲಿ ಮಹಿಳಾ ದಿನ ಯಾಕೇ ಆಚರಿಸಬೇಕಿದೆ ಎಂದು ಹೇಳಿದರು.

ಲಿಂಗ ತಾರತಮ್ಯದ ವಿರುದ್ಧ ಹೋರಾಟ

ಹೆಣ್ಣು ಸಹಜವಾಗಿ ಮಾತೃ ಹೃದಯಿ. ಸಹ ಜೀವನ, ಹೊಂದಾಣಿಕೆ ಬಾಳ್ವೆ ನಡೆಸುತ್ತಾಳೆ. ಅವಳಿಗೆ ಬದುಕು ಕಟ್ಟುವ ಛಲ ಇದೆ. ಮನುಕುಲ ಬೆಳೆಸುವ ಉತ್ಪಾದಕ ಘಟಕದ ಅಸ್ಮಿತೆ ಇದೆ. ಗಂಡು-ಹೆಣ್ಣು ಇಬ್ಬರಿಗೂ ಸಮಾನ ಶೈಕ್ಷಣಿಕ ಎಚ್ಚರ ಮತ್ತು ಆರ್ಥಿಕ ಸಮತೆ ಅನುಷ್ಠಾನಕ್ಕೆ ಬಂದರೆ ಲಿಂಗ ತಾರತಮ್ಯ ನಿವಾರಣೆಯಾಗುತ್ತದೆ ಎಂದು ಹೇಳಿದರು.

ಕುಲಪತಿ ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಿದ್ದರು. ಮುಕ್ತವಿವಿ ವ್ಯವಸ್ಥಾಪನಾ ಮಂಡಲಿ ಸದಸ್ಯೆ, ಉದ್ಯಮಿ ಪ್ರಾಚೀಗೌಡ, ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ್ ಕುಮಾರ್, ಅಧ್ಯಯನ ವಿಭಾಗದ ಡೀನ್ ಪ್ರೊ.ರಾಮನಾಥಂ ನಾಯ್ಡು ಇದ್ದರು. ಶೈಕ್ಷಣಿಕ್ ಡೀನ್ ಪ್ರೊ.ಎನ್ ಲಕ್ಷ್ಮೀ ಸ್ವಾಗತಿಸಿದರು. ಗಾಯಕ ಅಮ್ಮ ರಾಮಚಂದ್ರ ಪ್ರಾರ್ಥಿಸಿದರು. ನಿವೃತ್ತರಾಗಲಿರುವ ಪ್ರೊ.ಎನ್ ಲಕ್ಷ್ಮೀ ಮತ್ತು ಪರೀಕ್ಷಾಂಗ ವಿಭಾಗದ ಸಿಬ್ಬಂದಿ ವಸಂತ ಅವರನ್ನು ಸನ್ಮಾನಿಸಲಾಯಿತು.

> ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಶಕ್ತಗೊಳಿಸಬೇಕು. ಲಿಂಗ ತಾರತಮ್ಯದ ವಿರುದ್ಧ ಹೋರಾಟ ಮಾಡಬೇಕು. ಎಲ್ಲಾ ಶಾಸನಬದ್ಧವಾದ ಅಧಿಕಾರ ಸಿಗಬೇಕು. ಆರೋಗ್ಯ ಸ್ಥಿತಿ ಉತ್ತಮವಾಗಿಟ್ಟುಕೊಳ್ಳಬೇಕು. ಸಾಕ್ಷರತೆ ಪಡೆದಿದ್ದೂ ಸಬಲೀಕರಣ ಆಗದಿರುವ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು. ಮಹಿಳೆಯರಿಗೆ ಕಾನೂನಿನ ಬಲ ಇದ್ದಾಗಿಯೂ ಮಹಿಳೆಯರ ಮೇಲಾಗುತ್ತಿರುವ ದೌರ್ಜನ್ಯ ಕೊನೆಗೊಂಡಿಲ್ಲ. ಮಹಿಳೆಯರು ಭೋಗದ ವಸ್ತುವಾಗಿ ಕಾಣಲಾಗುತ್ತಿದೆ. ಇದಕ್ಕೆ ಕಾರಣ ಏನು ಮಹಿಳೆಯರಿಗೆ ಸಾಮಾಜಿಕ ನ್ಯಾಯ ಸಿಗುವ ತನಕ ಹೋರಾಟ ಮುಂದುವರಿಸಬೇಕು ಎಂದು ತಿಳಿಸಿದರು.
> -ಶೈಕ್ಷಣಿಕ ಡೀನ್ ಪ್ರೊ.ಎನ್ ಲಕ್ಷ್ಮೀ

# ಮಿನಿ ನ್ಯೂಸ್

## ಪ್ರಾಣಿ ಬಲಿ ನಿಷೇಧಿಸಿ ಮೈಸೂರು ಜಿಲ್ಲಾಧಿಕಾರಿ ಆದೇಶ

• ಉದಯವಾಹಿನಿ, ಮೈಸೂರು

ಕಪ್ಪಡಿ ಕ್ಷೇತ್ರದಲ್ಲಿ ಭಕ್ತಾದಿಗಳು, ಸಾರ್ವಜನಿಕರು ಯಾವುದೇ ಪ್ರಾಣಿ, ಪಕ್ಷಿ ಬಲಿ ನೀಡುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಆದೇಶಿಸಿದ್ದಾರೆ. ಸಾರ್ವಜನಿಕರ ಹಿತದೃಷ್ಠಿಯಿಂದ ಕೆ.ಆರ್.ನಗರ ತಾಲೂಕಿನ ಶ್ರೀಕಪ್ಪಡಿ ಕ್ಷೇತ್ರದ ಶ್ರೀರಾಚಪ್ಪಾಜಿ ಅವರ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಕರ್ನಾಟಕ ಪ್ರಾಣಿ ಬಲಿ ನಿಷೇಧ ಕಾಯ್ದೆ-1959 ಮತ್ತು ನಿಯಮ 1963ರನ್ವಯ ಅಡಿಯಲ್ಲಿ ದೇವಸ್ಥಾನಗಳಲ್ಲಿ ದೇವರ ಹೆಸರಿನಲ್ಲಿ ಪ್ರಾಣಿಗಳ ಬಲಿ ನೀಡುವುದು ಕಾನೂನಿಗೆ ವಿರುದ್ಧ. ಮಾ.25ರವರೆಗೆ ದೇವಸ್ಥಾನದ ಸುತ್ತಮುತ್ತ ಹಾಗೂ ಸಂಬಂಧಿಸಿದ ವ್ಯಾಪ್ತಿಯಲ್ಲಿ ಬಲಿ ನೀಡುವುದನ್ನು ನಿಷೇಧಿಸಲಾಗಿದೆ ಎಂದು ಡಿಸಿ ಜಿ.ಲಕ್ಷ್ಮಿಕಾಂತ್ ರೆಡ್ಡಿ ಆದೇಶದಲ್ಲಿ ತಿಳಿಸಿದ್ದಾರೆ.

## ಹುಲಿ ಮರಿಯ ತುಂಟಾಟ, ವಿಡಿಯೋ ವೈರಲ್!

• ಉದಯವಾಹಿನಿ, ಚಾಮರಾಜನಗರ,

ಜಿಲ್ಲೆಯ ಸುಪ್ರಸಿದ್ಧ ಬಂಡಿಪುರ ಅರಣ್ಯದ ಸಫಾರಿ ವಲಯದಲ್ಲಿ ಹುಲಿ ಮರಿಯ ತುಂಟಾಟ ಸಾಮಾಜಿಕ ತಾಣದಲ್ಲಿ ವೈರಲ್ ಆಗಿದೆ. ನೆನ್ನೆ ಸಂಜೆ ಹುಲಿ ಮರಿಯೊಂದು ತನ್ನ ತಾಯಿಯ ಜೊತೆ ತುಂಟಾಟವಾಡುತ್ತಾ ಮುದ್ದಾಡುತ್ತಿರುವ ಅಪರೂಪದ ವಿಡಿಯೋ ಹಾಗೂ ಚಿತ್ರವನ್ನು ವನ್ಯ ಜೀವಿ ಛಾಯಾಗ್ರಾಹಕ ಕಿರಣ್ ಮಿಠಾಯಿ ಕೊಳ್ಳೇಗಾಲ ರವರು ತಮ್ಮ ಕ್ಯಾಮೆರಾದಲ್ಲಿ ಸೆರೆ ಹಿಡಿದಿದ್ದಾರೆ. ಈ ಹುಲಿ ಮರಿಯ ಚೆನ್ನಾಟವು ಸಾಮಾಜಿಕ ಜಾಲತಾಣದಲ್ಲಿ ಸಖತ್ ವೈರಲ್ ಆಗಿದ್ದು, ಛಾಯಾಗ್ರಾಹಕ ಕಿರಣ್‌ರವರು ತಮ್ಮ ಕ್ಯಾಮಾರದಲ್ಲಿ ಸೆರೆಹಿಡಿದಿರುವುದಕ್ಕೆ ಎಲ್ಲೆಡೆ ಭಾರಿ ಮೆಚ್ಚುಗೆ ವ್ಯಕ್ತವಾಗಿದೆ.

## ರೈಲ್ವೆ ಮೇಲ್ವೇತುವೆ: ಜಿಲ್ಲಾಧಿಕಾರಿ ಸ್ಥಳ ಪರಿಶೀಲನೆ

• ಉದಯವಾಹಿನಿ, ಗುಬ್ಬಿ

ತಾಲ್ಲೂಕಿನ ನಿಟ್ಟೂರು ಹೋಬಳಿ ಬೆಣಚಿಗೆರೆ ಸಮೀಪ ನಿರ್ಮಾಣ ಮಾಡಲು ಉದ್ದೇಶಿಸಿರುವ ರೈಲ್ವೆ ಮೇಲ್ವೇತುವೆ ಸ್ಥಳಕ್ಕೆ ಮಂಗಳವಾರ ಜಿಲ್ಲಾಧಿಕಾರಿ ಶುಭಕಲ್ಯಾಣ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ರೈಲ್ವೆ ಮೇಲೇತುವೆ ನಿರ್ಮಾಣಕ್ಕೆ ರೈತರ ಜಮೀನುಗಳನ್ನು ಸ್ವಾಧೀನ ಮಾಡಬೇಕಾಗಿರುವುದರಿಂದ ರೈತರ ಜೊತೆ ಚರ್ಚೆ ನಡೆಸಿದರು. ಸರ್ಕಾರದ ನಿಯಮಾನುಸಾರ ರೈತರಿಗೆ ಪರಿಹಾರದ ಹಣ ನೀಡಲಾಗುವುದು. ರೈತರು ಸಹಕರಿಸಿದಲ್ಲಿ ಕಾಮಗಾರಿಯನ್ನು ಶೀಘ್ರವೇ ಆರಂಭಿಸಲಾಗುವುದು ಎಂದು ತಿಳಿಸಿದರು. ಶೀಘ್ರವೇ ಜಂಟಿ ಸರ್ವೆ ನಡೆಸಿ ಭೂಸ್ವಾಧೀನ ಪ್ರಕ್ರಿಯೆಗೆ ಮುಂದಾಗಬೇಕು. ತಾಲ್ಲೂಕಿನಲ್ಲಿ ಮೂರು ರೈಲ್ವೆ ಮೇಲೇತುವೆ ಕಾಮಗಾರಿಗೆ ಅನುಮೋದನೆ ದೊರಕಿದೆ. ಶೀಘ್ರವೇ ಕಾರ್ಯ ಆರಂಭಮಾಡಲಾಗುವುದು. ರೈಲ್ವೆ ಮೇಲೇತುವೆ ನಿರ್ಮಾಣದಿಂದ ಸಾರ್ವಜನಿಕರಿಗೆ ಹಾಗೂ ಸ್ಥಳೀಯರಿಗೆ ಅನುಕೂಲವಾಗುತ್ತದೆ ಎಂದು ತಿಳಿಸಿದರು. ಜಂಟಿ ಸರ್ವೆ ನಡೆಸಿದ ತಕ್ಷಣವೇ ಸಂಬಂಧಿಸಿದ ರೈತರಿಗೆ ನೋಟಿಸ್ ನೀಡಿ ಪರಿಹಾರದ ಹಣ ನೀಡಲಾಗುವುದು. ರೈತರು ತಕರಾರು ಮಾಡಿದಲ್ಲಿ ಹಣವನ್ನು ನ್ಯಾಯಾಲಯದಲ್ಲಿ ಠೇವಣಿ ಇಟ್ಟು ಕಾಮಗಾರಿಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಭೂಸ್ವಾಧೀನ ಪಡಿಸಿಕೊಳ್ಳುತ್ತಿರುವ ರೈತರ ಜಮೀನುಗಳಿಗೆ ವೈಜ್ಞಾನಿಕ ಮತ್ತು ಸ್ಥಳೀಯ ಮಾರುಕಟ್ಟೆ ದರದಂತೆ ಪರಿಹಾರ ನೀಡಬೇಕು. ಇಲ್ಲವಾದಲ್ಲಿ ರೈತರು ಸಂಕಷ್ಟಕ್ಕೆ ಸಿಲುಕುವರು, ರೈತರ ಕಷ್ಟಗಳನ್ನು ಅರ್ಥೈಸಿಕೊಂಡು ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ಗ್ರಾಮಸ್ತರು ಒತ್ತಾಯಿಸಿದರು. ತಹಶೀಲ್ದಾರ್ ಆರತಿ ಬಿ, ಎಡಿಎಲ್‌ಆರ್ ತಿಮ್ಮಯ್ಯ, ಕಂದಾಯ ಅಧಿಕಾರಿಗಳು, ರೈಲ್ವೆ ಅಧಿಕಾರಿಗಳು ಹಾಜರಿದ್ದರು.

## ಚಿಕ್ಕನಾಯಕನಹಳ್ಳಿ ಮಾಹಿತಿ ಹಕ್ಕಿನ ಉಲ್ಲಂಘನೆ: ಪುರಸಭಾ ಸದಸ್ಯ ಪ್ರತಿಭಟನೆ

• ಉದಯವಾಹಿನಿ, ಚಿಕ್ಕನಾಯಕನಹಳ್ಳಿ

'ಪುರಸಭೆಯ 2023-24 ಹಾಗೂ 24-25ರ ಸಾಲಿನ ಆಡಳಿತಾಧಿಕಾರಿ ಅವಧಿಯ ಜಮಾ ಖರ್ಚಿನ ಬಗ್ಗೆ ಮಾಹಿತಿ ಹಕ್ಕು ಕಾಯ್ದೆಯಡಿ ಮಾಹಿತಿ ಕೇಳಿದರೆ ನೀಡುತ್ತಿಲ್ಲ' ಎಂದು ಪುರಸಭಾ ಸದಸ್ಯ ರೇಣುಕಪ್ರಸಾದ್ (ಶ್ಯಾಮ್ ) ಪುರಸಭೆ ಮುಂದೆ ಮಂಗಳವಾರ ಪ್ರತಿಭಟನೆ ನಡೆಸಿದರು.

'ಒಂದು ವರ್ಷದಿಂದ ಕೇಳುತ್ತಾ ಬಂದಿದ್ದರು ಮಾಹಿತಿ ನೀಡದೆ ಸಬೂಬು ಹೇಳುತ್ತಿದ್ದಾರೆ. ಆದರೆ ಇತ್ತೀಚೆಗೆ ಹಿಂಬರಹ ನೀಡಿ ನೀವು ಕೋರಿರುವ ಮಾಹಿತಿ ತುಂಬಾ ಅಗಾಧವಾಗಿದ್ದು ನೀಡಲು ಸಾಧ್ಯವಾಗುತ್ತಿಲ್ಲ. ಮಾನವ ಸಂಪನ್ಮೂಲದ ಕೊರತೆಯಿಂದ ತಾವು ಕಚೇರಿ ವೇಳೆಯಲ್ಲಿ ಮಾಹಿತಿ ವೀಕ್ಷಿಸಬಹುದು ಎಂದು ತಿಳಿಸಿದ್ದಾರೆ. ಕೂಡಲೇ ನನಗೆ ಮಾಹಿತಿ ಒದಗಿಸಬೇಕು, ಇಲ್ಲವಾದರೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸುವೆ' ಎಂದು ಎಚ್ಚರಿಕೆ ನೀಡಿದರು.


## ತುಮಕೂರು: 129 ಕೇಂದ್ರದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ

• ಉದಯವಾಹಿನಿ, ತುಮಕೂರು

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಾರ್ಚ್ 21ರಿಂದ ಆರಂಭವಾಗಲಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಜಿಲ್ಲೆಯಾದ್ಯಂತ 129 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ನಗರದಲ್ಲಿ ಮಂಗಳವಾರ ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆ-10 ಸಂಬಂಧ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಗೂ ಅಧಿಕಾರಿಗಳ ಸಭೆ ನಡೆಯಿತು. ನಗರದಲ್ಲಿ ಮಂಗಳವಾರ ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆ-10 ಸಂಬಂಧ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಗೂ ಅಧಿಕಾರಿಗಳ ಸಭೆ ನಡೆಯಿತು. ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿ.ಪಂ ಸಿಇಒ ಜಿ.ಪ್ರಭು, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಎಚ್.ಕೆ.ಮನಮೋಹನ, ಗಿರಿಜಾ, ಡಯಟ್ ಪ್ರಾಂಶುಪಾಲ ಕೆ.ಮಂಜುನಾಥ, ಪರೀಕ್ಷೆ ಜಿಲ್ಲಾ ನೋಡಲ್ ಅಧಿಕಾರಿ ಮಾಧವರೆಡ್ಡಿ, ಶಿಕ್ಷಣ ಅಧಿಕಾರಿ ಎ.ಟಿ.ರಂಗದಾಸಪ್ಪ ಇತರರು ಭಾಗವಹಿಸಿದ್ದರು.

## ಅಮೆರಿಕ ಉಪಾಧ್ಯಕ್ಷ ಜೆ.ಡಿ ವ್ಯಾನ್ಸ್ ಮಾರ್ಚ್ ಅಂತ್ಯದ ವೇಳೆಗೆ ಭಾರತಕ್ಕೆ ಆಗಮನ ಸಾಧ್ಯತೆ

**ನ್ಯೂಯಾರ್ಕ್:** ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಈ ತಿಂಗಳ ಕೊನೆಯಲ್ಲಿ ಭಾರತಕ್ಕೆ ಭೇಟಿ ನೀಡುವ ಸಾಧ್ಯತೆಯಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ. ತಮ್ಮ ಪತ್ನಿ ಭಾರತೀಯ ಮೂಲದ ಉಷಾ ವ್ಯಾನ್ಸ್ ಅವರೊಂದಿಗೆ ವ್ಯಾನ್ಸ್ ಅವರು ಈ ತಿಂಗಳ ಕೊನೆಯಲ್ಲಿ ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಪೊಲಿಟಿಕೊ ವರದಿಯೊಂದು ತಿಳಿಸಿದೆ.



ಕಳೆದ ತಿಂಗಳು ಫ್ರಾನ್ಸ್ ಮತ್ತು ಜರ್ಮನಿ ಪ್ರವಾಸ ಕೈಗೊಂಡಿದ್ದ ವ್ಯಾನ್ಸ್ ಅವರು ಭಾರತಕ್ಕೆ ಆಗಮಿಸಿದರೆ ಉಪಾಧ್ಯಕ್ಷರಾದ ಬಳಿಕ ಅವರ ಎರಡನೇ ವಿದೇಶ ಪ್ರವಾಸ ಇದಾಗಿದೆ. ಅವರ ಪತ್ನಿ ಉಷಾವ್ಯಾನ್ಸ್ ಅವರ ಪೋಷಕರಾದ ಕ್ರಿಶ್ ಚಿಲುಕುರಿ ಮತ್ತು ಲಕ್ಷ್ಮಿ ಚಿಲುಕುರಿ 1970 ರ ದಶಕದ ಉತ್ತರಾರ್ಧದಲ್ಲಿ ಭಾರತ ದಿಂದ ಅಮೆರಿಕಕ್ಕೆ ವಲಸೆ ಹೋಗಿ ನೆಲೆಸಿದರು. ಉಷಾ, ಜೆಡಿ ವ್ಯಾನ್ಸ್ ಅವರು ಯೇಲ್ ಕಾನೂನು ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವಾಗ ಭೇಟಿಯಾಗಿ ಪರಿಚಯವಾಗಿ ಪರಸ್ಪರ ಪ್ರೀತಿ ಹುಟ್ಟಿಕೊಂಡಿತು. ಉಷಾ ಅವರು, ಅಮೆರಿಕ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಜಾನ್ ಜಿ ರಾಬರ್ಟ್ಸ್ ಮತ್ತು ಕೊಲಂಬಿಯಾ ಸರ್ಕ್ಯೂಟ್‌ನ ಜಿಲ್ಲಾ ಮೇಲ್ಮನವಿ ನ್ಯಾಯಾಲಯದ ನ್ಯಾಯಾಧೀಶ ಬ್ರೆಟ್ ಕವನಾಗ್ ಅವರ ಕೈಕೆಳಗೆ ಕೆಲಸ ಮಾಡಿದ್ದಾರೆ. ಅವರು ಯೇಲ್ ವಿಶ್ವವಿದ್ಯಾಲಯದಿಂದ ಪದವಿ ಮತ್ತು ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿಯನ್ನು ಪಡೆದಿದ್ದಾರೆ, ಗೇಟ್ಸ್ ಕೇಂಬ್ರಿಡ್ಜ್ ವಿದ್ವಾಂಸರು ಕೂಡ ಆಗಿದ್ದರು.

### ರೈಲು ಹೈಜಾಕ್: 16 ಉಗ್ರರನ್ನು ಹತ್ಯೆ ಮಾಡಿ 104 ಪ್ರಯಾಣಿಕರನ್ನು ರಕ್ಷಿಸಿದ ಪಾಕ್ ಭದ್ರತಾ ಪಡೆ

## ಎಲ್ಲಾ ಪ್ರಯಾಣಿಕರನ್ನು ರಕ್ಷಿಸುವವರೆಗೆ ಕಾರ್ಯಾಚರಣೆ



**ಕ್ವೆಟ್ಟಾ:** ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದ ಸುರಂಗ ವೊಂದರಲ್ಲಿ ಬಲೂಚ್ ಉಗ್ರರು ರೈಲನ್ನು ಅಪಹರಿಸಿದ್ದಾರೆ. ಭದ್ರತಾ ಪಡೆ ನಡೆಸಿದ ಕಾರ್ಯಾಚರಣೆ ವೇಳೆ ಗುಂಡಿನ ಕಾಳಗದಲ್ಲಿ 16 ಭಯೋತ್ಪಾದಕರು ಸಾವನ್ನಪ್ಪಿದ್ದಾರೆ ರೈಲಿ ನಲ್ಲಿದ್ದ 104 ಪ್ರಯಾಣಿಕರನ್ನು ಭದ್ರತಾ ಪಡೆಗಳು ರಕ್ಷಿಸಿದ್ದಾರೆ ಎಂದು ಭದ್ರತಾ ಅಧಿಕಾರಿಗಳು ತಿಳಿಸಿದ್ದಾರೆ.

ಒಂಬತ್ತು ಬೋಗಿಗಳಲ್ಲಿ ಸುಮಾರು 400 ಪ್ರಯಾಣಿಕರನ್ನು ಹೊತ್ತ ಜಾಫರ್ ಎಕ್ಸ್‌ಪ್ರೆಸ್ ಕ್ವೆಟ್ಟಾದಿಂದ ಪೇಶಾವರಕ್ಕೆ ಪ್ರಯಾಣಿಸುತ್ತಿದ್ದಾಗ ಗುಡಾಲಾರ್ ಮತ್ತು ಪಿರು ಕುನ್ರಿಯ ಪರ್ವತ ಪ್ರದೇಶದ ಬಳಿ ಸುರಂಗದಲ್ಲಿ ಶಸ್ತ್ರಸಜ್ಜಿತ ಉಗ್ರರು ತಡೆದಿದ್ದರು. ಬಲೂಚಿಸ್ತಾನ್ ಲಿಬರೇಶನ್ ಆರ್ಮಿ (ಬಿಎಲ್) ದಾಳಿಯ ಹೊಣೆ ಹೊತ್ತುಕೊಂಡಿತ್ತು.

ರಾತ್ರಿ ಉಗ್ರರೊಂದಿಗೆ ನಡೆಯುತ್ತಿರುವ ಗುಂಡಿನ ಕಾಳಗದಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ 104 ಪ್ರಯಾಣಿಕರನ್ನು ರಕ್ಷಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಭದ್ರತಾ ಮೂಲಗಳು ಖಚಿತಪಡಿಸಿವೆ.

ಇನ್ನೂ ನಡೆಯುತ್ತಿರುವ ಗುಂಡಿನ ಕಾಳಗದಲ್ಲಿ 16 ಉಗ್ರರು ಹತರಾಗಿದ್ದಾರೆ, ಅನೇಕರು ಗಾಯಗೊಂಡಿದ್ದಾರೆ ಎಂದು ಮೂಲವೊಂದು ತಿಳಿಸಿದೆ, ಎಲ್ಲಾ ಪ್ರಯಾ ಣಿಕರನ್ನು ರೈಲಿನಿಂದ ರಕ್ಷಿಸುವವರೆಗೆ ಕಾರ್ಯಾಚರಣೆ ಮುಂದುವರಿಯುತ್ತದೆ ಎಂದು ಮಾಧ್ಯಮಕ್ಕೆ ತಿಳಿಸಲಾಗಿದೆ. ಉಗ್ರರು ಕೆಲವು ಪ್ರಯಾಣಿಕರನ್ನು ಕರೆದೊಯ್ದಿದ್ದಾರೆ, ಈವರೆಗೆ 58 ಪುರುಷರು, 31 ಮಹಿಳೆಯರು ಮತ್ತು 15 ಮಕ್ಕಳು ಸೇರಿದಂತೆ ರಕ್ಷಿಸಲ್ಪಟ್ಟ ಪ್ರಯಾಣಿಕರನ್ನು ಮತ್ತೊಂದು ರೈಲಿನಲ್ಲಿ ಮಚ್‌ಗೆ ಕಳುಹಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಉಗ್ರರು ರೈಲನ್ನು ಹೈಜಾಕ್ ಮಾಡಿದ ಸುರಂಗದ ಬಳಿ ತೀವ್ರ ಗುಂಡಿನ ದಾಳಿ ಮತ್ತು ಸ್ಫೋಟ ಸಂಭವಿಸಿದೆ ಎಂದು ಪಾಕಿಸ್ತಾನ ಮಾಧ್ಯಮಗಳು ವರದಿ ಮಾಡಿವೆ. ರೈಲಿನಲ್ಲಿ ತಮ್ಮ ಪ್ರೀತಿಪಾತ್ರರ ಬಗ್ಗೆ ಕೆಲವು ಮಾಹಿತಿಯನ್ನು ಪಡೆಯಲು ಪ್ರಯತ್ನಿಸುತ್ತಿರುವ ಕಾರಣ ಪಾಕಿಸ್ತಾನ ರೈಲ್ವೇ ಪೇಶಾವರ್ ಮತ್ತು ಕ್ವೆಟ್ಟಾ ರೈಲು ನಿಲ್ದಾಣಗಳಲ್ಲಿ ತುರ್ತು ಡೆಸ್ಕ್ ಅನ್ನು ಸ್ಥಾಪಿಸಿದೆ. ಪಾಕಿಸ್ತಾನ ರೈಲ್ವೆಯು ಒಂದೂವರೆ ತಿಂಗಳಿಗೂ ಹೆಚ್ಚು ಕಾಲ ಅಮಾನತುಗೊಳಿಸಿದ ನಂತರ ಕ್ವೆಟ್ಟಾದಿಂದ ಪೇಶಾವರಕ್ಕೆ ರೈಲು ಸೇವೆಗಳನ್ನು ಪುನರಾರಂಭಿಸಿದೆ. ಪ್ರಸ್ತುತ ಭದ್ರತಾ ಪಡೆಗಳು ಪ್ರದೇಶವನ್ನು ಸುತ್ತುವರೆದಿವೆ, ಆದರೆ ಉಗ್ರರು ಕೆಲವು ಮಹಿಳೆಯರು ಮತ್ತು ಮಕ್ಕಳನ್ನು ಒತ್ತೆಯಾಳುಗಳಾಗಿ ಇರಿಸಿಕೊಂಡಿದ್ದಾರೆ ಎಂದು ವರದಿಯಾಗಿದೆ.

> **ಭದ್ರತಾ ಪಡೆಗಳು ಸುರಂಗವನ್ನು ಸುತ್ತುವರೆದಿವೆ, ಉಳಿದ ಪ್ರಯಾಣಿಕರನ್ನು ಸಹ ಶೀಘ್ರದಲ್ಲೇ ರಕ್ಷಿಸಲಾಗುವುದು ಎಂದು ಮೂಲಗಳು ತಿಳಿಸಿವೆ. ಅಧಿಕಾರಿಗಳು ಹೆಚ್ಚಿನ ವಿವರಗಳನ್ನು ನೀಡದಿದ್ದರೂ, ಸುರಂಗದಲ್ಲಿ ರೈಲನ್ನು ನಿಲ್ಲಿಸುವ ಬಗ್ಗೆ ರೈಲ್ವೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ ಸ್ವಲ್ಪ ಸಮಯದ ನಂತರ ಮಿಲಿಟರಿ ಪಡೆಗಳು ಸೇರಿದಂತೆ ಭದ್ರತಾ ಪಡೆಗಳು ಸುರಂಗ ಇರುವ ಒರಟು ಭೂಪ್ರದೇಶವನ್ನು ತಲುಪಿದ್ದಾರೆ**
>
> **–ಶಾಹಿದ್ ರಿಂಡ್**
> **ಬಲೂಚಿಸ್ತಾನ್ ಸರ್ಕಾರದ ವಕ್ತಾರ**

# ಅಮೆರಿಕದ ಮದ್ಯದ ಮೇಲೆ ಶೇ.150ರಷ್ಟು ಸುಂಕ ವಿಧಿಸುವ ಭಾರತ

### ಬಾಪ್ ರೇ..! ಅಮೆರಿಕನ್ ಆಲ್ಕೋಹಾಲ್ ಮೇಲೆ ಭಾರತ ವಿಧಿಸುವ ಸುಂಕ ಎಷ್ಟು ಗೊತ್ತಾ? ವೈಟ್‌ಹೌಸ್‌ಗೂ ಏರಿದ ಟ್ರಂಪ್ ಸುಂಕ ನಶೆ!

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಜಾಗತಿಕ ವಾಣಿಜ್ಯ ಯುದ್ಧದಲ್ಲಿ, ಭಾರತ ಕೂಡ ಒಂದು ಟಾರ್ಗೆಟ್ ರಾಷ್ಟ್ರ. ಭಾರತದ ಅಧಿಕ ಸುಂಕಗಳು ಡೊನಾಲ್ಡ್ ಟ್ರಂಪ್ ಅವರ ಅಸಮಾಧಾನಕ್ಕೆ ಕಾರಣವಾಗಿದ್ದು, ಮುಯ್ಯಿ ತೀರಿಸಿಕೊಳ್ಳುವ ಮಾತುಗಳನ್ನಾಡಲು ಒತ್ತಾಯಿಸುತ್ತಿದೆ.



ಡೊನಾಲ್ಡ್ ಟ್ರಂಪ್ ಅವರು ಭಾರತದ ವಿರುದ್ಧವೂ ವಾಣಿಜ್ಯ ಯುದ್ಧ ಆರಂಭಿಸುವ ಮಾತು ಗಳನ್ನಾಡುತ್ತಿರುವುದಕ್ಕೆ, ಅಮೆರಿಕದಿಂದ ಆಮದಾಗುವ ವಸ್ತುಗಳ ಮೇಲೆ ಭಾರತ ವಿಧಿಸುತ್ತಿರುವ ಅಧಿಕ ಸುಂಕಗಳೇ ಕಾರಣವಾಗಿವೆ. ಇದೀಗ ಟ್ರಂಪ್ ಅವರ ಅಭಿಪ್ರಾಯವನ್ನು ಸಮ್ಮತಿಸುವಂತೆ ಶ್ವೇತಭವನವು, ವಿವಿಧ ರಾಷ್ಟ್ರಗಳು ಅಮೆರಿಕದ ಮೇಲೆ ವಿಧಿಸುವ ಸುಂಕಗಳ ಬಗ್ಗೆ ಮಾಹಿತಿ ಬಿಡುಗಡೆ ಮಾಡಿದೆ.

ಈ ಪಟ್ಟಿಯಲ್ಲಿ ಭಾರತವು ಅಮೆರಿಕದಿಂದ ಆಮದು ಮಾಡಿಕೊಳ್ಳುವ ಮದ್ಯದ ಮೇಲೆ ಬರೋಬ್ಬರಿ ಶೇ.150ರಷ್ಟು ಸುಂಕ ವಿಧಿಸುತ್ತದೆ ಎಂದು ತಿಳಿಸಲಾಗಿದೆ. ಅಷ್ಟೇ ಅಲ್ಲದೇ ಭಾರತವು ಅಮೆರಿಕದಿಂದ ಆಮದು ಮಾಡಿಕೊಳ್ಳುವ ಕೃಷಿ ಉತ್ಪನ್ನಗಳ ಮೇಲೆ ಶೇ.100ರಷ್ಟು ಸುಂಕ ವಿಧಿಸುತ್ತದೆ ಎಂದು ಶ್ವೇತಭವನವು ನಿರ್ದಿಷ್ಟವಾಗಿ ಉಲ್ಲೇಖಿಸಿದೆ.

- **ಅಮೆರಿಕದ ಮೇಲೆ ವಿವಿಧ ರಾಷ್ಟ್ರಗಳ ಸುಂಕ ಪಟ್ಟಿ ಬಿಡುಗಡೆ ಮಾಡಿದ ಶ್ವೇತಭವನ**
- **ಅಮೆರಿಕದ ಕೃಷಿ ಉತ್ಪನ್ನಗಳ ಮೇಲೆ ಶೇ.100ರಷ್ಟು ಸುಂಕ ವಿಧಿಸುವ ಭಾರತ**
- **ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೆವಿಟ್ ಹೇಳಿದ್ದೇನು?**

ಈ ಕುರಿತು ಮಾತನಾಡಿರುವ ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೆವಿಟ್, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪರಸ್ಪರ ನ್ಯಾಯಯುತ ವ್ಯಾಪಾರ ಸಂಬಂಧಗಳನ್ನು ಬಯಸುತ್ತಾರೆ.

ಆದರೆ ವಿವಿಧ ರಾಷ್ಟ್ರಗಳು ಅಮೆರಿಕ ವಸ್ತುಗಳ ಮೇಲೆ ವಿಧಿಸುವ ಸುಂಕಗಳು ಖಂಡಿತವಾಗಿಯೂ ನ್ಯಾಯಯುತವಾಗಿಲ್ಲ ಎಂದು ಹೇಳಿದ್ದಾರೆ.



ಕೆನಡಾ ದಶಕಗಳಿಂದ ಅಮೆರಿಕವನ್ನು, ಅಮೆರಿಕದ ಶ್ರಮಜೀವಿ ಕಾರ್ಮಿಕರನ್ನು ಶೋಷಿಸುತ್ತಿದೆ. ಕೆನಡಾ ನಮ್ಮ ಮೇಲೆ ವಿಧಿಸುತ್ತಿರುವ ಸುಂಕಗಳು ಅದೆಂತಾ ಘೋರವಾಗಿದೆ ಎಂಬುದು ಈ ಪಟ್ಟಿಯನ್ನು ನೋಡಿ ದರೆ ಯಾರಿಗಾದರೂ ಗೊತ್ತಾಗುತ್ತದೆ ಎಂದು ಕ್ಯಾರೋಲಿನ್ ಲೆವಿಟ್ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಹೇಳಿದರು. ವಾಸ್ತವವಾಗಿ ನನ್ನ ಬಳಿ ಒಂದು ಚಾರ್ಟ್ ಇದೆ. ಇದರಲ್ಲಿ ಕೆನಡಾ ಮಾತ್ರವಲ್ಲದೇ ಭಾರತ, ಜಪಾನ್ ಸೇರಿದಂತೆ ವಿಶ್ವದ ಹಲವು ರಾಷ್ಟ್ರಗಳು ಅಮೆರಿಕದ ವಸ್ತುಗಳ ಮೇಲೆ ವಿಧಿಸುವ ಸುಂಕದ ಮಾಹಿತಿ ಇದೆ. ಅಮೆರಿಕದ ಚೀಸ್, ಬೆಣ್ಣೆಯ ಮೇಲೆ ಕೆನಡಾ ಸುಮಾರು ಶೇ. 300ರಷ್ಟು ಸುಂಕ ವಿಧಿಸಿದರೆ, ಭಾರತವು ಅಮೆರಿಕದ ಮದ್ಯದ ಮೇಲೆ ಶೇ. 150ರಷ್ಟು ಮತ್ತು ಕೃಷಿ ಉತ್ಪನ್ನಗಳ ಮೇಲೆ ಶೇ. 100ರಷ್ಟು ಸುಂಕ ವಿಧಿಸುತ್ತದೆ. ಇದು ಅನ್ಯಾಯಯುತ ವ್ಯಾಪಾರ ನೀತಿ ಅಲ್ಲವೇ..? ಎಂದು ಕ್ಯಾರೋಲಿನ್ ಲೆವಿಟ್ ಪ್ರಶ್ನಿಸಿದರು.



ನನ್ನ ಬಳಿ ಒಂದು ಚಾರ್ಟ್ ಇದೆ

ಪ್ರಸ್ತುತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಮೆರಿಕದ ವ್ಯಾಪಾರ ಮತ್ತು ಕಾರ್ಮಿಕರ ಹಿತಾಸಕ್ತಿಗಳಿಗೆ ಆದ್ಯತೆ ನೀಡುತ್ತಾರೆ. ಇದೇ ಕಾರಣಕ್ಕೆ ನಮ್ಮ ಮೇಲೆ ಅಧಿಕ ಸುಂಕ ವಿಧಿಸುವ ರಾಷ್ಟ್ರಗಳ ಮೇಲೆ ನಾವೂ ಹೆಚ್ಚುವರಿ ಸುಂಕಗಳನ್ನು ವಿಧಿಸಲು ತೀರ್ಮಾನಿಸಿದ್ದೇವೆ. ಇದನ್ನು ಜಗತ್ತು ವಾಣಿಜ್ಯ ಯುದ್ಧ ಎಂದೂ ಕರೆದರೂ ಪರವಾಗಿಲ್ಲ ಎಂದು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಇದೇ ವೇಳೆ ಮಾರ್ಮಿಕವಾಗಿ ಹೇಳಿದರು.

ಡೊನಾಲ್ಡ್ ಟ್ರಂಪ್ ಈಗಾಗಲೇ ಮೆಕ್ಸಿಕೋ, ಕೆನಡಾ ಮತ್ತು ಚೀನಾದ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸುವ ನಿರ್ಧಾರ ಪ್ರಕಟಿಸಿದ್ದಾರೆ.

ಆದರೆ ಡೊನಾಲ್ಡ್ ಟ್ರಂಪ್ ಅವರು ಭಾರತದ ವಸ್ತುಗಳ ಮೇಲೆ ಹೆಚ್ಚುವರಿ ಸುಂಕ ವಿಧಿಸುವ ಮಾತುಗಳನ್ನಾಡಿದ್ದಾರೆಯೇ ಹೊರತು, ಇದುವರೆಗೂ ಈ ಕುರಿತಾದ ನಿರ್ಧಾರವನ್ನು ಪ್ರಕಟಿಸಿಲ್ಲ ಎಂಬುದನ್ನು ಇಲ್ಲಿ ಗಮನಿಸಬಹುದು.

**ಸುಂಕಗಳ ಬಗ್ಗೆ ಮಾಹಿತಿ ಬಿಡುಗಡೆ**

**ಅಮೆರಿಕದ ಶ್ವೇತಭವನವು ವಿವಿಧ ರಾಷ್ಟ್ರಗಳು ಅಮೆರಿಕದ ಮೇಲೆ ವಿಧಿಸುವ ಸುಂಕಗಳ ಬಗ್ಗೆ ಮಾಹಿತಿ ಬಿಡುಗಡೆ ಮಾಡಿದೆ. ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೆವಿಟ್ ಈ ಪಟ್ಟಿ ಬಿಡುಗಡೆ ಮಾಡಿದ್ದು, ಇದರಲ್ಲಿ ಭಾರತವು ಅಮೆರಿಕದಿಂದ ಆಮದು ಮಾಡಿಕೊಳ್ಳುವ ಮದ್ಯದ ಮೇಲೆ ಶೇ.150ರಷ್ಟು ಮತ್ತು ಕೃಷಿ ಉತ್ಪನ್ನಗಳ ಮೇಲೆ ಶೇ.100ರಷ್ಟು ಸುಂಕ ವಿಧಿಸುತ್ತದೆ ಎಂದು ಉಲ್ಲೇಖಿಸಲಾಗಿದೆ. ಡೊನಾಲ್ಡ್ ಟ್ರಂಪ್ ಅಮೆರಿಕದ ಶ್ರಮಜೀವಿ ಕಾರ್ಮಿಕರ ಶೋಷಣೆಯನ್ನು ಸಹಿಸುವುದಿಲ್ಲ ಎಂದ ಕ್ಯಾರೋಲಿಒನ್ ಲೆವಿಟ್ ಹೇಳಿಕೆ ಇದೀಗ ಗಮನ ಸೆಳೆದಿದೆ.**

## ಬಿಜೆಪಿ ಕ್ಲೀನ್ ಸ್ವೀಪ್, 10 ರಲ್ಲಿ 9 ಸ್ಥಾನ ಗೆಲುವು

**ಗುರುಗ್ರಾಮ:** ಹರಿಯಾಣ ಮಹಾನಗರ ಪಾಲಿಕೆಗಳ ಮೇಯರ್ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಜಯ ಸಾಧಿಸಿದ್ದು, 10 ಮೇಯರ್ ಸ್ಥಾನಗಳ ಪೈಕಿ 9 ಸ್ಥಾನಗಳನ್ನು ಬಿಜೆಪಿ ಗೆದ್ದು ಬೀಗಿದೆ.

ಹೌದು.. ಹರ್ಯಾಣ ವಿಧಾನಸಭೆ ಚುನಾವಣೆ ಬಳಿಕ ಮಹಾನಗರ ಪಾಲಿಕೆಗಳ ಮೇಯರ್ ಚುನಾವಣೆಯಲ್ಲೂ ಬಿಜೆಪಿ ತನ್ನ ಪಾರುಪತ್ಯ ಮುಂದುವರೆಸಿದ್ದು, ಗುರುವಾರ ಪ್ರಕಟಗೊಂಡ ಚುನಾವಣಾ ಫಲಿತಾಂಶದಲ್ಲಿ ಕ್ಲೀನ್ ಸ್ವೀಪ್ ಮಾಡಿದೆ. ಗುರುಗ್ರಾಮ್, ಹಿಸಾರ್, ಕರ್ನಾಲ್, ರೋಹ್ಟಕ್, ಫರಿದಾಬಾದ್, ಯಮುನಾನಗರ, ಪಾಣಿಪತ್, ಅಂಬಾಲ, ಸೋನಿಪತ್‌ಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದು, ಮಾನೇಸರ್‌ನಲ್ಲಿ ಬಿಜೆಪಿ ಅಭ್ಯರ್ಥಿಯನ್ನು ಸ್ವತಂತ್ರ ಅಭ್ಯರ್ಥಿ ಡಾ. ಇಂದರ್ಜಿತ್ ಯಾದವ್ ಸೋಲಿಸಿದ್ದಾರೆ.

ಈ ತಿಂಗಳ ಆರಂಭದಲ್ಲಿ ಮಾನೇಸರ್, ಗುರುಗ್ರಾಮ್, ಫರಿದಾಬಾದ್, ಹಿಸಾರ್, ರೋಹ್ಟಕ್, ಕರ್ನಾಲ್, ಯಮುನಾನಗರ, ಪಾಣಿಪತ್, ಅಂಬಾಲ ಮತ್ತು ಸೋನಿಪತ್ ನಗರ ಪಾಲಿಕೆಗಳಲ್ಲಿ ಮೇಯರ್ ಮತ್ತು ವಾರ್ಡ್ ಸದಸ್ಯರ ಹುದ್ದೆಗಳಿಗೆ ಚುನಾವಣೆ ನಡೆದಿತ್ತು. ಅಂಬಾಲ ಮತ್ತು ಸೋನಿಪತ್ ಪುರಸಭೆಗಳ ಮೇಯರ್ ಹುದ್ದೆಗೆ ಉಪಚುನಾವಣೆಗಳು ಸಹ ನಡೆದಿತ್ತು.



**ಕಾಂಗ್ರೆಸ್ ಗೆ ತೀವ್ರ ಮುಖಭಂಗ**

**ಇನ್ನು ಸ್ಥಳೀಯ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಭೂಪೇಂದ್ರ ಹೂಡಾ, 'ಹಿಂದೆಯೂ ಸಹ ಪುರಸಭೆಯ ನಿಗಮಗಳಲ್ಲಿ ಬಿಜೆಪಿ ಪ್ರಾಬಲ್ಯ ಹೊಂದಿತ್ತು. ನಾವು ಸ್ಥಾನ ಕಳೆದುಕೊಂಡರೆ ಅದು ಹಿನ್ನಡೆಯಾಗಬಹುದು ಎಂದು ಹೇಳಲಾಗಿತ್ತು. ಆದರೆ ಅದು ಈ ಹಿಂದೆಯೇ ನಮ್ಮೊಂದಿಗೆ ಇರಲಿಲ್ಲ. ಕಾಂಗ್ರೆಸ್ ಕೆಲವು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿರಬೇಕು. ಆದರೆ ಚುನಾವಣೆಯ ಸಮಯದಲ್ಲಿ ನಾನು ಎಲ್ಲಿಯೂ ಪ್ರಚಾರಕ್ಕೆ ಹೋಗಲಿಲ್ಲ. ಈ ಫಲಿತಾಂಶಗಳು ಕಾಂಗ್ರೆಸ್ ಪಕ್ಷದ ಮೇಲೆ ಪರಿಣಾಮ ಬೀರುತ್ತವೆ ಎಂದು ನಾನು ಭಾವಿಸುವುದಿಲ್ಲ ಎಂದು ಹೇಳಿದ್ದಾರೆ.**

ಇದೇ ವಿಚಾರವಾಗಿ ಮಾತನಾಡಿದ ಹರಿಯಾಣ ಸಿಎಂ ನವಾಬ್ ಸಿಂಗ್ ಸೈನಿ, ಜನರು ತ್ರಿವಳಿ-ಎಂಜಿನ್' ಸರ್ಕಾರಕ್ಕೆ ತಮ್ಮ ಅನುಮೋದನೆಯ ಮುದ್ರೆ ಹಾಕಿದ್ದಾರೆ. ನಾನು ಜನರಿಗೆ ನನ್ನ ಹೃದಯದಾಳದಿಂದ ಧನ್ಯವಾದ ಹೇಳುತ್ತೇನೆ ಎಂದು ಹೇಳಿದ್ದಾರೆ. ಅಂತೆಯೇ ನಮ್ಮ ಸ್ಥಳೀಯ ಸಂಸ್ಥೆ ಸರ್ಕಾರ ಮತ್ತು ಈ 'ತ್ರಿವಳಿ-ಎಂಜಿನ್' ಸರ್ಕಾರವು ಪ್ರಧಾನಿ ನರೇಂದ್ರ ಮೋದಿಯವರ 'ವಿಕಸಿತ ಭಾರತ', ಅಭಿವೃದ್ಧಿ ಹೊಂದಿದ ಭಾರತ'ದ ದೃಷ್ಟಿಕೋನವನ್ನು ಈಡೇರಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

## ಸಂಭಾಲ್ ಇತಿಹಾಸ ಇಸ್ಲಾಂಗಿಂತ ಹಿಂದಿನದು, ಅಲ್ಲಿ ವಿಷ್ಣು ದೇವಾಲಯ ಕೆಡವಲಾಗಿತ್ತು: ಯೋಗಿ ಆದಿತ್ಯನಾಥ್



**ಲಖನೌ:** ಸಂಭಾಲ್‌ನಲ್ಲಿ ಮಸೀದಿ ವಿವಾದದ ಮಧ್ಯೆ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯ ನಾಥ್ ಅವರು ಸಂಭಾಲ್ ಅನ್ನು 5,000 ವರ್ಷಗಳಷ್ಟು ಹಳೆಯದಾದ ಗ್ರಂಥಗಳಲ್ಲಿ ಉಲ್ಲೇಖಿಸಲಾಗಿದೆ.

ಅದು ಇಸ್ಲಾಂ ಧರ್ಮಕ್ಕೂ ಹಿಂದಿನದು ಎಂದು ಹೇಳಿದ್ದಾರೆ. 1526ರಲ್ಲಿ ಸಂಭಾಲ್‌ನಲ್ಲಿರುವ ಶ್ರೀ ಹರಿ ವಿಷ್ಣು ದೇವಾಲಯವನ್ನು ನೆಲಸಮಗೊಳಿಸಲಾಯಿತು ಎಂದು ಆದಿತ್ಯನಾಥ್ ಹೇಳಿದ್ದಾರೆ. 5,000 ವರ್ಷಗಳಷ್ಟು ಹಳೆಯ ಗ್ರಂಥಗಳಲ್ಲಿ ಸಂಭಾಲ್ ಅನ್ನು ಉಲ್ಲೇಖಿಸಲಾಗಿದೆ. ಅವು ವಿಷ್ಣುವಿನ ಭವಿಷ್ಯದ ಅವತಾರವನ್ನು ಉಲ್ಲೇಖಿಸುತ್ತವೆ. ಮತ್ತೊಂದೆಡೆ, ಇಸ್ಲಾಂ ಕೇವಲ 1,400 ವರ್ಷಗಳ ಹಿಂದೆ ಹುಟ್ಟಿಕೊಂಡಿತು. ನಾನು ಇಸ್ಲಾಂಗಿಂತ ಕನಿಷ್ಠ 2,000 ವರ್ಷ ಹಳೆಯದಾದ ವಿಷಯದ ಬಗ್ಗೆ ಮಾತನಾಡುತ್ತಿದ್ದೇನೆ ಎಂದರು.


ಈ ವಿಷಯಗಳ ಪುರಾವೆಗಳು ಶತಮಾನಗಳಿಂದಲೂ ಅಸ್ತಿತ್ವದಲ್ಲಿವೆ ಎಂದು ಮುಖ್ಯಮಂತ್ರಿ ಹೇಳಿದರು. 1526ರಲ್ಲಿ ಸಂಭಾಲ್‌ನಲ್ಲಿ ವಿಷ್ಣುವಿನ ದೇವಾಲಯವನ್ನು ಕೆಡವಲಾಯಿತು ಎಂಬುದನ್ನು ನೆನಪಿಸಿಕೊಳ್ಳಿ. ಅದಾದ ಎರಡು ವರ್ಷಗಳ ನಂತರ, 1528ರಲ್ಲಿ ಅಯೋಧ್ಯೆಯಲ್ಲಿ ರಾಮ ದೇವಾಲಯವನ್ನು ಕೆಡವಲಾಯಿತು. ಆರ್‌ಎಸ್‌ಎಸ್ ಸಂಯೋಜಿತ ವಾರಪತ್ರಿಕೆ 'ಆರ್ಗನೈಸರ್' ಲಖನೌದಲ್ಲಿ ಆಯೋಜಿಸಿದ್ದ 'ಮಂಥನ: ಕುಂಭ ಮತ್ತು ಮೀರಿ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎರಡೂ ಕೃತ್ಯಗಳನ್ನು ಒಬ್ಬರೇ ಮಾಡಿದ್ದಾರೆ ಎಂದು ಹೇಳಿದರು.

ಜಗತ್ತಿನ ಪ್ರತಿಯೊಂದು ಧರ್ಮ ಮತ್ತು ಪೂಜಾ ವಿಧಾನವು ಕೆಲವು ಉತ್ತಮ ಗುಣಗಳನ್ನು ಹೊಂದಿದೆ ಎಂದು ಆದಿತ್ಯನಾಥ್ ಹೇಳಿದರು. ಯಾರೊಬ್ಬರ ನಂಬಿಕೆಯನ್ನು ಬಲವಂತವಾಗಿ ಕಸಿದುಕೊಳ್ಳುವುದು, ಅವರ ನಂಬಿಕೆಗಳನ್ನು ಹತ್ತಿಕ್ಕುವುದು ಸ್ವೀಕಾರಾರ್ಹವಲ್ಲ ಎಂದು ಮುಖ್ಯಮಂತ್ರಿ ಒತ್ತಿ ಹೇಳಿದರು. ಅದಕ್ಕಾಗಿಯೇ ಉಪನಿಷತ್ತುಗಳಲ್ಲಿ ವ್ಯಕ್ತವಾಗಿರುವ ಭಾರತದ ವೈದಿಕ ಸಂಪ್ರದಾಯದ ಚೈತನ್ಯವು ನಮ್ಮಲ್ಲಿ ಆಳವಾಗಿ ಬೇರೂರಿದೆ ಎಂದು ನಾನು ಹೇಳುತ್ತೇನೆ ಎಂದು ಮುಖ್ಯಮಂತ್ರಿ ಹೇಳಿದರು.

ಪ್ರತಿಯೊಂದು ಪೂಜಾ ವಿಧಾನವು ಸನಾತನ ಧರ್ಮಕ್ಕೆ ಸಂಬಂಧಿಸಿರಲಿ ಅಥವಾ ಜಗತ್ತಿನ ಯಾವುದೇ ಇತರ ಧರ್ಮಕ್ಕೆ ಸಂಬಂಧಿಸಿರಲಿ, ಅದರಲ್ಲಿ ಕೆಲವು ಅಂತರ್ಗತ ಒಳ್ಳೆಯತನವಿದೆ. ಅದಕ್ಕಾಗಿಯೇ ಅನೇಕ ಜನರು ಅವುಗಳನ್ನು ಅನುಸರಿಸುತ್ತಾರೆ. ವಿಪಕ್ಷಗಳು ಮತ್ತು ವಿಮರ್ಶಕರ ಕಡೆಗೆ ಬೆರಳು ತೋರಿಸಿದ ಸಿಎಂ, ಈ ಜನರು ಮೊದಲು ಧರ್ಮಗ್ರಂಥಗಳನ್ನು ಓದಲಿ. ಆ ನಂತರವೇ ಅವುಗಳ ಬಗ್ಗೆ ಚರ್ಚೆಗೆ ನನಗೆ ಸವಾಲು ಹಾಕಬೇಕು ಎಂದರು.

## ಮರಣಶಯ್ಯೆಯಲ್ಲಿರುವ ರಾಜ್ಯದ ವಿವಿಗಳ ರಕ್ಷಣೆಗೆ ಕೇಂದ್ರ ಮುಂದಾಗಬೇಕು

**ನವದೆಹಲಿ:** ಕರ್ನಾಟಕದ ವಿಶ್ವವಿದ್ಯಾಲಯಗಳ ಉಪನ್ಯಾಸಕರಿಗೆ, ಸಿಬ್ಬಂದಿಗೆ ವೇತನ ನೀಡಲು ರಾಜ್ಯ ಸರ್ಕಾರದ ಬಳಿ ದುಡ್ಡಿಲ್ಲ. ಈ ವಿಶ್ವವಿದ್ಯಾಲಯಗಳು ಮರಣಶಯ್ಯೆಯಲ್ಲಿವೆ ಎಂದು ರಾಜ್ಯಸಭೆಯ ಜೆಡಿಎಸ್ ಸದಸ್ಯ ಎಚ್.ಡಿ.ದೇವೇಗೌಡ ಕಳವಳ ವ್ಯಕ್ತಪಡಿಸಿದರು. ಶಿಕ್ಷಣ ಸಚಿವಾಲಯದ ಕಾರ್ಯವೈಖರಿಯ ಕುರಿತು



ರಾಜ್ಯಸಭೆಯಲ್ಲಿ ನಡೆದ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಉಪನ್ಯಾಸಕರು ಸೇರಿದಂತೆ ಸಿಬ್ಬಂದಿಗೆ ಸಂಬಳ ನೀಡಲು ವಿವಿಗಳ ಬಳಿ ಹಣವಿಲ್ಲ. ಕೇಂದ್ರ ಸರ್ಕಾರ ಅವುಗಳನ್ನು ರಕ್ಷಿಸಲು ಮುಂದಾಗಬೇಕೆಂದು ಒತ್ತಾಯಿಸಿದ್ದಾರೆ. ರಾಜ್ಯದ ಅತ್ಯಂತ ಹಳೆಯ ಸಂಸ್ಥೆಗಳಾದ ಮೈಸೂರು ವಿಶ್ವವಿದ್ಯಾಲಯ ಮತ್ತು ಧಾರವಾಡ ವಿಶ್ವವಿದ್ಯಾಲಯಗಳು ತೀವ್ರ ಆರ್ಥಿಕ ಬಿಕ್ಕಟ್ಟನ್ನು ಎದುರಿಸುತ್ತಿವೆ. ಈ ಎರಡು ಸಂಸ್ಥೆಗಳಲ್ಲಿ ಹಲವಾರು ಬೋಧಕ ಮತ್ತು ಬೋಧಕೇತರ ಹುದ್ದೆಗಳು ಖಾಲಿ ಇವೆ, ವಿಶ್ವವಿದ್ಯಾಲಯಗಳು ಸ್ಥಿತಿ ದಯನೀಯವಾಗಿದೆ. ಕೇಂದ್ರ ಶಿಕ್ಷಣ ಸಚಿವಾಲಯ ಕೂಡಲೇ ಮಧ್ಯಪ್ರವೇಶಿಸಿ ಅನುದಾನ ಬಿಡುಗಡೆ ಮಾಡಬೇಕು. ಈ ವಿಷಯದಲ್ಲಿ ರಾಜಕೀಯ ಮಾಡುವುದು ಬೇಡ ಎಂದು ಸಲಹೆ ನೀಡಿದರು. ಮೈಸೂರು ವಿಶ್ವವಿದ್ಯಾಲಯವು ದೇಶದ ಹಳೆಯ ವಿಶ್ವವಿದ್ಯಾಲಯಗಳಲ್ಲಿ ಒಂದು. ಶತಮಾನೋತ್ಸವ ಆಚರಿಸಿರುವ ವಿ.ವಿಯು ಸಂಕಷ್ಟದ ಸ್ಥಿತಿಯಲ್ಲಿದೆ. ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸ್ಥಿತಿ ಇದಕ್ಕಿಂತ ಭಿನ್ನವಾಗಿಲ್ಲ. ಉಪನ್ಯಾಸಕರು ಹಾಗೂ ಸಿಬ್ಬಂದಿಗೆ ಕೆಲವು ತಿಂಗಳಿಂದ ಸರಿಯಾಗಿ ವೇತನ ಪಾವತಿ ಆಗಿಲ್ಲ ಎಂದು ಗಮನ ಸೆಳೆದರು. ಇತ್ತೀಚಿನ ದಿನಗಳಲ್ಲಿ ಕರ್ನಾಟಕ ಸೇರಿದಂತೆ ಹೆಚ್ಚಿನ ರಾಜ್ಯಗಳಲ್ಲಿ ವಿಶ್ವವಿದ್ಯಾಲಯಗಳ ಕುಲಪತಿಗಳ ನೇಮಕ ವಿವಾದಕ್ಕೆ ಕಾರಣವಾಗುತ್ತಿದೆ. ಕೇಂದ್ರ ಶಿಕ್ಷಣ ಸಚಿವಾಲಯ ಇದಕ್ಕೊಂದು ಪರಿಹಾರ ಹುಡುಕಬೇಕು ಎಂದು ಅವರು ಸಲಹೆ ನೀಡಿದರು. ರಾಜ್ಯದಲ್ಲಿ 30 ಕ್ಕೂ ಹೆಚ್ಚು ಖಾಸಗಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಅವು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಅವರು ಹೇಳಿದ್ದಾರೆ. ಆದಾಗ್ಯೂ, ಕೇಂದ್ರವು ರಾಜಕೀಯವನ್ನು ಬೆರೆಸದೆ ಸರ್ಕಾರಿ ಸ್ವಾಮ್ಯದ ವಿಶ್ವವಿದ್ಯಾಲಯಗಳಿಗೆ ಅನುದಾನವನ್ನು ಗಣನೀಯ ಪ್ರಮಾಣದಲ್ಲಿ ಹೆಚ್ಚಿಸಬೇಕು. ನನ್ನ ವಿನಂತಿಯನ್ನು ಕೇಂದ್ರ ಸರ್ಕಾರ ಪರಿಗಣಿಸುತ್ತದೆ ಎಂದು ಭಾವಿಸುತ್ತೇನೆ ಮತ್ತು ನಂಬುತ್ತೇನೆ' ಎಂದು ದೇವೇಗೌಡ ಹೇಳಿದ್ದಾರೆ.

### ಟಿಎಂಸಿ ಮುಸ್ಲಿಂ ಶಾಸಕರ ಹೊರದಬ್ಬುತ್ತೇವೆ ಸುವೇಂದು ಹೇಳಿಕೆಗೆ ಮಮತಾ ಆಕ್ರೋಶ

## ನಕಲಿ ಹಿಂದೂ ಧರ್ಮ ಅಳವಡಿಕೆ ಬೇಡ

**ಕೋಲ್ಕತಾ:** ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಟಿಎಂಸಿಯ ಮುಸ್ಲಿಂ ಶಾಸ ಕರನ್ನು ಪಶ್ಚಿಮ ಬಂಗಾಳ ವಿಧಾನಸಭೆಯಿಂದ ಹೊರಹಾಕಲಾಗುವುದು ಎಂಬ ವಿರೋಧ ಪಕ್ಷದ ನಾಯಕ ಸುವೇಂದು ಅಧಿಕಾರಿ ಹೇಳಿ ಆಕ್ರೋಶ ವ್ಯಕ್ತಪಡಿಸಿರುವ ಸಿಎಂ ಮಮತಾ ಬ್ಯಾನರ್ಜಿ ನಕಲಿ ಹಿಂದೂ ಧರ್ಮ ಅಳವಡಿಕೆ ಬೇಡ ಎಂದು ಕಿಡಿಕಾರಿದ್ದಾರೆ. ಬಂಗಾಳ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಸಿಎಂ ಮಮತಾ ಬ್ಯಾನರ್ಜಿ, ರಾಜ್ಯದಲ್ಲಿ ಬಿಜೆಪಿ ನಕಲಿ ಹಿಂದೂ ಧರ್ಮವನ್ನು ಆಮದು ಮಾಡಿಕೊಳ್ಳುತ್ತಿದೆ. ಹಿಂದೂ ಧರ್ಮವನ್ನು ರಕ್ಷಿಸುವ ಹಕ್ಕು ನನಗಿದೆ, ಆದರೆ ನೀವು ಅನುಸರಿಸುತ್ತಿರುವ ಆವೃತ್ತಿಯ ಹಿಂದೂ ಧರ್ಮವಲ್ಲ. ಹಿಂದೂ ಕಾರ್ಡ್ ಪ್ಲೇ ಮಾಡಬೇಡಿ ಎಂದು ಹೇಳಿದ್ದಾರೆ.

ಅಂತೆಯೇ, ಕೇಸರಿ ಪಕ್ಷವು ರಾಜ್ಯಕ್ಕೆ ನಕಲಿ ಹಿಂದೂ ಧರ್ಮವನ್ನು ಆಮದು ಮಾಡಿಕೊಳ್ಳುತ್ತಿದೆ. ಬಿಜೆಪಿ ನಾಗರಿಕರ ಹಕ್ಕುಗಳನ್ನು ದುರ್ಬಲಗೊಳಿಸುತ್ತಿದೆ. ನಿಮ್ಮ ಆಮದು ಮಾಡಿಕೊಂಡ ಹಿಂದೂ ಧರ್ಮವನ್ನು ವೇದಗಳು ಅಥವಾ ನಮ್ಮ ಋಷಿಗಳು ಕೂಡ ಬೆಂಬಲಿಸುವುದಿಲ್ಲ. ನಾಗರಿಕರಾಗಿ ಮುಸ್ಲಿಮರ ಹಕ್ಕುಗಳನ್ನು ನೀವು ಹೇಗೆ ನಿರಾಕರಿಸಬಹುದು ಇದು ವಂಚನೆಯಲ್ಲದೆ ಬೇರೇನೂ ಅಲ್ಲ. ನೀವು ನಕಲಿ ಹಿಂದೂ ಧರ್ಮವನ್ನು ಆಮದು ಮಾಡಿಕೊಳ್ಳುತ್ತಿದ್ದೀರಿ ಎಂದು ಕಿಡಿಕಾರಿದರು. ಹಿಂದೂ ಜನಸಂಖ್ಯೆಯಿಂದ ಟಿಎಂಸಿ ಅಧಿಕಾರದಿಂದ ಹೊರಹಾಕಲ್ಪಡುತ್ತದೆ ಎಂಬ ಸುವೇಂದು ಅಧಿಕಾರಿ ಮಮತಾ ಬ್ಯಾನರ್ಜಿ ತಿರುಗೇಟು ನೀಡಿದರು. 'ನಿಮ್ಮ ನಾಯಕರ ಹೇಳಿಕೆಗಳ ಬಗ್ಗೆ ನಾನು ಪ್ರತಿಕ್ರಿಯಿಸಲು ಸಾಧ್ಯವಾಗದಿದ್ದರೆ, ಸದನದ ಹೊರಗೆ ನಮ್ಮ ನಾಯಕರ ಹೇಳಿಕೆಗಳ ಬಗ್ಗೆ ನೀವು ಹೇಗೆ ಪ್ರತಿಕ್ರಿಯಿಸಬಹುದು ನಮ್ಮ



ನಂಬಿಕೆಗಳನ್ನು ಸಮರ್ಥಿಸಿಕೊಳ್ಳುವ ಹಕ್ಕು ನಮಗಿದೆ.

ಅಂತೆಯೇ ಫಿರ್ಹಾದ್ ಹಕೀಮ್, ಹುಮಾಯೂನ್ ಕಬೀರ್ ಮತ್ತು ಮದನ್ ಮಿತ್ರ ಸೇರಿದಂತೆ ಟಿಎಂಸಿ ತನ್ನ ಕೆಲವು ಸದಸ್ಯರಿಗೆ ಅನುಚಿತವೆಂದು ಪರಿಗಣಿಸಬಹುದಾದ ಹೇಳಿಕೆಗಳನ್ನು ನೀಡದಂತೆ ಸಲಹೆ ನೀಡಿದೆ. ಆದರೆ ಇದು ನಮ್ಮ ಪಕ್ಷದ ಆಂತರಿಕ ವಿಷಯ ಎಂದೂ ಮಮತಾ ಬ್ಯಾನರ್ಜಿ ಹೇಳಿದರು. ಅಲ್ಪಸಂಖ್ಯಾತರನ್ನು ನಡೆಸಿಕೊಳ್ಳುವ ಬಿಜೆಪಿಯ ಬಗ್ಗೆಯೂ ಬ್ಯಾನರ್ಜಿ ಕಳವಳ ವ್ಯಕ್ತಪಡಿಸಿದ್ದು, ನಾವು ಜಾತ್ಯತೀತ, ಬಹುತ್ವವಾದಿ ರಾಷ್ಟ್ರ. ಪ್ರತಿಯೊಬ್ಬರಿಗೂ ಅವರ ಧರ್ಮವನ್ನು ಆಚರಿಸುವ ಹಕ್ಕಿದೆ. ಅಲ್ಪಸಂಖ್ಯಾತರನ್ನು ರಕ್ಷಿಸುವುದು ಬಹುಸಂಖ್ಯಾತರ ಕರ್ತವ್ಯ.

ನಾವು ನಮ್ಮ ದೇಶದ ಸಾರ್ವಭೌಮತ್ವ ಮತ್ತು ಜಾತ್ಯತೀತತೆಯನ್ನು ರಕ್ಷಿಸಬೇಕು. ಟಿಎಂಸಿ ಎಲ್ಲಾ ಧರ್ಮಗಳನ್ನು ಗೌರವಿಸುತ್ತದೆ, ಶಾಂತಿ, ಸಾಮರಸ್ಯವನ್ನು ಕಾಪಾಕೊಳ್ಳಲು ಬದ್ಧವಾಗಿದೆ. ನಾನು ಎಲ್ಲಾ ಧರ್ಮಗಳನ್ನು ಪ್ರೀತಿಸುತ್ತೇನೆ ಮತ್ತು ಯಾವುದೇ ಸಮುದಾಯದ ವಿರುದ್ಧ ದ್ವೇಷವನ್ನು ಹರಡಲು ಯಾವುದೇ ರಾಜಕೀಯ ಪಕ್ಷ ಮಾಡುವ ಪ್ರಯತ್ನಗಳನ್ನು ನಾವು ಖಂಡಿಸುತ್ತೇವೆ ಎಂದು ಹೇಳುವ ಮೂಲಕ ಜಾತ್ಯತೀತತೆಗೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.

ಬಿಜೆಪಿ ಸದನದಲ್ಲಿ ಗದ್ದಲವನ್ನು ಸೃಷ್ಟಿಸಲು ಯೋಜಿಸಿತ್ತು. ಬಿಜೆಪಿ ಸದಸ್ಯರು ಸದನದಿಂದ ಹೊರನಡೆದರು ಮತ್ತು ಪ್ರತಿಭಟನೆಯ ಕ್ರಮವಾಗಿ ಕಾಗದಪತ್ರಗಳನ್ನು ಹರಿದು ಹಾಕಿದರು. ಶಾಸಕಾಂಗ ಪ್ರಕ್ರಿಯೆಗೆ ಗೌರವ ನೀಡಬೇಕು. ಸದಸ್ಯರು ಪರಸ್ಪರ ಆಲಿಸಬೇಕು, ಸದನದ ಘನತೆಯನ್ನು ಎತ್ತಿಹಿಡಿಯಬೇಕು. ಬಿಜೆಪಿ ಅಧಿಕಾರ ವಹಿಸಿಕೊಂಡರೆ, ತೃಣಮೂಲ ಕಾಂಗ್ರೆಸ್‌ನ ಮುಸ್ಲಿಂ ಶಾಸಕರನ್ನು ವಿಧಾನ ಸಭೆಯಿಂದ ಹೊರಹಾಕಲಾಗುತ್ತದೆ ಎಂಬ ಸುವೇಂದು ಅಧಿಕಾರಿಯವರ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಬ್ಯಾನರ್ಜಿ ಈ ಹೇಳಿಕೆ ನೀಡಿದ್ದಾರೆ.

> **ಈ ಸದನ ಎಲ್ಲಾರಿಗೂ ಸೇರಿದ್ದು. ಪ್ರಜಾಪ್ರಭುತ್ವ ಮೌಲ್ಯಗಳು ಮತ್ತು ಪರಸ್ಪರ ಗೌರವವು ಕಲಾಪಗಳನ್ನು ಮಾರ್ಗದರ್ಶಿಸಬೇಕು. ಜನಸಂಖ್ಯೆಯ ಶೇಕಡಾ 23 ರಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದವರು ಮತ್ತು ಶೇಕಡಾ 33 ರಷ್ಟು ಮುಸ್ಲಿಮರಾಗಿದ್ದಾರೆ. ನಾವು ಎಲ್ಲಾ ಸಮುದಾಯಗಳನ್ನು ರಕ್ಷಿಸಬೇಕು. ಮಾನವೀಯ ಮೌಲ್ಯಗಳು ಧಾರ್ಮಿಕ ಗಡಿಗಳನ್ನು ಮೀರಿವೆ**
>
> **– ಮಮತಾ ಬ್ಯಾನರ್ಜಿ, ಸಿಎಂ**

## ಮಿನಿ ನ್ಯೂಸ್

### ದಂಡಿ ಯಾತ್ರೆಯಲ್ಲಿ ಪಾಲ್ಗೊಂಡವರಿಗೆ ಪ್ರಧಾನಿ ಮೋದಿ ನಮನ

**ನವದೆಹಲಿ:** ದಂಡಿ ಯಾತ್ರೆಯಲ್ಲಿ ಪಾಲ್ಗೊಂಡವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ. 1930ರ ಮಾ.12ರಂದು ಉಪ್ಪಿನ ಮೇಲಿನ ಬ್ರಿಟಿಷ್ ತೆರಿಗೆಯನ್ನು ಪ್ರತಿಭಟಿಸಲು ಗಾಂಧಿ ಅವರು ಸಬರಮತಿ ಆಶ್ರಮದಿಂದ ದಂಡಿಗೆ ಮೆರವಣಿಗೆಯನ್ನು ಪ್ರಾರಂಭಿಸಿದ್ದರು. ಬುಧವಾರ ಭಾರತದ ಸ್ವಾತಂತ್ರ್ಯ ಹೋರಾಟದ ನಿರ್ಣಾಯಕ ಅಧ್ಯಾಯವಾದ ಐತಿಹಾಸಿಕ ದಂಡಿ ಮೆರವಣಿಗೆಯಲ್ಲಿ ಭಾಗವಹಿಸಿದ ಎಲ್ಲಾರಿಗೂ ನಾವು ಗೌರವ ಸಲ್ಲಿಸುತ್ತೇವೆ. ಮಹಾತ್ಮ ಗಾಂಧಿಯವರ ನೇತೃತ್ವದಲ್ಲಿ ಈ ಮಾರ್ಚ್ ಸ್ವಾವಲಂಬನೆ, ಸ್ವಾತಂತ್ರ್ಯಕ್ಕಾಗಿ ರಾಷ್ಟ್ರವ್ಯಾಪಿ ಆಂದೋಲನವನ್ನು ಹುಟ್ಟು ಹಾಕಿತು ಎಂದು ಮೋದಿ ಹೇಳಿದ್ದಾರೆ. ದಂಡಿ ಯಾತ್ರೆಯಲ್ಲಿ ಭಾಗವಹಿಸಿದ ಎಲ್ಲಾರ ಧೈರ್ಯ, ತ್ಯಾಗ, ಸತ್ಯ ಮತ್ತು ಅಹಿಂಸೆಗೆ ಅಚಲ ಬದ್ಧತೆ ತಲೆಮಾರುಗಳಿಗೆ ಸ್ಫೂರ್ತಿ ನೀಡುತ್ತದೆ ಎಂದು ಅವರು ಹೇಳಿದರು. ಈ ಮೆರವಣಿಗೆಯು ಭಾರಿ ಜನಪ್ರಿಯ ಬೆಂಬಲವನ್ನು ಗಳಿಸಿತು, ಭಾರತದ ಸ್ವಾತಂತ್ರ್ಯ ಚಳವಳಿಯ ಪ್ರಮುಖ ತಿರುವು ಎಂದು ಪರಿಗಣಿಸಲಾಗಿದೆ.

### ಲಂಚ ಪಡೆದ ಅಧಿಕಾರಿಗಳ ಬಂಧನ

**ಥಾಣೆ:** ಭ್ರಷ್ಟಾಚಾರ ನಿಗ್ರಹ ದಳ ಅಧಿಕಾರಿಗಳು ಸರ್ಕಾರಿ ಸ್ವಾಮ್ಯದ ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಇಬ್ಬರು ಉದ್ಯೋಗಿಗಳನ್ನು ಲಂಚ ಪಡೆದ ಆರೋಪದ ಮೇಲೆ ಬಂಧಿಸಿದೆ. ಎಸಿಬಿಯ ಥಾಣೆ ಘಟಕಕ್ಕೆ ದೂರು ನೀಡಿದ ನಂತರ ನಡೆದ ಕಾರ್ಯಾಚರಣೆಯಲ್ಲಿ ಕಛೇರಿಯ ಹಿರಿಯ ಗುಮಾಸ್ತ ಹರೀಶ್ ಮರಾಠ (47) ಮತ್ತು ಕಿರಿಯ ಗುಮಾಸ್ತ ಹೇಮಂತ್ ಕಿರ್ಪಣ್ (39) ಅವರನ್ನು ಬಂಧಿಸಲಾಗಿದೆ. ದೂರುದಾರರ ತಾಯಿಯ ವೈದ್ಯಕೀಯ ಬಿಲ್‌ಗಳನ್ನು ಪಾವತಿಸಲು ಇಬ್ಬರೂ ಲಂಚ ಕೇಳಿದ್ದರು ಲಂಚದ ಮೊತ್ತವನ್ನು ಸ್ವೀಕರಿಸುತ್ತಿದ್ದಾಗ ಕಿರ್ಪಣ್ ಅವರನ್ನು ರೆಡ್ ಹ್ಯಾಂಡ್ ಆಗಿ ಹಿಡಿಯಲಾಯಿತು. ಎಂದು ಎಸಿಬಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅವರು ಆರಂಭದಲ್ಲಿ 23,000 ರೂ.ಗಳಿಗೆ ಬೇಡಿಕೆ ಇಟ್ಟರು, ಆದರೆ ನಂತರ 15,000 ರೂ.ಗಳನ್ನು ಸ್ವೀಕರಿಸಲು ಒಪ್ಪಿಕೊಂಡರು ಎಂದು ದೂರುದಾರರು ಆರೋಪಿಸಿದ್ದಾರೆ. ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಮತ್ತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

### ರಜೌರಿಯ ಎಲ್‌ಒಸಿ ಬಳಿ ಶಂಕಿತ ಸ್ನೈಪರ್ ದಾಳಿ, ಯೋಧನಿಗೆ ಗಾಯ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ರಜೌರಿಯ ಗಡಿ ನಿಯಂತ್ರಣ ರೇಖೆಯ (ಎಲ್‌ಒಸಿ) ಉದ್ದಕ್ಕೂ ನಡೆದ ಶಂಕಿತ ಸ್ನೈಪರ್ ಗುಂಡಿನ ದಾಳಿಯಲ್ಲಿ ಗಡಿ ಹೊರಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಯೋಧ ಬುಧವಾರ ಗಾಯಗೊಂಡಿದ್ದಾರೆ. ರಾಜೌರಿಯ ನೌಶೇರಾ ಸೆಕ್ಟರ್‌ನ ಕಲ್ಸಿಯಾನ್ ಪ್ರದೇಶದಲ್ಲಿ ಮುಂಚೂಣಿ ಪೋಸ್ಟ್ ಅನ್ನು ಕಾಯುತ್ತಿದ್ದ ಸೈನಿಕನಿಗೆ ಗುಂಡು ತಗುಲಿದೆ ಎಂದು ಮೂಲಗಳು ತಿಳಿಸಿವೆ. ಗಾಯಗೊಂಡ ಸೈನಿಕನನ್ನು ವಿಶೇಷ ಚಿಕಿತ್ಸೆಗಾಗಿ ಉಧಂಪುರದಲ್ಲಿರುವ ಮಿಲಿಟರಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಘಟನೆ ನಂತರ, ಸೇನಾ ಸಿಬ್ಬಂದಿ ಕಟ್ಟೆಚ್ಚರ ವಹಿಸಿ, ಆ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆ ಎಂದು ಅವರು ಹೇಳಿದರು. ಸೇನಾ ಸಿಬ್ಬಂದಿ ಡ್ರೋನ್‌ಗಳನ್ನು ಸಹ ಸೇವೆಗೆ ನಿಯೋಜಿಸಿದ್ದಾರೆ.

ಕಳೆದ ತಿಂಗಳು ಪಾಕಿಸ್ತಾನದ ಕರೆಯ ಮೇರೆಗೆ, ಉಭಯ ದೇಶಗಳ ನಡುವಿನ ಗಡಿ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಚಕನ್ ದಾ ಬಾಗ್‌ನಲ್ಲಿರುವ ಎಲ್‌ಒಸಿಯಲ್ಲಿ ಭಾರತ ಮತ್ತು ಪಾಕಿಸ್ತಾನಿ ಸೇನಾ ಅಧಿಕಾರಿಗಳ ನಡುವೆ ಧ್ವಜ ಸಭೆ ನಡೆಸಲಾಗಿತ್ತು. ಪೂಂಚ್ ಮತ್ತು ರಾಜೌರಿ ಜಿಲ್ಲೆಗಳ ಅವಳಿ ಗಡಿ ಜಿಲ್ಲೆಗಳಲ್ಲಿ ಎಲ್‌ಒಸಿ ಉದ್ದಕ್ಕೂ ಪಾಕಿಸ್ತಾನಿ ಪಡೆಗಳು ಕದನ ವಿರಾಮ ಉಲ್ಲಂಘನೆ ಮಾಡಿದ ನಂತರ ಸಭೆ ನಡೆಸಲಾಯಿತು. ಪೂಂಚ್‌ನ ಎಲ್‌ಒಸಿಯ ಈ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕನಿಷ್ಠ ಇಬ್ಬರು ಭಾರತೀಯ ಸೈನಿಕರು ಗಾಯಗೊಂಡ ಕೆಲವು ಸ್ನೈಪಿಂಗ್ ಘಟನೆಗಳು ನಡೆದಿವೆ. ಫೆಬ್ರುವರಿ 11 ರಂದು, ಜಮ್ಮುವಿನ ಅಖ್ನೂರ್ ಸೆಕ್ಟರ್‌ನ ಎಲ್‌ಒಸಿಯ ಉದ್ದಕ್ಕೂ ಐಇಡಿ ಸ್ಫೋಟ ಸಂಭವಿಸಿದೆ. ಈ ಘಟನೆಯಲ್ಲಿ ಸೇನಾ ಕ್ಯಾಪ್ಟನ್ ಮತ್ತು ಯೋಧ ಹುತಾತ್ಮರಾಗಿದ್ದರು ಮತ್ತು ಮತ್ತೊಬ್ಬ ಸೈನಿಕ ಗಾಯಗೊಂಡಿದ್ದಾರು.

### ಉಕ್ರೇನ್‌ಗೆ ಸೇನಾ ನೆರವು ನಿರ್ಬಂಧ ತೆರವುಗೊಳಿಸಿದ ಅಮೆರಿಕ

**ಜಿದ್ದಾ:** ರಷ್ಯಾ ವಿರುದ್ಧದ ಯುದ್ಧದಲ್ಲಿ 30 ದಿನಗಳ ಕದನ ವಿರಾಮಕ್ಕೆ ಸಮ್ಮತಿ ಸೂಚಿಸಿರುವ ಬೆನ್ನಲ್ಲೇ ಉಕ್ರೇನ್‌ಗೆ ಸೇನಾ ನೆರವು ನಿರ್ಬಂಧ ತೆರವುಗೊಳಿಸಿರುವುದಾಗಿ ಅಮೆರಿಕ ಘೋಷಿಸಿದೆ. ಸೌದಿ ಅರೇಬಿಯಾದ ಜೆದ್ದಾದಲ್ಲಿ ನಡೆದ ಮಹತ್ವದ ಮಾತುಕತೆಯ ಬಳಿಕ ಈ ಬೆಳವಣಿಗೆ ನಡೆದಿದೆ. ಮೂರು ವರ್ಷಗಳಿಂದ ನಡೆಯುತ್ತಿರುವ ಉಕ್ರೇನ್-ರಷ್ಯಾ ಯುದ್ಧವನ್ನು ಅಂತ್ಯಗಾಣಿಸುಲು ನಿಟ್ಟಿನಲ್ಲಿ ಉಕ್ರೇನ್ ಅಮೆರಿಕ ಮಧ್ಯೆ ಸೌದಿ ಅರೇಬಿಯಾದಲ್ಲಿ ಮಾತುಕತೆ ನಡೆದಿತ್ತು. ಅಮೆರಿಕ ಮುಂದಿರಿಸಿದ ಪ್ರಸ್ತಾಪವನ್ನು ಉಕ್ರೇನ್ ಒಪ್ಪಿಕೊಂಡಿದ್ದು, 30 ದಿನಗಳ ಕದನ ವಿರಾಮಕ್ಕೆ ಸಮ್ಮತಿಸಿದೆ ಎಂದು ಅಮೆರಿಕ, ಉಕ್ರೇನ್ ಅಧಿಕಾರಿಗಳು ತಿಳಿಸಿದ್ದಾರೆ.

ಈಗ ಅಮೆರಿಕ ಕದನ ವಿರಾಮ ಒಪ್ಪಂದ ಪ್ರಸ್ತಾಪವನ್ನು ರಷ್ಯಾದ ಮುಂದಿಡಲಿದೆ. ರಷ್ಯಾ ಜೊತೆ ಶಾಂತಿ ಒಪ್ಪಂದ ಮಾಡಿಕೊಳ್ಳುವುದಕ್ಕೆ ಸಂಬಂಧಿಸಿದಂತೆ ಶ್ವೇತಭವನದ ಓವಲ್ ಕಚೇರಿಯಲ್ಲಿ ಇತ್ತೀಚೆಗೆ ನಡೆದ ಮಾತುಕತೆಯಲ್ಲಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್ ಸ್ಕಿ ನಡುವೆ ವಾಗ್ವಾದ ಉಂಟಾಗಿತ್ತು. ಗುಂಡಿನ ದಾಳಿ ನಿಲ್ಲಿಸಲು ಉಕ್ರೇನ್ ಒಪ್ಪಿಕೊಂಡಿದೆ. ಈಗ ರಷ್ಯಾದ ಮುಂದೆ ಪ್ರಸ್ತಾಪವನ್ನು ಇಡಲಿದ್ದೇವೆ. ಇದನ್ನು ಒಪ್ಪಿಕೊಳ್ಳುವುದು ಬಿಡುವುದು ಅವರಿಗೆ ಬಿಟ್ಟಿದ್ದು' ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ತಿಳಿಸಿದ್ದಾರೆ.

### ಮೊಬೈಲ್‌ನಲ್ಲಿ ಯುವಕ ಮಗ್ನ-ಸದ್ದಿಲ್ಲದೇ ಬಂದು ನಾಯಿ ಹೊತ್ತೊಯ್ದ ಚಿರತೆ

**ಪುಣೆ:** ಯುವಕನೊಬ್ಬ ತನ್ನ ಮನೆಯ ಹೊರಗೆ ಮಂಚದ ಮೇಲೆ ಮೊಬೈಲ್ ವೀಕ್ಷಣೆ ಮಾಡುತ್ತಾ ಮಲಗಿದ್ದ ವೇಳೆ ಚಿರತೆಯೊಂದು ಸದ್ದಿಲ್ಲದೇ ಬಂದು ಯುವಕನ ಮಂಚದ ಬಳಿ ಮಲಗಿದ್ದ ನಾಯಿಯನ್ನು ಹೊತ್ತೊಯ್ದು ತಿಂದಿರುವ ಘಟನೆ ಪುಣೆ ಬಳಿ ಇತ್ತೀಚೆಗೆ ನಡೆದಿದೆ. ಘಟನೆಯ ಕುರಿತ ವಿಡಿಯೊ ಸಿಸಿಟಿವಿಯಲ್ಲಿ ದಾಖಲಾಗಿದ್ದು ಸಾಮಾಜಿಕ ಮಾಧ್ಯಮಗಳಲ್ಲಿ ಗಮನ ಸೆಳೆದಿದೆ. ಈ ಘಟನೆ ಪುಣೆ ಹೊರವಲಯದ ಭೋರ್ ತಾಲ್ಲೂಕಿನ ದೇಗಾಂವ್ ಎಂಬಲ್ಲಿ ನಡೆದಿದೆ. ಚಿರತೆ ಬಂದು ನಾಯಿಯನ್ನು ಹೊತ್ತೊಯ್ಯುವವರೆಗೂ ಅಲ್ಲಿಯೇ ಇದ್ದ ಯುವಕ ಮೊಬೈಲ್‌ನಲ್ಲಿ ಮಗ್ನನಾಗಿದ್ದು ವೀಡಿಯೋದಲ್ಲಿ ಕಂಡು ಬಂದಿದೆ. ಪುಣೆ ಸುತ್ತ ಮುತ್ತ ಚಿರತೆ ಹಾವಳಿ ಹೆಚ್ಚುತ್ತಿದ್ದು ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.



# ಕುಕ್ಕೆ ದೇಗುಲದಲ್ಲಿ ಕತ್ರಿನಾ

## ಆಶ್ಲೇಷಾ ಬಲಿ ಪೂಜೆ ಮಾಡಿಸಿದ ನಟಿ



ಬಾಲಿವುಡ್ ನಟಿ ಕತ್ರಿನಾ ಕೈಫ್ ಅವರು ಕುಕ್ಕೆ ಸುಬ್ರಹ್ಮಣ್ಯದಲ್ಲಿ ತಂಗಿ ದ್ದಾರೆ. ದೇವಸ್ಥಾನದಲ್ಲಿ ಆಶ್ಲೇಷಾ ಬಲಿ ಪೂಜೆಯಲ್ಲಿ ಭಾಗಿಯಾಗಿದ್ದಾರೆ. ನಿನ್ನೆಯಿಂದ ಕತ್ರಿನಾ ದೇವಸ್ಥಾನದಲ್ಲಿ ವಿವಿಧ ಪೂಜೆಯಲ್ಲಿ ಭಾಗಿಯಾಗಿದ್ದಾರೆ. ಸರ್ಪ ಸಂಸ್ಕಾರ ಸೇವೆ, ನಾಗ ಪ್ರತಿಷ್ಠಾ ಸೇವೆಯಲ್ಲಿ ಭಾಗಿ ಯಾಗಿದ್ದಾರೆ.

ಸಂತಾನ, ವ್ಯವಹಾರಿಕ, ಕೌಟುಂಬಿಕ, ಜೀವನದ ಒಳಿತಿಗಾಗಿ ಕತ್ರಿನಾ ವಿಶೇಷ ಪೂಜೆ ಮಾಡಿಸುತ್ತಿದ್ದಾರೆ. ಸಾಮಾನ್ಯವಾಗಿ ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರಕ್ಕೆ ಮದುವೆಯಾಗದವರು, ಮಕ್ಕಳಾಗದವರು ಹೆಚ್ಚಾಗಿ ಭೇಟಿ ನೀಡುತ್ತಾರೆ. ದೋಷ ನಿವಾರಣೆಗೆ ಅನೇಕರು ಸರ್ಪ ಸಂಸ್ಕಾರ ಪೂಜೆ ನೆರವೇರಿಸುತ್ತಾರೆ. ಹಾಗಾಗಿ ಬಾಲಿವುಡ್ ನಟಿ ಕತ್ರಿನಾ ಕೂಡ ಸುಬ್ರಹ್ಮಣ್ಯನ ಮೊರೆ ಹೋಗಿದ್ದಾರೆ.



# ದರ್ಶನ್ ಸುಮಲತಾ ನಡುವೆ ಬಿರುಕು

ಸ್ಯಾಂಡಲ್‌ವುಡ್ ನಟ ದರ್ಶನ್ ಮತ್ತು ಮದರ್ ಇಂಡಿಯಾ ಸುಮಲತಾ ನಡುವೆ ಬಿರುಕು ಮೂಡಿದ್ಯಾ ಎಂಬ ಅನುಮಾನ ಅಭಿಮಾನಿಗಳಲ್ಲಿ ಮೂಡಿದೆ. ಮದರ್ ಇಂಡಿಯಾ ಸೇರಿ ದರ್ಶನ್ ಎಲ್ಲರನ್ನೂ ಇನ್ಸ್ಟಾಗ್ರಾಂನಲ್ಲಿ ಅನ್‌ಫಾಲೋ ಮಾಡಿದ ಬೆನ್ನಲ್ಲೇ ಸುಮಲತಾ ಹಂಚಿಕೊಂಡಿರುವ ಮತ್ತೊಂದು ಪೋಸ್ಟ್ ಈಗ ಇಬ್ಬರ ನಡುವಿನ ಬಿರುಕಿನ ಬಗ್ಗೆ ಚರ್ಚೆ ಹುಟ್ಟುಹಾಕುವಂತೆ ಮಾಡಿದೆ. ಮತ್ತೊಂದು ಮಾರ್ಮಿಕ ಸಂದೇಶವೊಂದನ್ನು ನಟಿ ಹಂಚಿಕೊಂಡಿದ್ದಾರೆ. ನೋವಿಲ್ಲದಂತೆ ಎದ್ದು ಬರುವುದು, ಚಿಂತೆ ಇಲ್ಲದಂತೆ ಇರೋದು. ನಿಮ್ಮನ್ನು ಯಾರು ಅರ್ಥ ಮಾಡಿಕೊಳ್ತಾರೋ ಅಂಥವರ ಜೊತೆಗೆ ಇರೋದು.

ಇವೆಲ್ಲಾ ಸಾಮಾಜಿಕ ಮಾಧ್ಯಮದಲ್ಲಿ ತೋರಿಸಲಾಗದ ಖಜಾನೆ ಎಂದು ಇನ್ಸ್ಟಾಗ್ರಾಂ ಪೋಸ್ಟ್ ಶೇರ್ ಮಾಡಿದ್ದಾರೆ. ಜೈಲಿನಲ್ಲಿದ್ದಾಗ ತನ್ನ ಬೆನ್ನಿಗೆ ಸುಮಲತಾ ನಿಲ್ಲಲಿಲ್ಲ ಅಂತ ದರ್ಶನ್ ಕೋಪವಿದ್ಯಾ ಎಂದೆಲ್ಲಾ ಸೋಶಿಯಲ್ ಮೀಡಿಯಾದಲ್ಲಿ ನೆಟ್ಟಿಗರು ಚರ್ಚಿಸುತ್ತಿದ್ದಾರೆ.

ಈ ಹಿಂದಿನ ಪೋಸ್ಟ್‌ನಲ್ಲಿ, ಬೆಸ್ಟ್ ಆಕ್ಟಿಂಗ್ ಆಸ್ಕರ್ ಅವಾರ್ಡ್ ಯಾರಿಗೆ ಹೋಗುತ್ತೆ ಅಂದ್ರೆ.. ಯಾರು ಸತ್ಯವನ್ನ ತಿರುಚುತ್ತಾರೋ, ತಮ್ಮದೇ ತಪ್ಪು ಇಟ್ಕೊಂಡು ಬೇರೆಯವರ ಮೇಲೆ ಹಾಕಿ ನೋವು ಮಾಡೋದು, ತಮ್ಮ ಮೇಲಿನ ನಿಂದನೆಯನ್ನ ಬೇರೆಯವರ ಮೇಲೆ ಹಾಕೋದು, ಗೂಬೆ ಕೂರಿಸೋದು ಮಾಡಿ ತಮ್ಮನ್ನ ತಾವು ಹೀರೋ ಎಂಬಂತೆ ಬಿಂಬಿಸಿಕೊಳ್ಳೋದು ಎಂದು ಸುಮಲತಾ ಅವರು ಪೋಸ್ಟ್ ಮಾಡಿದ್ದರು.



# ಅನುಪಮಾ ಪರಮೇಶ್ವರನ್ ಸಿನಿಮಾಗೆ ಸಮಂತಾ ಸಾಥ್

'ಟಿಲ್ಲು ಸ್ಕ್ವೇರ್' ಸಿನಿಮಾ ಸಕ್ಸಸ್ ಬಳಿಕ ಅನುಪಮಾ ಪರಮೇಶ್ವರನ್ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸದ್ಯ 'ಪರದಾ' ಚಿತ್ರದಲ್ಲಿ ತೊಡಗಿಸಿಕೊಂಡಿರುವ ಅನುಪಮಾಗೆ ಸಮಂತಾ ಸಾಥ್ ನೀಡುತ್ತಿದ್ದಾರೆ. ನಟಿಯ ಹೊಸ ಸಿನಿಮಾದಲ್ಲಿ ಸಮಂತಾ ಅತಿಥಿ ಪಾತ್ರದಲ್ಲಿ ನಟಿಸುತ್ತಿದ್ದಾರೆ ಎನ್ನಲಾದ ಸುದ್ದಿಯೊಂದು ಚರ್ಚೆಗೆ ಗ್ರಾಸವಾಗಿದೆ.

'ಪರದಾ' ಸಿನಿಮಾದಲ್ಲಿ ಅನುಪಮಾ ಮತ್ತು ದರ್ಶನಾ ರಾಜೇಂದ್ರನ್ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ಚಿತ್ರದಲ್ಲಿ ಸಮಂತಾ ಕೂಡ ವಿಶೇಷ ಪಾತ್ರದಲ್ಲಿ ನಟಿಸಲಿದ್ದಾರೆ ಎನ್ನಲಾಗಿದೆ. ಚಿತ್ರತಂಡ ಕೂಡ ನಟಿಯನ್ನು ಸಂಪರ್ಕಿಸಿ, ರೋಲ್ ಬಗ್ಗೆ ಮಾತುಕತೆ ನಡೆಸಿದ್ದಾರೆ ಎಂದು ಹೇಳಲಾಗುತ್ತಿದೆ. ಸದ್ಯ ಹರಿದಾಡುತ್ತಿರುವ ಸುದ್ದಿ ನಿಜನಾ ಎಂಬುದನ್ನು ಸಮಂತಾ ಅಥವಾ ಚಿತ್ರತಂಡ ಅಧಿಕೃತವಾಗಿ ತಿಳಿಸುವವರೆಗೂ ಕಾದುನೋಡಬೇಕಿದೆ. ಅಂದಹಾಗೆ, ಮಲಯಾಳಂನಲ್ಲಿ ಬ್ಯಾಕ್ ಟು ಬ್ಯಾಕ್ 3 ಸಿನಿಮಾಗಳಲ್ಲಿ ಅನುಪಮಾ ನಟಿಸುತ್ತಿದ್ದಾರೆ. ಚಿಯಾನ್ ವಿಕ್ರಮ್ ಪುತ್ರ ಧ್ರುವಗೆ ನಾಯಕಿಯಾಗಿ ಕಾಣಿಸಿಕೊಳ್ಳಿದ್ದಾರೆ. ಇತ್ತ ಸಮಂತಾ ಅವರು ನಿರ್ದೇಶಕಿ ನಂದಿನಿ ರೆಡ್ಡಿ ಜೊತೆ ಹೊಸ ಸಿನಿಮಾ ಮಾಡುತ್ತಿದ್ದಾರೆ. ಬಾಲಿವುಡ್‌ನಲ್ಲೂ ನಟಿಗೆ ಉತ್ತಮ ಅವಕಾಶಗಳು ಅರಸಿ ಬರುತ್ತಿವೆ.

ರೋಲ್ ಬಗ್ಗೆ ಮಾತುಕತೆ

# ಪ್ಯಾರಿಸ್ ಬೀದಿಯಲ್ಲಿ ಪ್ರಣಿತಾ ಸುಭಾಷ್ ಹಾಟ್ ಪೋಸ್

ಸ್ಯಾಂಡಲ್‌ವುಡ್ ನಟಿ ಪ್ರಣಿತಾ ಸುಭಾಷ್ ಪ್ಯಾರಿಸ್ ಬೀದಿಯಲ್ಲಿ ಹಾಟ್ ಆಗಿ ಪೋಸ್ ಕೊಟ್ಟಿದ್ದಾರೆ. ಎರಡು ಮಕ್ಕಳ ತಾಯಿಯಾಗಿರೋ ನಟಿಯ ಬೋಲ್ಡ್ ಅವತಾರಕ್ಕೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಗಮನ ಸೆಳೆಯೋ ಪ್ರಣಿತಾ ಇದೀಗ ಪ್ಯಾರಿಸ್‌ನಲ್ಲಿ ಶೋಲ್ಡರ್‌ಲೆಸ್ ಡ್ರೆಸ್‌ನಲ್ಲಿ ಮಿಂಚಿದ್ದಾರೆ. ಲೈಟ್ ಆರೇಂಜ್ ಧಿರಿಸಿನಲ್ಲಿ ಕಂಗೊಳಿಸಿದ್ದಾರೆ. ನಟಿಯ ಮುಖದಲ್ಲಿ ಗ್ಲೋ ಎದ್ದು ಕಾಣುತ್ತಿದೆ.

ಮತ್ತೊಂದು ಪೋಸ್ಟ್‌ನಲ್ಲಿ ಒಳಉಡುಪು ಧರಿಸಿ, ಅದರ ಮೇಲೆ ಕೋಟ್ ಹಾಗೂ ಪ್ಯಾಂಟ್ ಧರಿಸಿದ್ದಾರೆ. ವಿವಿಧ ಭಂಗಿಯಲ್ಲಿ ಪ್ರಣಿತಾ ಪೋಸ್ ನೀಡಿದ್ದಾರೆ. ನಟಿಯ ಬೋಲ್ಡ್ ಅವತಾರಕ್ಕೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಪ್ರಣಿತಾ ಸುಭಾಷ್ ತಾಯಿಯಾದ್ಮೇಲೆ ನಿಮ್ಮ ಅಂದ ಹೆಚ್ಚಾಯ್ತಾ ಎಂದೆಲ್ಲಾ ಕಾಮೆಂಟ್ ಮಾಡಿದ್ದಾರೆ. ನಟಿಯ ಫ್ಯಾಷನ್ ಸೆನ್ಸ್‌ಗೆ ಅನೇಕರು ಮೆಚ್ಚುಗೆ ಸೂಚಿಸಿದ್ದಾರೆ. ಸಂತೂರ್ ಮಮ್ಮಿ ಎಂದು ಹಾಡಿ ಹೊಗಳಿದ್ದಾರೆ. ಅಂದಹಾಗೆ, ಉದ್ಯಮಿ ನಿತಿನ್ ಜೊತೆ 2021ರಲ್ಲಿ ಹಸೆಮಣೆ ಏರಿದರು. ಅವರ ಸುಂದರ ದ್ಯಾಂಪತ್ಯಕ್ಕೆ ಇಬ್ಬರೂ ಮಕ್ಕಳು ಸಾಕ್ಷಿಯಾಗಿದ್ದಾರೆ. ಮದುವೆಯಾದ್ಮೇಲೆಯೂ ಸಿನಿಮಾಗಳಲ್ಲಿ ಪ್ರಣಿತಾ ಆಕ್ಟೀವ್ ಆಗಿದ್ದಾರೆ.





# ನಟಿ ರನ್ಯಾ ಬೆನ್ನಲ್ಲೇ ಮತ್ತಿಬ್ಬರು ಸ್ಯಾಂಡಲ್‌ವುಡ್ ನಟಿಯರಿಗೆ ಮಾಸ್ಟರ್ ಸ್ಟ್ರೋಕ್

ಈಗ ಏನಾಗಿದೆ ನೋಡಿ

ನಟಿ ರನ್ಯಾ ರಾವ್ ಬೆನ್ನಲ್ಲೇ ಮತ್ತಿಬ್ಬರು ಸ್ಯಾಂಡಲ್‌ವುಡ್ ನಟಿಯರಿಗೆ ಮಾಸ್ಟರ್ ಸ್ಟ್ರೋಕ್ ಎದುರಾಗಿದೆ. ಸ್ಯಾಂಡಲ್‌ವುಡ್ ಡ್ರಗ್ಸ್ ಕೇಸಲ್ಲಿ ಇಬ್ಬರು ನಟಿಯರಿಗೆ ಸಿಸಿಬಿ ಶಾಕ್ ನೀಡಿದೆ. ನಟಿ ಸಂಜನಾ ಮತ್ತು ರಾಗಿಣಿ ಎಫ್‌ಐಆರ್ ರದ್ದು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಸಿಸಿಬಿ ಮೇಲ್ಮನವಿ ಅರ್ಜಿ ಸಲ್ಲಿಸಿದೆ. ಸಿಸಿಬಿ ಡ್ರಗ್ಸ್ ಕೇಸಲ್ಲಿ



ಎಫ್ ಐ ಆರ್ ರದ್ದುಗೊಳಿಸುವಂತೆ ಹೈಕೋರ್ಟ್ ನಟಿಯರು ಅರ್ಜಿ ಸಲ್ಲಿಸಿದ್ದರು. ನಟಿ ಸಂಜನಾ ಗಲ್ರಾನಿ, ರಾಗಿಣಿ ದ್ವಿವೇದಿ ಹಾಗೂ ವೀರೇನ್ ಖನ್ನಾನ ಎಫ್ ಐಆರ್ ಅನ್ನು ಹೈಕೋರ್ಟ್ ರದ್ದು ಮಾಡಿತ್ತು. ಗೃಹ ಇಲಾಖೆ ಮತ್ತು ಕಾನೂನು ಇಲಾಖೆಯ ಸಮ್ಮತಿ ಬಳಿಕ ಸುಪ್ರೀಂಗೆ ಸಿಸಿಬಿ ಮೇಲ್ಮನವಿ ಅರ್ಜಿ ಸಲ್ಲಿಸಿದೆ. ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಹೋಗಲು ಕಾನೂನು ಇಲಾಖೆ ಅಸ್ತು ಎಂದಿತ್ತು. ಆ ಬಳಿಕ ಗೃಹ ಇಲಾಖೆಯಿಂದ ಅನುಮತಿ ಪಡೆದು ಸುಪ್ರೀಂಗೆ ಮೇಲ್ಮನವಿ ಸಲ್ಲಿಸಿದೆ. ಹೈಕೋರ್ಟ್ ಆದೇಶ ರದ್ದುಗೊಳಿಸುವಂತೆ ಸಿಸಿಬಿ, ಸುಪ್ರೀಂ ಮೊರೆ ಹೋಗಿದೆ.

# ಎರಡೂವರೆ ವರ್ಷಗಳಲ್ಲಿ ಟೀಮ್ ಇಂಡಿಯಾ ಮುಂದಿದೆ 3 ವಿಶ್ವಕಪ್



ಟೀಮ್ ಇಂಡಿಯಾ ದಿಗ್ಗಜರಾದ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಏಕದಿನ ಕ್ರಿಕೆಟ್‌ನಲ್ಲಿ ಮುಂದುವರೆಯುವುದಾಗಿ ಖಚಿತಪಡಿಸಿದ್ದಾರೆ. ಹೀಗಾಗಿ ಈ ಇಬ್ಬರು ದಿಗ್ಗಜರು ಸೌತ್ ಆಫ್ರಿಕಾ, ನಮೀಬಿಯಾ ಹಾಗೂ ಝಿಂಬಾಬ್ವೆ ಜಂಟಿಯಾಗಿ ಆಯೋಜಿಸುವ 2027ರ ಏಕದಿನ ವಿಶ್ವಕಪ್‌ನಲ್ಲಿ ಕಣಕ್ಕಿಳಿಯುವುದನ್ನು ಎದುರು ನೋಡಬಹುದು. 11 ವರ್ಷಗಳಲ್ಲಿ ಒಂದೇ ಒಂದು ಐಸಿಸಿ ಟ್ರೋಫಿ ಗೆಲ್ಲದ ಟೀಮ್ ಇಂಡಿಯಾ ಇದೀಗ 9 ತಿಂಗಳಲ್ಲಿ 2 ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದೆ. ಈ ಎರಡು ಟೂರ್ನಿಯಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿರುವ ಟೀಮ್ ಇಂಡಿಯಾ ಮುಂದಿರುವುದು ಟಿ20 ವಿಶ್ವಕಪ್. ಈ ವಿಶ್ವಕಪ್ ಬೆನ್ನಲ್ಲೇ ಭಾರತ ತಂಡ ಏಕದಿನ ವಿಶ್ವಕಪ್ ಟೂರ್ನಿ ಕೂಡ ಆಡಲಿದೆ. ಇದರ ನಡುವೆ ವಿಶ್ವ ಟೆಸ್ಟ್ ಚಾಂಪಿಯನ್ಸ್ ಫೈನಲ್ ಆಡುವ ಅವಕಾಶ ಕೂಡ ದೊರೆಯಲಿದೆ. ಅಂದರೆ ಮುಂದಿನ ಎರಡೂವರೆಗೆ ವರ್ಷಗಳಲ್ಲಿ ಮೂರು ವಿಶ್ವಕಪ್ ಗೆಲ್ಲುವ ಅವಕಾಶ ಟೀಮ್ ಇಂಡಿಯಾ ಮುಂದಿದೆ.

**ಟಿ20 ವಿಶ್ವಕಪ್:** 2026ರ ಟಿ20 ವಿಶ್ವಕಪ್ ಫೆಬ್ರವರಿ ಮತ್ತು ಮಾರ್ಚ್‌ನಲ್ಲಿ ನಡೆಯಲಿದೆ. ಮುಂದಿನ ವರ್ಷ ನಡೆಯಲಿರುವ ಈ ಟೂರ್ನಿಗೆ ಭಾರತ ಮತ್ತು ಶ್ರೀಲಂಕಾ ಆತಿಥ್ಯವಹಿಸಲಿದೆ.

**ಏಕದಿನ ವಿಶ್ವಕಪ್:** 2027 ರಲ್ಲಿ ವಿಶ್ವಕಪ್ ಜರುಗಲಿದೆ. ಅಕ್ಟೋಬರ್ ನವೆಂಬರ್ ನಡುವೆ ಜರುಗಲಿರುವ ಈ ಟೂರ್ನಿಯನ್ನು ಸೌತ್ ಆಫ್ರಿಕಾ, ನಮೀಬಿಯಾ ಹಾಗೂ ಝಿಂಬಾಬ್ವೆ ಜಂಟಿಯಾಗಿ ಆಯೋಜಿಸಲಿದೆ.

**ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್:** 2027ರ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಪಂದ್ಯವು ಜೂನ್ ತಿಂಗಳಲ್ಲಿ ನಡೆಯಲಿದೆ. ಈ ಸರಣಿಯ ಫೈನಲ್ ಪಂದ್ಯಕ್ಕೆ ಇಂಗ್ಲೆಂಡ್‌ನ ಲಾರ್ಡ್ಸ್ ಮೈದಾನ ಆತಿಥ್ಯವಹಿಸಲಿದೆ.

**ವಿರಾಟ್ ಕೊಹ್ಲಿ-ರೋಹಿತ್ ಶರ್ಮಾಗೆ ಉತ್ತಮ ಅವಕಾಶ:** ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಈವರೆಗೆ ಏಕದಿನ ವಿಶ್ವಕಪ್ ಗೆದ್ದಿಲ್ಲ. ಇದೀಗ ಒನ್‌ಡೇ ಕ್ರಿಕೆಟ್‌ನಲ್ಲಿ ಮುಂದುವರೆಯುವುದಾಗಿ ತಿಳಿಸಿರುವ ಹಿಟ್‌ಮ್ಯಾನ್ 2027 ರಲ್ಲಿ ಕಣಕ್ಕಿಳಿದರೆ ಏಕದಿನ ವಿಶ್ವಕಪ್ ಕನಸನ್ನು ಈಡೇರಿಸಿಕೊಳ್ಳಬಹುದು.



# ಏನಾಯ್ತು ದ್ರಾವಿಡ್‌ಗೆ

ಕಾಲಿಗೆ ಗಾಯ ಮಾಡಿಕೊಂಡ ಗೋಡೆ..!

ರಾಜಸ್ಥಾನ ರಾಯಲ್ಸ್ ತಂಡದ ಮುಖ್ಯ ಕೋಚ್ ರಾಹುಲ್ ದ್ರಾವಿಡ್ ಅವರು ಐಪಿಎಲ್ 2025 ಕ್ಕೂ ಮುನ್ನ ಗಾಯಗೊಂಡಿದ್ದಾರೆ. ಬೆಂಗಳೂರಿನಲ್ಲಿ ಕ್ರಿಕೆಟ್ ಆಡುವಾಗ ಕಾಲಿಗೆ ಗಾಯವಾಗಿ ಪ್ಲಾಸ್ಟರ್ ಹಾಕಿಸಿಕೊಂಡಿದ್ದಾರೆ. ಆದರೂ, ಅವರು ಬುಧವಾರ ಜೈಪುರದಲ್ಲಿ ತಂಡವನ್ನು ಸೇರಿಕೊಳ್ಳುವ ನಿರೀಕ್ಷೆಯಿದೆ. ರಾಜಸ್ಥಾನ ರಾಯಲ್ಸ್ ತಂಡವು ಈ ಸುದ್ದಿಯನ್ನು ತನ್ನ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದೆ. 2025 ರ ಐಪಿಎಲ್‌ನಲ್ಲಿ ರಾಜಸ್ಥಾನ ರಾಯಲ್ಸ್ ತಂಡವನ್ನು ಚಾಂಪಿಯನ್ ಮಾಡುವ ಜವಾಬ್ದಾರಿಯನ್ನು ವಹಿಸಿಕೊಂಡಿದ್ದ ಮುಖ್ಯ ಕೋಚ್ ರಾಹುಲ್ ದ್ರಾವಿಡ್‌ಗೆ ಸಂಬಂಧಿಸಿದಂತೆ ಆಘಾತಕ್ಕಾರಿ ಮಾಹಿತಿಯೊಂದು ಹೊರಬಿದ್ದಿದೆ. ಐಪಿಎಲ್ ಆರಂಭಕ್ಕೆ ಇನ್ನು ಕೇವಲ 10 ದಿನಗಳು ಬಾಕಿ ಇರುವಾಗ ರಾಜಸ್ಥಾನ ತಂಡದ ಮುಖ್ಯ ಕೋಚ್ ಆಗಿರುವ ರಾಹುಲ್ ದ್ರಾವಿಡ್ ಗಾಯಗೊಂಡಿದ್ದು, ಕಾಲಿಗೆ ಪ್ಲಾಸ್ಟರ್ ಹಾಕಲಾಗಿದೆ. ರಾಜಸ್ಥಾನ ರಾಯಲ್ಸ್ ತಂಡವು ದ್ರಾವಿಡ್ ಅವರ ಕಾಲಿಗೆ ಗಾಯವಾಗಿರುವ ಫೋಟೋವನ್ನು ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್ ಮಾಡಿದ್ದು, ಕ್ರಿಕೆಟ್ ಆಡುವಾಗ ದ್ರಾವಿಡ್ ಗಾಯಗೊಂಡಿದ್ದಾರೆ ಎಂಬ ಮಾಹಿತಿಯನ್ನು ನೀಡಿದೆ.

**ದ್ರಾವಿಡ್ ಕಾಲಿಗೆ ಗಾಯ**

ರಾಹುಲ್ ದ್ರಾವಿಡ್ ಅವರು ಕಾಲಿಗೆ ಪ್ಲಾಸ್ಟರ್ ಹಾಕಿಕೊಂಡು ಕುರ್ಚಿಯ ಮೇಲೆ ಕುಳಿತಿರುವ ಫೋಟೋವನ್ನು ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ರಾಜಸ್ಥಾನ್ ರಾಯಲ್ಸ್ ಫ್ರಾಂಚೈಸಿ, ರಾಹುಲ್ ಹೇಗೆ ಈ ಗಾಯ ಮಾಡಿಕೊಂಡರು ಎಂಬ ಮಾಹಿತಿಯನ್ನು ನೀಡಿದೆ. ಫ್ರಾಂಚೈಸಿ ನೀಡಿರುವ ಹೇಳಿಕೆಯ ಪ್ರಕಾರ, ಕನ್ನಡಿಗ ರಾಹುಲ್ ದ್ರಾವಿಡ್ ಬೆಂಗಳೂರಿನಲ್ಲಿ ಕ್ರಿಕೆಟ್ ಆಡುವಾಗ ಗಾಯಗೊಂಡಿದ್ದು, ಮುಖ್ಯ ಕೋಚ್ ರಾಹುಲ್ ದ್ರಾವಿಡ್ ವೇಗವಾಗಿ ಚೇತರಿಸಿಕೊಳ್ಳುತ್ತಿದ್ದಾರೆ.

ಅವರು ಬುಧವಾರ ಜೈಪುರದಲ್ಲಿ ತಂಡವನ್ನು ಸೇರಿಕೊಳ್ಳಲಿದ್ದಾರೆ ಎಂದು ಬರೆದುಕೊಂಡಿದೆ. ಮತ್ತೆ ರಾಜಸ್ಥಾನ್ ಫ್ರಾಂಚೈಸಿ ಸೇರಿದ ದ್ರಾವಿಡ್ ವಾಸ್ತವವಾಗಿ ಈ ಮೊದಲು ರಾಜಸ್ಥಾನ್ ರಾಯಲ್ಸ್ ತಂಡದಲ್ಲಿ ಆಟಗಾರನಾಗಿ ಹಾಗೂ ಮುಖ್ಯ ಕೋಚ್ ಆಗಿ ಸೇವೆ ಸಲ್ಲಿಸಿದ್ದ ರಾಹುಲ್ ದ್ರಾವಿಡ್, ಟೀಂ ಇಂಡಿಯಾ ಮುಖ್ಯ ಕೋಚ್ ಆಗಿ ಆಯ್ಕೆಯಾದ ಬಳಿಕ ಐಪಿಎಲ್‌ನಿಂದ ದೂರ ಉಳಿದಿದ್ದರು.



# ಟೀಮ್ ಇಂಡಿಯಾಗೆ ಪಾಕ್ ಕ್ರಿಕೆಟಿಗನ ಸವಾಲು

ಭಾರತ ಮತ್ತು ಪಾಕಿಸ್ತಾನ್ ಈವರೆಗೆ ಒಟ್ಟು 208 ಪಂದ್ಯಗಳಲ್ಲಿ ಮುಖಾಮುಖಿಯಾಗಿವೆ. ಈ ವೇಳೆ ಪಾಕಿಸ್ತಾನ್ ತಂಡ 88 ಮ್ಯಾಚ್‌ಗಳಲ್ಲಿ ಜಯ ಸಾಧಿಸಿದರೆ, ಭಾರತ ತಂಡ 76 ಪಂದ್ಯಗಳನ್ನು ಗೆದ್ದುಕೊಂಡಿದೆ. ಆದರೆ ಕಳೆದೊಂದು ದಶಕದಿಂದ ಪಾಕಿಸ್ತಾನ್ ವಿರುದ್ಧ ಟೀಮ್ ಇಂಡಿಯಾ ಪಾರುಪತ್ಯ ಮರೆಯುತ್ತಾ ಬರುತ್ತಿದೆ. ಹೀಗಾಗಿಯೇ ಉಭಯ ತಂಡಗಳ ನಡುವಣ ದ್ವಿಪಕ್ಷೀಯ ಸರಣಿ ಮೂಲಕ ಯಾರು ಬಲಿಷ್ಠ ಎಂಬುದು ನಿರ್ಧಾರವಾಗಲಿ ಎಂದು ಸಕ್ಲೇನ್ ಮುಷ್ತಾಕ್ ಆಗ್ರಹಿಸಿದ್ದಾರೆ. ಪಾಕಿಸ್ತಾನ್ ವಿರುದ್ಧದ ಟೀಮ್ ಇಂಡಿಯಾದ ಪಾರುಪತ್ಯ ಚಾಂಪಿಯನ್ಸ್ ಟ್ರೋಫಿಯಲ್ಲೂ ಮುಂದುವರೆದಿದೆ. ಆದರೆ ಈ ಬಾರಿ ಪಾಕ್ ಪಡೆಯನ್ನು ಭಾರತೀಯರು ಅತ್ಯಂತ ಹೀನಾಯವಾಗಿ ಸೋಲಿಸಿದ್ದರು. ಈ ಸೋಲನ್ನು ಅರಗಿಸಿಕೊಳ್ಳಲು ಪಾಕಿಸ್ತಾನದ ಮಾಜಿ ಆಟಗಾರರಿಗೂ ಕೂಡ ಸಾಧ್ಯವಾಗುತ್ತಿಲ್ಲ ಎಂಬುದು ವಿಶೇಷ. ಚಾಂಪಿಯನ್ಸ್ ಟ್ರೋಫಿಯಲ್ಲಿನ ಟೀಮ್ ಇಂಡಿಯಾದ ಉತ್ತಮ ಪ್ರದರ್ಶನದ ಬಳಿಕ ಮಾತನಾಡಿದ ಪಾಕ್ ತಂಡದ ಮಾಜಿ ಸ್ಪಿನ್ನರ್ ಸಕ್ಲೇನ್ ಮುಷ್ತಾಕ್, ನಾವು ರಾಜಕೀಯ ವಿಷಯಗಳನ್ನು ಬದಿಗಿಟ್ಟರೆ, ಅವರ ಆಟಗಾರರು ತುಂಬಾ ಒಳ್ಳೆಯವರು. ಅಲ್ಲದೆ ಅವರು ಉತ್ತಮ ಕ್ರಿಕೆಟ್ ಆಡುತ್ತಿದ್ದಾರೆ. ಆದರೆ ಅವರು ಪಾಕಿಸ್ತಾನ್ ವಿರುದ್ಧ ಹೆಚ್ಚಿನ ಪಂದ್ಯಗಳನ್ನಾಡದಿರುವುದೇ ಸಮಸ್ಯೆಯಾಗಿರುವುದು. ಒಂದು ವೇಳೆ ಟೀಮ್ ಇಂಡಿಯಾ ನಿಜವಾಗಿಯೂ ಉತ್ತಮ ತಂಡವಾಗಿದ್ದರೆ, ಪಾಕಿಸ್ತಾನದ ವಿರುದ್ಧ 10 ಟೆಸ್ಟ್, 10 ಏಕದಿನ ಮತ್ತು 10 ಟಿ20 ಪಂದ್ಯಗಳನ್ನು ಆಡಲಿ, ನೋಡೋಣ.

# ಭರ್ಜರಿ ಮುಂಬಡ್ತಿ ಪಡೆದ ರೋಹಿತ್, ಜಾರಿದ ಕೊಹ್ಲಿ..!

5ನೇ ಸ್ಥಾನಕ್ಕೆ ಕುಸಿದ ಕೊಹ್ಲಿ


ಅರಬ್ ದೇಶದಲ್ಲಿ ನಡೆದ 2025ರ ಚಾಂಪಿಯನ್ಸ್ ಟ್ರೋಫಿಯನ್ನು ಗೆದ್ದು ಬೀಗಿದ ಟೀಂ ಇಂಡಿಯಾ ಆಟಗಾರರು ಇದೀಗ ಐಸಿಸಿ ಏಕದಿನ ರ್ಯಾಂಕಿಂಗ್‌ನಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ರೋಹಿತ್ ಶರ್ಮಾ, ಶುಭ್‌ಮನ್ ಗಿಲ್ ಮತ್ತು ವಿರಾಟ್ ಕೊಹ್ಲಿ ಏಕದಿನ ಶ್ರೇಯಾಂಕದಲ್ಲಿ ಟಾಪ್ 5 ರೊಳಗೆ ಸ್ಥಾನ ಪಡೆದಿದ್ದಾರೆ. ಗಿಲ್ ಮೊದಲ ಸ್ಥಾನದಲ್ಲಿದ್ದರೆ, ರೋಹಿತ್ ಮೂರನೇ ಮತ್ತು ಕೊಹ್ಲಿ ಐದನೇ ಸ್ಥಾನದಲ್ಲಿದ್ದಾರೆ. ಅರಬ್ಬರ ನಾಡಿನಲ್ಲಿ ನಡೆದಿದ್ದ 2025 ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಅಜೇಯವಾಗಿ ಫೈನಲ್‌ಗೇರಿ, ಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ಮಣಿಸಿ ಚಾಂಪಿಯನ್ ಪಟ್ಟವನ್ನು ಅಲಂಕರಿಸಿದ್ದ ಟೀಂ ಇಂಡಿಯಾ, ನಿನ್ನೆಯಷ್ಟೇ ಭಾರತಕ್ಕೆ ಬಂದಿಳಿದಿದೆ.

ತಂಡದ ಈ ಶ್ರೇಷ್ಠ ಸಾಧನೆಗೆ ಅದರ ಸಾಂಘಿಕ ಪ್ರದರ್ಶನವೇ ಪ್ರಮುಖ ಕಾರಣವಾಗಿತ್ತು. ಬ್ಯಾಟಿಂಗ್, ಬೌಲಿಂಗ್ ಸೇರಿದಂತೆ ಎಲ್ಲಾ ವಿಭಾಗದಲ್ಲೂ ಪ್ರತಿಯೊಬ್ಬ ಆಟಗಾರನೂ ತನ್ನ ಅತ್ಯುತ್ತಮ ಪ್ರದರ್ಶನ ನೀಡಿದ ಫಲವಾಗಿಯೇ ಟೀಂ ಇಂಡಿಯಾ 2013 ರ ಬಳಿಕ ಚಾಂಪಿಯನ್ಸ್ ಟ್ರೋಫಿಗೆ ಮುತ್ತಿಕ್ಕಿತ್ತು. ಇದೀಗ ಚಾಂಪಿಯನ್ಸ್ ಟ್ರೋಫಿಯಲ್ಲಿನ ಅಮೋಘ ಪ್ರದರ್ಶನಕ್ಕೆ ಐಸಿಸಿ ಕೂಡ ಟೀಂ ಇಂಡಿಯಾ ಆಟಗಾರರಿಗೆ ಭರ್ಜರಿ ಗಿಫ್ಟ್ ನೀಡಿದೆ. ವಾಸ್ತವವಾಗಿ ಇಂದು ಬಿಡುಗಡೆಯಾಗಿರುವ ಐಸಿಸಿ ನೂತನ ಏಕದಿನ ರ್ಯಾಂಕಿಂಗ್‌ನಲ್ಲಿ ಟೀಂ ಇಂಡಿಯಾದ ಮೂವರು ಆಟಗಾರರು ಟಾಪ್ ಐದರಲ್ಲಿ ಕಾಣಿಸಿಕೊಂಡಿದ್ದಾರೆ. ಈ ಮೂವರು ಆಟಗಾರರಲ್ಲಿ ತಂಡದ ನಾಯಕ ರೋಹಿತ್ ಶರ್ಮಾ, ಉಪನಾಯಕ ಶುಭ್‌ಮನ್ ಗಿಲ್ ಹಾಗೂ ಮಾಜಿ ನಾಯಕ ವಿರಾಟ್ ಕೊಹ್ಲಿ ಸೇರಿದ್ದಾರೆ. ಚಾಂಪಿಯನ್ಸ್ ಟ್ರೋಫಿಯ ಫೈನಲ್‌ನಲ್ಲಿ ರೋಹಿತ್ ಶರ್ಮಾ ಅದ್ಭುತ ಬ್ಯಾಟಿಂಗ್ ಮಾಡುವ ಮೂಲಕ ತಂಡವನ್ನು ಚಾಂಪಿಯನ್ ಆಗಿ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

ಇದೀಗ ಐಸಿಸಿ ಏಕದಿನ ಶ್ರೇಯಾಂಕದಲ್ಲಿ ಅದರ ಲಾಭ ಪಡೆದುಕೊಂಡಿರುವ ರೋಹಿತ್ ಶರ್ಮಾ ವಿರಾಟ್ ಕೊಹ್ಲಿ ಹಾಗೂ ಹೆನ್ರಿಚ್ ಕ್ಲಾಸೆನ್ ಅವರನ್ನು ಹಿಂದಿಕ್ಕಿ 756 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಮೂರನೇ ಸ್ಥಾನಕ್ಕೇರಿದ್ದಾರೆ. ಚಾಂಪಿಯನ್ಸ್ ಟ್ರೋಫಿಯಲ್ಲಿ ಹೇಳಿಕೊಳ್ಳುವಂತಹ ಪ್ರದರ್ಶನ ನೀಡದಿದ್ದರೂ, ತಂಡಕ್ಕೆ ಬೇಕಾದ ಆರಂಭ ನೀಡುವಲ್ಲಿ ಕೊಂಚ ಸಮಾಧಾನಕರ ಪ್ರದರ್ಶನ ನೀಡಿದ್ದ ತಂಡದ ಉಪನಾಯಕ ಶುಭ್‌ಮನ್ ಗಿಲ್ 784 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದ್ದಾರೆ. ಉಳಿದಂತೆ ಪಾಕಿಸ್ತಾನದ ಮಾಜಿ ನಾಯಕ ಬಾಬರ್ ಆಝಂ 770 ರೇಟಿಂಗ್ ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದರೆ, ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದಲ್ಲಿ ಒಂದಂಕಿಗೆ ಸುಸ್ತಾಗಿದ್ದ ವಿರಾಟ್ ಕೊಹ್ಲಿ ಅದರ ಪರಿಣಾಮವೆಂಬಂತೆ ಒಂದು ಸ್ಥಾನ ಕುಸಿದು 5 ನೇ ಸ್ಥಾನಕ್ಕೆ ಜಾರಿದ್ದಾರೆ.



# ಶುಭ್‌ಮನ್ ಗಿಲ್‌ಗೆ ಒಲಿದ ಐಸಿಸಿಯ ವಿಶೇಷ ಪ್ರಶಸ್ತಿ



ಉಪನಾಯಕನ ಜವಬ್ದಾರಿ ಹೊತ್ತು ಟೀಂ ಇಂಡಿಯಾವನ್ನು ಚಾಂಪಿಯನ್ಸ್ ಟ್ರೋಫಿಯಲ್ಲಿ ಮುನ್ನಡೆಸಿದ್ದ ಭವಿಷ್ಯದ ನಾಯಕ ಶುಭ್‌ಮನ್ ಗಿಲ್‌ಗೆ ಐಸಿಸಿಯಿಂದ ಭರ್ಜರಿ ಬಹುಮಾನ ಸಿಕ್ಕಿದೆ. ಭಾರತದ ಯುವ ಆರಂಭಿಕ ಆಟಗಾರ ಶುಭ್‌ಮನ್ ಗಿಲ್ ಇದೀಗ ಐಸಿಸಿ ನೀಡುವ ಫೆಬ್ರವರಿ ತಿಂಗಳ ಆಟಗಾರ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಚಾಂಪಿಯನ್ಸ್ ಟ್ರೋಫಿಯಲ್ಲಿ ಶುಭ್‌ಮನ್ ಗಿಲ್ ಅವರ ಪ್ರದರ್ಶನ ಅಷ್ಟು ಉತ್ತಮವಾಗಿಲ್ಲದಿದ್ದರೂ, ಫೆಬ್ರವರಿ ತಿಂಗಳಲ್ಲಿ ಗಿಲ್ ಬ್ಯಾಟ್ ಅಬ್ಬರಿಸಿತ್ತು. ಹೀಗಾಗಿ ಶುಭ್‌ಮನ್ ಗಿಲ್, ಫೆಬ್ರವರಿ ತಿಂಗಳ ಆಟಗಾರ ಪ್ರಶಸ್ತಿಗೆ ನಾಮನಿರ್ದೇಶನಗೊಂಡಿದ್ದಾರೆ. ಈ ಪ್ರಶಸ್ತಿ ರೇಸ್‌ನಲ್ಲಿ ಗಿಲ್ ಜೊತೆಗೆ ಸ್ಟೀವ್ ಸ್ಮಿತ್ ಮತ್ತು ಗ್ಲೆನ್ ಫಿಲಿಪ್ಸ್ ಕೂಡ ಇದ್ದರು.

ಆದರೆ ಗಿಲ್ ಸ್ಮಿತ್ ಮತ್ತು ಫಿಲಿಪ್ಸ್ ಅವರನ್ನು ಸೋಲಿಸಿ ಐಸಿಸಿ ಫೆಬ್ರವರಿ ತಿಂಗಳ ಆಟಗಾರ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದ್ದಾರೆ. ಫೆಬ್ರವರಿಯಲ್ಲಿ ಗಿಲ್, ಆಡಿದ 5 ಏಕದಿನ ಪಂದ್ಯಗಳಲ್ಲಿ 101.50 ಸರಾಸರಿಯಲ್ಲಿ 409 ರನ್ ಕಲೆಹಾಕಿದ್ದರು. ಇಂಗ್ಲೆಂಡ್ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಅವರು ಸತತ ಮೂರು ಅರ್ಧಶತಕಗಳನ್ನು ಬಾರಿಸಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966